ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೮

# ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೆಯ ಅಧಿವೇಶನ**

**ಮಂಗಳವಾರ, ದಿನಾಂಕ : ೨೭ನೇ ಜನವರಿ, ೨೦೨೬**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

## ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ನೀಡಿರುವ ಬಗ್ಗೆ

**ಶ್ರೀ ಎಂ. ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧ (೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ತಾಲ್ಲೂಕು ನರಸಪುರ ಮತ್ತು ವೇಮಗಲ್ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ, ಅವು ಯಾವುವು ; (ಸ್ಥಾಪನೆಯಾದ ವರ್ಷವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಸದರಿ ಕೈಗಾರಿಕೆಗಳಲ್ಲಿ ಎಷ್ಟು ಜನ ಸ್ಥಳೀಯರಿಗೆ ಕೆಲಸ ನೀಡಲಾಗಿದೆ, ಸ್ಥಳೀಯರಿಗೆ ಕೆಲಸ ನೀಡುವಂತೆ ಸರ್ಕಾರದ ಆದೇಶವನ್ನು ಪಾಲನೆ ಮಾಡದಿರುವುದು ಸರ್ಕಾರದ ಗಮನಕ್ಕಿದೆಯೇ ; ಹಾಗಿದ್ದಲ್ಲಿ, ಅಂತಹ ಕೈಗಾರಿಕೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ನರಸಪುರ ಕೈಗಾರಿಕಾ ಪ್ರದೇಶದಲ್ಲಿ ವಿಸ್ಟ್ರೋನ್, ಟಾಟಾ ಎಲೆಕ್ಟ್ರಾನಿಕ್ಸ್ ಸ್ಥಾಪನೆಗೊಂಡು ಎಷ್ಟು ವರ್ಷಗಳಾಗಿದೆ ; ಇವುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಹಾಗೂ ಕೋಲಾರ ಜಿಲ್ಲೆಯ ಸ್ಥಳೀಯರೆಷ್ಟು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ವಿಸ್ಟ್ರೋನ್. ಟಾಟಾ ಎಲೆಕ್ಟ್ರಾನಿಕ್ಸ್ ಕೈಗಾರಿಕೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಖಾಯಂಗೊಳಿಸಲು ಇರುವ ಮಾನದಂಡಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಉ) ವಿಸ್ಟ್ರೋನ್, ಟಾಟಾ ಎಲೆಕ್ಟ್ರಾನಿಕ್ಸ್ ಮತ್ತು ಇನ್ನಿತರ ಕೈಗಾರಿಕೆಗಳ ಕಾರ್ಮಿಕರಿಂದ ೩ ವರ್ಷಗಳ ಸೇವೆ ಪಡೆದು ಹಾಗೂ ಇನ್ನಿತರ ಕೈಗಾರಿಕೆಗಳಲ್ಲಿ ೧೧ ತಿಂಗಳ ಸೇವೆಯನ್ನು ಪಡೆದು ತದನಂತರ ಕರ್ತವ್ಯದಿಂದ ವಜಾಗೊಳಿಸುತ್ತಿರಲು ಕಾರಣವೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಅನಧಿಕೃತ ವಾಣಿಜ್ಯ ಸಂಕೀರ್ಣ ನಿರ್ಮಾಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨ (೦೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಶ್ರೀ. ನಾಗೇಶ್ವರಿ ಹೋಟೆಲ್ ಆಸ್ತಿ ಸಂಖ್ಯೆ ೨೧-೪೫೧ ಮತ್ತು ೨೧-೪೫೧/೧ರಲ್ಲಿ ವಸತಿ ವಿನ್ಯಾಸಕ್ಕೆ ಪರವಾನಿಗೆ ಪಡೆದುಕೊಂಡು ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಅನಧಿಕೃತ ನಿರ್ಮಾಣ ಮಾಡಿರುವ ಕಟ್ಟಡ ಮಾಲೀಕರು ಮತ್ತು ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮವೇನು ;

(ಇ) ಅಕ್ರಮವಾಗಿ ನಿರ್ಮಾಣ ಮಾಡಿರುವ ಕುರಿತು ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ವರದಿ ಸಲ್ಲಿಸಿದ್ದರು ಸರ್ಕಾರ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ? (ಮಾಹಿತಿ ನೀಡುವುದು)

## B.S.S.K ಸಕ್ಕರೆ ಕಾರ್ಖಾನೆ ಪ್ರಾರಂಭಿಸುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩ (೦೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಬಿ.ಎಸ್.ಎಸ್.ಕೆ ಸಕ್ಕರೆ ಕಾರ್ಖಾನೆ ಪ್ರಾರಂಭಗೊಳ್ಳದಿರುವುದರಿಂದ ಜಿಲ್ಲೆಯ ರೈತರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಸಕ್ಕರೆ ಕಾರ್ಖಾನೆಗೆ ಸರ್ಕಾರದ ವತಿಯಿಂದ ಆರ್ಥಿಕ ನೆರವನ್ನು ಪಡೆದು ಸಕ್ಕರೆ ಕಾರ್ಖಾನೆ ಪ್ರಾರಂಭ ಮಾಡಬಹುದಲ್ಲವೇ ;

(ಇ) ಸಕ್ಕರೆ ಕಾರ್ಖಾನೆ ಗುತ್ತಿಗೆ ನೀಡುವ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಈ) ಸಕ್ಕರೆ ಕಾರ್ಖಾನೆ ಯಾವಾಗ ಪ್ರಾರಂಭ ಮಾಡಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ಸಕ್ಕರೆ ಕಾರ್ಖಾನೆ ಬಿಲ್ಲು ಪಾವತಿ ಮಾಡದೇ ಇರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪ (೦೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಗೆ ರೈತರು ಕಬ್ಬು ಸರಬರಾಜು ಮಾಡುತ್ತಿದ್ದು, ಸುಮಾರು ೨ ತಿಂಗಳುಗಳಿಂದ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ರೈತರಿಗೆ ಕಬ್ಬಿನ ಬಿಲ್ಲಿನ ಮೊತ್ತ

ಪಾವತಿ ಮಾಡದಿರುವುದರಿಂದ ರೈತರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರೈತರ ಕಬ್ಬಿನ ಬಿಲ್ಲಿನ ಮೊತ್ತವನ್ನು ಶೀಘ್ರ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಸಬ್ಸಿಡಿ ಹಣ ಬಿಡುಗಡೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫ (೦೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ತೋಟಗಾರಿಕೆ ಇಲಾಖೆಯಲ್ಲಿ ಹನಿ ನೀರಾವರಿ ಯೋಜನೆ ಅಡಿಯಲ್ಲಿ ಸಬ್ಸಿಡಿ ಸಂಬಂಧ ಆನ್‌ಲೈನ್ ಮುಖಾಂತರ ಸಾವಿರಾರು ರೈತರು ಅರ್ಜಿ ಸಲ್ಲಿಸಿದ್ದರು ಇಲ್ಲಿಯವರೆಗೆ ಸಬ್ಸಿಡಿ ಹಣ ಬಿಡುಗಡೆಯಾಗದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ; ಯಾವಾಗ ರೈತರಿಗೆ ಸಬ್ಸಿಡಿ ಹಣ ಬಿಡುಗಡೆ ಮಾಡಲಾಗುವುದು ? (ಮಾಹಿತಿ ನೀಡುವುದು)

## ಬ್ಯಾನರ್ ಅಳವಡಿಸುವ ನಿಯಮ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬ (೦೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರದ ರಸ್ತೆಗಳಲ್ಲಿ ಬ್ಯಾನರ್ ಅಳವಡಿಸಲು ಇರುವ ನಿಯಮಗಳೇನು ; (ವಿವರ ನೀಡುವುದು)

(ಆ) ಬಳ್ಳಾರಿ ಬ್ಯಾನರ್ ವಿಷಯದಲ್ಲಾದ ಗಲಾಟೆಗೆ ಇಲಾಖೆಯ ಬೇಜವಾಬ್ದಾರಿ ಕಾರಣ ಎಂಬುದರ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಬ್ಯಾನರ್, ಪೋಸ್ಟರ್, ಬಾವುಟ ಹಾಗೂ ಜಾಹೀರಾತು ಫಲಕಗಳನ್ನು ಅಳವಡಿಸುವಾಗ ಇಲಾಖೆಯಿಂದ ಶುಲ್ಕ ಸಂಗ್ರಹಿಸಲಾಗುತ್ತಿದೆಯೇ ; ಇಲ್ಲವಾದಲ್ಲಿ ಸಂಗ್ರಹಿಸದಿರಲು ಕಾರಣವೇನು ;

(ಈ) ಅಳವಡಿಸಲಾದ ಬ್ಯಾನರ್, ಪೋಸ್ಟರ್, ಬಾವುಟ ಹಾಗೂ ಜಾಹೀರಾತು ಫಲಕಗಳನ್ನು ತೆರವುಗೊಳಿಸುವ ಪೌರಕಾರ್ಮಿಕರಿಗೆ ಹೆಚ್ಚುವರಿ ಕೆಲಸಕ್ಕೆ ಹೆಚ್ಚುವರಿ ವೇತನ ನೀಡುವ ಕುರಿತು ಸರಕಾರದ ನಿಲುವೇನು ; (ವಿವರ ನೀಡುವುದು)

(ಉ) ಅನುಮತಿ ಪಡೆಯದೆ ಅಕ್ರಮವಾಗಿ ಬ್ಯಾನರ್, ಪೋಸ್ಟರ್, ಬಾವುಟ ಹಾಗೂ ಜಾಹೀರಾತು ಫಲಕಗಳನ್ನು ಅಳವಡಿಸುವವರ ಮೇಲೆ ಕೈಗೊಂಡ ಕ್ರಮಗಳೇನು ; ಈ ಅಕ್ರಮಗಳಿಗೆ ಭಾರಿ ಪ್ರಮಾಣದ ದಂಡ ವಿಧಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಹಟ್ಟಿ ಚಿನ್ನದ ಗಣಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭ (೦೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಟ್ಟಿ ಚಿನ್ನದ ಗಣಿಯು ೬೫ ಎಂ ಎಂ ಫೋರ್ಜ್ಡ್ ಸ್ಟೀಲ್ ಗ್ರೈಂಡಿಂಗ್ ಮೀಡಿಯಾ ಬಾಲ್ಸ್ ಸರಬರಾಜಿಗೆ ಯಾವ ಕಂಪನಿಗೆ ಟೆಂಡರ್ ನೀಡಲಾಗಿದೆ ; ಮಹಿಳಾ IAS ಅಧಿಕಾರಿಯ ಪತಿಯವರು ಈ ಕಂಪನಿಗಳಿಗೆ ಅತ್ಯಾಸಕ್ತಿವಹಿಸಿದ್ದಾರೆ ಎಂಬ ಕಾರಣಕ್ಕಾಗಿ ನೀಡಲಾಗಿದೆಯೇ ; (ಕಂಪನಿ ಹೆಸರಿನೊಂದಿಗೆ ವಿವರ ನೀಡುವುದು)

(ಆ) ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಕಾರ್ಯದರ್ಶಿ ನೇತೃತ್ವದ ಪುನರ್ ಪರಿಶೀಲನಾ ಸಮಿತಿಯ ಮುಂದೆ ಎಷ್ಟು ಕಂಪನಿಗಳ ಪುನರ್ ಪರಿಶೀಲನಾ ಅರ್ಜಿಗಳು ಬಾಕಿ ಇವೆ ; ಸದರಿ ಕಂಪನಿಗಳು ಯಾವ ದಿನಾಂಕದಂದು ಅರ್ಜಿ ಸಲ್ಲಿಸಿದ್ದವು ; (ಸಮಗ್ರ ವಿವರ ನೀಡುವುದು)

(ಇ) ಹಟ್ಟಿ ಚಿನ್ನದ ಗಣಿಯು ೬೫ ಎಂ ಎಂ ಫೋರ್ಜ್ಡ್ ಸ್ಟೀಲ್ ಗ್ರೈಂಡಿಂಗ್ ಮೀಡಿಯಾ ಬಾಲ್ಸ್ ಸರಬರಾಜಿಗೆ ಎಷ್ಟು ಮೊತ್ತದ ಟೆಂಡರ್ ಕರೆಯಲಾಗಿತ್ತು ; ಈ ಅನರ್ಹ ಕಂಪನಿಗಳಿಗೆ ಟೆಂಡರ್‌ನಲ್ಲಿ ಅವ್ಯವಹಾರ ನಡೆದಿದೆಯೇ ; (ವಿವರ ನೀಡುವುದು)

(ಈ) ಕಾರ್ಯದರ್ಶಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಮುಂದೆ ಇರುವ ಪುನರ್ ಪರಿಶೀಲನಾ ಅರ್ಜಿಗಳನ್ನು ಯಾವ ರೀತಿಯಾಗಿ ವಿಲೇವಾರಿ ಮಾಡಲಾಗಿದೆ ? (KTTP Act 1999 ರ ಪ್ರತಿ ನೀಡುವುದು)

## ಹಟ್ಟಿ ಚಿನ್ನದ ಗಣಿಯ ಚಿನ್ನದ ಮಾರಾಟ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮ (೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಹಟ್ಟಿ ಚಿನ್ನದ ಗಣಿಯಿಂದ ಉತ್ಪಾದನೆಗೊಂಡ ಚಿನ್ನವನ್ನು ಯಾವ ರೀತಿ ಮಾರಾಟ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಹಟ್ಟಿ ಚಿನ್ನದ ಗಣಿಯಿಂದ ಚಿನ್ನ ಖರೀದಿಸಲು ಎಷ್ಟು ಬಾರಿ ಟೆಂಡರ್ ಕರೆಯಲಾಗಿದೆ; ಭಾಗಿಯಾಗಿದ್ದ ಟೆಂಡರ್‌ದಾರರ ಸಂಖ್ಯೆ ಎಷ್ಟು ; ಯಾರಿಗೆ ಟೆಂಡರ್ ನೀಡಲಾಗಿದೆ ;

(ಇ) ಟೆಂಡರ್‌ದಾರರ ಹೆಸರಿನೊಂದಿಗೆ ಎಷ್ಟು ಮೊತ್ತದ ಬಿಡ್ ಕರೆಯಲಾಗಿತ್ತು ; (ಸಮಗ್ರ ವಿವರ ನೀಡುವುದು)

(ಈ) ಹಟ್ಟಿ ಚಿನ್ನದ ಗಣಿಯಿಂದ ಚಿನ್ನವನ್ನು ಯಾವ ರೀತಿ ಮಾರಾಟ ಮಾಡಲಾಗುತ್ತದೆ ; ಸದರಿ ಮಾರಟಕ್ಕೆ ಎಷ್ಟು ಮೊತ್ತವನ್ನು ನಿಗದಿಪಡಿಸಲಾಗಿತ್ತು ? (ವಿವರ ನೀಡುವುದು)

## ಕಬ್ಬು ಪೂರೈಸಿರುವ ರೈತರಿಗೆ ಬಾಕಿ ಹಣ ಪಾವತಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯ (೧೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಹಂಗಾಮಿನಲ್ಲಿ ಎಷ್ಟು ಟನ್ ಕಬ್ಬು ನುರಿಯಲಾಗಿದೆ ; ಸಕ್ಕರೆ ಕಾರ್ಖಾನೆಗಳು ಪ್ರತಿ ಟನ್ ಕಬ್ಬಿಗೆ ಸರ್ಕಾರ ಸೂಚಿಸಿದ್ದ ಹಣವನ್ನು ನೀಡಿವೆಯೇ ; ಪ್ರಸಕ್ತ ಸಾಲಿನಲ್ಲಿ ಕಬ್ಬು ಪೂರೈಕೆ ಮಾಡಿರುವ ರೈತರಿಗೆ ಕಬ್ಬಿನ ಹಣ ಪೂರ್ಣ ಪ್ರಮಾಣದಲ್ಲಿ ಪಾವತಿ ಆಗಿದೆಯೇ ; ಪಾವತಿಯಾಗಲು ಬಾಕಿಯಿರುವ ಮೊತ್ತ ಎಷ್ಟು ; (ಜಿಲ್ಲಾವಾರು ವಿವರವನ್ನು ಕಾರ್ಖಾನೆ ಹೆಸರು ಸಹಿತ ನೀಡುವುದು)

(ಆ) ಕಬ್ಬು ನುರಿಯುವುದರಿಂದ ಯಾವ ಯಾವ ಉಪ ಉತ್ಪನ್ನಗಳು ದೊರೆಯುತ್ತವೆ ; ಸಕ್ಕರೆ ಮಾರಾಟದಿಂದ ಮತ್ತು ಉಪ ಉತ್ಪನ್ನಗಳ ಮಾರಾಟದಿಂದ ಕಾರ್ಖಾನೆಗೆ ಬರುವ ಆದಾಯ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಸಕ್ಕರೆ ಕಾರ್ಖಾನೆಗಳಿಂದ (ಸರ್ಕಾರದ ಒಡೆತನದ ಕಾರ್ಖಾನೆಗಳೂ ಸೇರಿದಂತೆ) ರೈತರಿಗೆ ಪಾವತಿ ಆಗಬೇಕಿರುವ ಬಾಕಿ ಮೊತ್ತ ಎಷ್ಟು; ಬಾಕಿ ಮೊತ್ತ ಪಾವತಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ರಾಜ್ಯದಲ್ಲಿ ಎಷ್ಟು ಖಾಸಗಿ ಹಾಗೂ ಸರ್ಕಾರಿ ಸಕ್ಕರೆ ಕಾರ್ಖಾನೆಗಳು ನಷ್ಟದಲ್ಲಿವೆ ; ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಪಾವತಿ ಆಗಬೇಕಿರುವ ಬಾಕಿ ಮೊತ್ತ ಎಷ್ಟು; ಈ ಮೊತ್ತವನ್ನು ರೈತರಿಗೆ ಪಾವತಿಸಲು ಸರ್ಕಾರದ ಕ್ರಮವೇನು ;

(ಉ) ಕಬ್ಬಿಗೆ ದರ ನಿಗದಿ ವಿಚಾರದಲ್ಲಿ ರೈತರು ಮತ್ತು ಸಕ್ಕರೆ ಕಾರ್ಖಾನೆಗಳು ಸರ್ಕಾರದ ಮುಂದೆ ಇಟ್ಟಿದ್ದ ಬೇಡಿಕೆಗಳೇನು ; ಇವರ ಎಷ್ಟು ಬೇಡಿಕೆಗಳನ್ನು ಸರ್ಕಾರ ಒಪ್ಪಿದೆ ; ಸರ್ಕಾರ ನಿಗದಿ ಮಾಡಿದ್ದ ಮೊತ್ತವನ್ನು ನೀಡಲು ಕೆಲವು ಕಾರ್ಖಾನೆಗಳು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ವಿಚಾರದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಊ) ಇತ್ತೀಚೆಗೆ ನಡೆದ ರೈತರ ಪ್ರತಿಭಟನೆ ವೇಳೆ ಕಬ್ಬು ಲಾರಿಗಳಿಗೆ ಬೆಂಕಿ ಬಿದ್ದು ರೈತರಿಗೆ ಆಗಿರುವ ನಷ್ಟ ಎಷ್ಟು; ಈ ನಷ್ಟವನ್ನು ಭರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

# ಹನಿ ನೀರಾವರಿ ಯೋಜನೆಯಡಿ ಸೌಲಭ್ಯ ಪಡೆದಿರುವ ರೈತರಿಗೆ ಸಹಾಯಧನ ಬಿಡುಗಡೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦ (೧೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಚಿಕ್ಕಮಗಳೂರು ಜಿಲ್ಲೆಯಲ್ಲಿ ಹನಿ ನೀರಾವರಿ ಯೋಜನೆಯಡಿಯಲ್ಲಿ ಎಷ್ಟು ಜನರಿಗೆ ಸೌಲಭ್ಯ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ರೈತರಿಗೆ ಎಷ್ಟು ಸಹಾಯಧನ (ಸಬ್ಸಿಡಿ) ನೀಡಲಾಗುತ್ತಿದೆ ; ರೈತರು ಭರಿಸಬೇಕಾದ ವಂತಿಗೆ ಎಷ್ಟು ;

(ಇ) ಪ್ರಸಕ್ತ ವರ್ಷದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಹನಿ ನೀರಾವರಿ ಸೌಲಭ್ಯ ಪಡೆದಿರುವ ಎಷ್ಟು ರೈತರಿಗೆ ಸಹಾಯಧನ ಬಿಡುಗಡೆ ಮಾಡಲು ಬಾಕಿ ಇದೆ ; ಬಾಕಿ ಇರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸಹಾಯಧನ ಪಡೆಯುವಲ್ಲಿ ಏಜೆನ್ಸಿಗಳಿಂದ ರೈತರಿಗೆ ಸಮಸ್ಯೆಯುಂಟಾಗುತ್ತಿರುವ ಬಗ್ಗೆ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಸ್ಟಾರ್ಟಪ್‌ಗಳ ಆರಂಭಕ್ಕೆ ಇರುವ ಬಾಕಿ ಪ್ರಸ್ತಾವನೆಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧ (೧೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸ್ಟಾರ್ಟಪ್‌ಗಳು ಆರಂಭಗೊಂಡಿವೆ ; ಈ ಸ್ಟಾರ್ಟಪ್‌ಗಳಿಂದ ಎಷ್ಟು ನಿರುದ್ಯೋಗಿಗಳಿಗೆ ಉದ್ಯೋಗ ದೊರಕಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಸ್ಟಾರ್ಟಪ್‌ಗಳ ಆರಂಭಕ್ಕೆ ಅನುಮತಿ ಕೋರಿ ಎಷ್ಟು ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ ; ಡಿಸೆಂಬರ್. ೨೦೨೫ರ ಅಂತ್ಯದವರೆಗೆ ಎಷ್ಟು ಪ್ರಸ್ತಾವನೆಗಳಿಗೆ ಸರ್ಕಾರ ಅನುಮತಿ ನೀಡಿದೆ ;

(ಇ) ಸ್ಟಾರ್ಟಪ್‌ಗಳಿಗೆ ಅನುಮತಿ ನೀಡಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಅನುಮತಿ ಕೋರಿ ಬಾಕಿ ಇರುವ ಪ್ರಸ್ತಾವನೆಗಳಿಗೆ ಸರ್ಕಾರ ಯಾವ ಕಾಲಮಿತಿಯೊಳಗೆ ಅನುಮತಿ ನೀಡಲಿದೆ ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಿರು ವಿಮಾನ ನಿಲ್ದಾಣ ಸ್ಥಾಪನೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨ (೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರಿನಲ್ಲಿ ಕಿರು ವಿಮಾನ ನಿಲ್ದಾಣ ಸ್ಥಾಪಿಸಲು ಅಗತ್ಯವಿರುವಷ್ಟು ಜಾಗವನ್ನು ಕಾಯ್ದಿರಿಸಲಾಗಿದೆಯೇ ; ಯಾವ ಯಾವ ಸರ್ವೆ ನಂಬರ್‌ಗಳಲ್ಲಿ ಎಷ್ಟು ಜಾಗವನ್ನು ಕಾಯ್ದಿರಿಸಲಾಗಿದೆ ; (ವಿವರ ನೀಡುವುದು)

(ಆ) ಚಿಕ್ಕಮಗಳೂರಿನಲ್ಲಿ ಕಿರು ವಿಮಾನ ನಿಲ್ದಾಣ ಸ್ಥಾಪಿಸಲು ಡಿ.ಪಿ.ಆರ್ ತಯಾರಿಸಲಾಗಿದೆಯೆ ; ಎಷ್ಟು ಆಸನಗಳ ಸಾಮರ್ಥ್ಯದ ವಿಮಾನಗಳನ್ನು ನಿಲುಗಡೆ ಮಾಡಲು ಉದ್ದೇಶಿಸಲಾಗಿದೆ ;

(ಇ) ವಿಮಾನ ನಿಲ್ದಾಣ ಸ್ಥಾಪನೆ ವಿಚಾರದಲ್ಲಿ ಆಗಿರುವ ಪ್ರಗತಿ ಏನು ; ಯಾವ ಕಾಲಮಿತಿಯಲ್ಲಿ ಕಿರು ವಿಮಾನ ನಿಲ್ದಾಣ ಸ್ಥಾಪಿಸಲಾಗುವುದು ? (ವಿವರ ಒದಗಿಸುವುದು)

## ಜಿಲ್ಲಾ ಖನಿಜ ನಿಧಿಯಲ್ಲಿ ಸಂಗ್ರಹವಾಗಿರುವ ಅನುದಾನ ಬಳಕೆಗೆ ಕ್ರಿಯಾ ಯೋಜನೆ ರೂಪಿಸುವ ಬಗ್ಗೆ

**ಶ್ರೀ ಸಿ.ಟಿ.ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩. (೧೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ૩ ವರ್ಷಗಳಿಂದ ಚಿಕ್ಕಮಗಳೂರು ಜಿಲ್ಲೆಯಲ್ಲಿ ಜಿಲ್ಲಾ ಖನಿಜ ನಿಧಿಗೆ ಸಂಗ್ರಹಣೆಯಾಗಿರುವ ಮೊತ್ತವೆಷ್ಟು ; (ವರ್ಷವಾರು ವಿವರ ಒದಗಿಸುವುದು)

(ಆ) ಈ ಅನುದಾನ ಯಾವ ಉದ್ದೇಶಕ್ಕೆ ಬಳಕೆಯಾಗುತ್ತಿದೆ ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ ; (ವಿವರ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಖನಿಜ ಪ್ರತಿಷ್ಠಾನ ಟ್ರಸ್ಟ್ ವತಿಯಿಂದ ಅನುದಾನ ಬಳಕೆ ಕುರಿತು ಎಷ್ಟು ಸಭೆಗಳನ್ನು ನಡೆಸಲಾಗಿದೆ ; ಈ ಟ್ರಸ್ಟ್‌ನಲ್ಲಿ ಯಾರ್‍ಯಾರು ಸದಸ್ಯರಿರುತ್ತಾರೆ ;

(ಈ) ಪ್ರಸ್ತುತ ಜಿಲ್ಲಾ ಖನಿಜ ನಿಧಿಯಲ್ಲಿ ಎಷ್ಟು ಹಣ ಲಭ್ಯವಿದೆ ; ಈ ಅನುದಾನವನ್ನು ಗಣಿ ಬಾಧಿತ ಪ್ರದೇಶಗಳ ಅಭಿವೃದ್ಧಿಗಾಗಿ ಬಳಸಲು ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ ? (ವಿವರ ಒದಗಿಸುವುದು)

## ಕರ್ನಾಟಕ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಂಡಳಿ (KIADB) ಧಾರವಾಡ ಇವರಿಂದ ಹಂಚಿಕೆಯಾಗಿರುವ ನಿವೇಶನ ಬಗ್ಗೆ

**ಶ್ರೀ ಎಫ್.ಹೆಚ್.ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೧೪ (೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಂಡಳಿ (KIADB), ಧಾರವಾಡ ಇವರಿಂದ ಹುಬ್ಬಳ್ಳಿ–ಧಾರವಾಡ ಕೈಗಾರಿಕೆ ಪ್ರದೇಶದ ವ್ಯಾಪ್ತಿಯಲ್ಲಿ ಇದುವರೆಗೆ ಒಟ್ಟು ಎಷ್ಟು ಎಕರೆ ಕೈಗಾರಿಕೆ ನಿವೇಶನಗಳನ್ನು ಉದ್ಯಮಿಗಳಿಗೆ ಹಂಚಿಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ನಿವೇಶನಗಳ ಪೈಕಿ ಪರಿಶಿಷ್ಟ ಜಾತಿ (SC) ಮತ್ತು ಪರಿಶಿಷ್ಟ ಪಂಗಡ (ST) ಉದ್ಯಮಿಗಳಿಗೆ ಹಂಚಿಕೆಯಾಗಿರುವ ಕೈಗಾರಿಕೆ ನಿವೇಶನಗಳು ಎಷ್ಟು; (ಜಾತಿವಾರು ಮತ್ತು ವಿಸ್ತೀರ್ಣವಾರು ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ನಿಗದಿಪಡಿಸಿರುವ ಮೀಸಲಾತಿಯ ಅನ್ವಯ ಪೂರ್ಣ ಪ್ರಮಾಣದಲ್ಲಿ ನಿವೇಶನಗಳ ಹಂಚಿಕೆಯಾಗಿದೆಯೇ; ಇಲ್ಲದಿದ್ದಲ್ಲಿ, ಬಾಕಿ ಉಳಿದಿರುವ ನಿವೇಶನಗಳ ಸಂಖ್ಯೆ ಎಷ್ಟು ಮತ್ತು ಅವುಗಳನ್ನು ಹಂಚಿಕೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹುಬ್ಬಳ್ಳಿ–ಧಾರವಾಡ ಭಾಗದಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಅವುಗಳಿಗೆ ಯಾವಾಗ ನಿವೇಶನ ಹಂಚಿಕೆ ಮಾಡಲಾಗುವುದು ?

## ಸಾರ್ವಜನಿಕ ರಸ್ತೆ ಮೇಲೆ ಅನಧಿಕೃತ ಕಟ್ಟಡ ನಿರ್ಮಾಣದ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೧೫ (೧೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪಕ್ಕದಲ್ಲಿ ನಿರ್ಮಿಸಿರುವ ಮನೆ ಸಾರ್ವಜನಿಕ ರಸ್ತೆ ಮೇಲೆ ಸುಮಾರು ೩೬ ಅಡಿ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೂಂಡ ಕ್ರಮವೇನು ;

(ಆ) ಕಟ್ಟಡ ಅಕ್ರಮವಾಗಿರುವ ಕುರಿತು ಪುರಸಭೆ ಅಧಿಕಾರಿಗಳು ಮತ್ತು ಕಂದಾಯ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ವರದಿ ಸಲ್ಲಿಸಿದ್ದರೂ ಇಲ್ಲಿಯವರೆಗೆ ಕಟ್ಟಡ ತೆರವುಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ಕಟ್ಟಡ ತೆರವುಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಅನಧಿಕೃತ ಬಡಾವಣೆ ನಿರ್ಮಾಣ ಮಾಡಿರುವ ಬಗ್ಗೆ

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೧೬ (೧೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಸರ್ವೆ ನಂ:೩೭೫ ರ ವಿಸ್ತೀರ್ಣ ೩ ಎಕರೆ ೧೭ ಗುಂಟೆ ವಸತಿ ವಿನ್ಯಾಸದಲ್ಲಿ ಯಾವುದೇ ಭೌತಿಕ ಸೌಲಭ್ಯಗಳನ್ನು ಒದಗಿಸದೇ ಅಧಿಕಾರಿಗಳು ಸುಳ್ಳು ವರದಿ ಆಧಾರದ ಮೇಲೆ ಶೇಕಡಾ ೧೦೦ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಆಧಾರದ ಮೇಲೆ ಶೇ ೧೦೦ರಷ್ಟು ನಿವೇಶನ ಹಂಚಿಕೆ ಮಾಡಲಾಗಿದೆ ; (ಮಾಹಿತಿ ನೀಡುವುದು)

(ಇ) ಶೇ ೧೦೦ರಷ್ಟು ನಿವೇಶನ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಮತ್ತು ಸರ್ವೆ ನಂ.೩೭೫ ರ ವಿಸ್ತೀರ್ಣ ೩ ಎಕರೆ ೧೭ ಗುಂಟೆಗೆ ಸಂಬಂಧಪಟ್ಟವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯದ ನಗರಗಳಲ್ಲಿನ ಕುಡಿಯುವ ನೀರಿನ ಶುದ್ಧತೆ ಕಾಪಾಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೭ (೨೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಗಳಲ್ಲಿನ ನೀರು ಸರಬರಾಜು ಘಟಕಗಳಲ್ಲಿ ಕುಡಿಯುವ ನೀರಿನ ಗುಣಮಟ್ಟವನ್ನು WHO ಹಾಗೂ BIS ಮಾನದಂಡಗಳಂತೆ ನಿಯಮಿತವಾಗಿ ಪರೀಕ್ಷಿಸಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಆ) ಜನರಿಗೆ ಯಾವ ಯಾವ ಮೂಲದಿಂದ ಹಾಗೂ ಯಾವ ವಿಧಾನಗಳಲ್ಲಿ ನೀರನ್ನು ಸರಬರಾಜು ಮಾಡಲಾಗುತ್ತಿದೆ ; ಯಾವ ರೀತಿಯ ಶುದ್ಧೀಕರಣ ಪ್ರಕ್ರಿಯೆಗಳನ್ನು ನಡೆಸಲಾಗುತ್ತಿದೆ ;

(ಇ) ರಾಜ್ಯದ ಪ್ರತಿ ಜಿಲ್ಲೆಗಳಲ್ಲಿಯೂ ಸುಸಜ್ಜಿತ ನೀರಿನ ಗುಣಮಟ್ಟ ಪರೀಕ್ಷಾ ಪ್ರಯೋಗಾಲಯಗಳನ್ನು ಸ್ಥಾಪಿಸಲು ಸರ್ಕಾರ ಯಾವ ಯೋಜನೆ ರೂಪಿಸಿದೆ ; (ರೂಪಿಸಿದ್ದಲ್ಲಿ ವಿವರ ನೀಡುವುದು)

(ಈ) ನೀರು ಶುದ್ಧೀಕರಣ ಘಟಕಗಳಲ್ಲಿ ಪ್ರಿ-ಕ್ಲೋರಿನೇಷನ್ ಮತ್ತು ಪೋಸ್ಟ್ ಕ್ಲೋರಿನೇಷನ್ ಹಂತಗಳಲ್ಲಿ ಬಳಸುವ ಕ್ಲೋರಿನ್ ಪ್ರಮಾಣವನ್ನು ವೈಜ್ಞಾನಿಕವಾಗಿ ಅಳೆಯಲು ಆಧುನಿಕ ಉಪಕರಣಗಳನ್ನು ಹಾಗೂ ತರಬೇತಿ ಪಡೆದ ಸಿಬ್ಬಂದಿಯನ್ನು ನೇಮಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ನೀರು ಸರಬರಾಜು ಓವರ್ ಹೆಡ್ ಟ್ಯಾಂಕ್‌ಗಳನ್ನು ಎಷ್ಟು ದಿನಗಳಿಗೊಮ್ಮೆ ಸ್ವಚ್ಛ ಮಾಡಲಾಗುತ್ತಿದೆ ಹಾಗೂ ಇದಕ್ಕೆ ಇರುವ ಮಾನದಂಡಗಳೇನು ; ಯಾರಿಂದ-ಯಾವ ರೀತಿಯಲ್ಲಿ ಸ್ವಚ್ಛ ಮಾಡಲಾಗುತ್ತಿದೆ ;

(ಊ) ಕುಡಿಯುವ ನೀರಿನಿಂದ ಉಂಟಾಗುವ ರೋಗಗಳನ್ನು ತಡೆಗಟ್ಟುವ ಉದ್ದೇಶದಿಂದ ರಾಜ್ಯಮಟ್ಟದಲ್ಲಿ ಸಮಗ್ರ "Water Quality Monitoring and Public Health Protection Program" ಜಾರಿಗೆ ತರಲು ಸರ್ಕಾರ ಉದ್ದೇಶಿಸಿದೆಯೇ? (ವಿವರ ನೀಡುವುದು)

## ಬೀದಿ ನಾಯಿಗಳ ಹಾವಳಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೮ (೨೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಸೇರಿದಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಿದ್ದು, ಕಳೆದ ೩ ವರ್ಷಗಳಲ್ಲಿ ಬೀದಿ ನಾಯಿಗಳ ದಾಳಿಗೆ ಒಳಗಾದ ನಾಗರೀಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೀದಿ ನಾಯಿಗಳ ನಿಯಂತ್ರಣಕ್ಕೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಬೀದಿ ನಾಯಿಗಳ ದಾಳಿಯಿಂದ ಸಾವು ಮತ್ತು ನೋವುಗಳಿಗೆ ಒಳಗಾದವರಿಗೆ ಸರ್ಕಾರದ ವತಿಯಿಂದ ನೀಡಲಾಗುವ ಪರಿಹಾರವೇನು ; ಕಳೆದ ೩ ವರ್ಷಗಳಲ್ಲಿ ಪಾವತಿಸಲಾದ ಪರಿಹಾರದ ಮೊತ್ತವೆಷ್ಟು; ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ;

(ಈ) ಕಳೆದ ೩ ವರ್ಷಗಳಲ್ಲಿ ಎಷ್ಟು ಸಂಖ್ಯೆಯ ಬೀದಿ ನಾಯಿಗಳಿಗೆ ಸಂತಾನ ಶಕ್ತಿಹರಣ ಶಸ್ತ್ರಚಿಕಿತ್ಸೆ (ABC) ಮತ್ತು ರೇಬೀಸ್ ರೋಗ ನಿರೋಧಕ ಲಸಿಕೆ (ARV) ಹಾಕಲಾಗಿದೆ ; ಇದಕ್ಕಾಗಿ ಭರಿಸಲಾಗಿರುವ ವೆಚ್ಚ ಎಷ್ಟು? ( ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರೈಲ್ವೆ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಮೂಲಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೯ (೨೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೈರುತ್ಯ ರೈಲ್ವೆ ವಲಯ ವ್ಯಾಪ್ತಿಯ ಮೈಸೂರು–ಬೆಂಗಳೂರು ನಡುವೆ ರೈಲಿನಲ್ಲಿ ಪ್ರತಿನಿತ್ಯ ಸಂಚರಿಸುವ ಪ್ರಯಾಣಿಕರ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ಸಂಚರಿಸಿದ ಪ್ರಯಾಣಿಕರ ಅಂದಾಜು ಸಂಖ್ಯೆ ಹಾಗೂ ಟಿಕೆಟ್ / ರೈಲ್ವೆ ಪಾಸ್ ಮೂಲಕ ಗಳಿಸಿದ ಆದಾಯ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಈ ಎರಡು ನಗರಗಳ ಮಾರ್ಗ ಮಧ್ಯೆ ಕಳೆದ ಮೂರು ವರ್ಷಗಳಲ್ಲಿ ನಡೆಸಿದ ಟಿಕೆಟ್ ತಪಾಸಣೆಗಳು, ದಾಖಲಿಸಲ್ಪಟ್ಟ ಟಿಕೆಟ್ ರಹಿತ ಮತ್ತು ಅಕ್ರಮ ಪ್ರಯಾಣ ಪ್ರಕರಣಗಳ ಸಂಖ್ಯೆ ಹಾಗೂ ವಸೂಲಿಸಿದ ದಂಡದ ಮೊತ್ತ ಎಷ್ಟು ; (ಶೇಕಡವಾರು ಮಾಹಿತಿಯೊಂದಿಗೆ ವರ್ಷವಾರು ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಮೈಸೂರು– ಬೆಂಗಳೂರು ನಡುವೆ ಸಂಭವಿಸಿದ ರೈಲ್ವೆ ಅವಘಡಗಳಲ್ಲಿ ಜೀವ ಕಳೆದುಕೊಂಡವರು ಮತ್ತು ಮೃತಪಟ್ಟ ಪ್ರಾಣಿಗಳ ಸಂಖ್ಯೆ ಎಷ್ಟು ಹಾಗೂ ಪಾವತಿಸಲಾದ ಪರಿಹಾರದ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಉ) ಕಳೆದ ೦೩ ವರ್ಷಗಳಲ್ಲಿ ಮೈಸೂರು–ಬೆಂಗಳೂರು ನಡುವೆ ಬರುವ ರೈಲ್ವೆ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಮೂಲಸೌಕರ್ಯ ಒದಗಿಸುವುದು ಸೇರಿದಂತೆ ಒಟ್ಟಾರೆ ಅಭಿವೃದ್ಧಿ ಕೆಲಸಗಳಿಗೆ ಭರಿಸಲಾದ ಅನುದಾನ ಎಷ್ಟು ? (ವರ್ಷವಾರು ಮಾಹಿತಿ ನೀಡುವುದು)

## ಮಂಡ್ಯದ ಮಹಾರಾಜ ಬಡಾವಣೆಯಲ್ಲಿ ಮೂಲಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೦ (೨೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯದ ನಗರಸಭೆ ವ್ಯಾಪ್ತಿಯ ವಾರ್ಡ್ ೦೩ರ ಕೆರೆ ಅಂಗಳದ ಕೆ.ಹೆಚ್.ಬಿ (ಮಹಾರಾಜ) ಬಡಾವಣೆಗೆ ಕಾವೇರಿ ಕುಡಿಯುವ ನೀರು ಸರಬರಾಜು ಸಂಪೂರ್ಣವಾಗಿ ಇಲ್ಲದಿರುವುದು ಹಾಗೂ ಯು.ಜಿ.ಡಿ ಚರಂಡಿ ವ್ಯವಸ್ಥೆ ಸಮರ್ಪಕವಾಗಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಾವೇರಿ ಕುಡಿಯುವ ನೀರು ಪೂರೈಕೆ ಮಾಡುವ ಸಂಬಂಧ ಈವರೆವಿಗೂ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಮೀಸಲಿಟ್ಟಿರುವ ಹಣ ಎಷ್ಟು ; ಯಾವ ಯೋಜನೆಯಡಿ ಅನುದಾನ ಒದಗಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಈ ವಾರ್ಡ್ ವ್ಯಾಪ್ತಿಯಲ್ಲಿ ಯುಜಿಡಿ, ಚರಂಡಿ, ವಿದ್ಯುತ್ ಸೇರಿದಂತೆ ಅನೇಕ ಮೂಲಸೌಕರ್ಯಗಳ ವ್ಯವಸ್ಥೆ ಸರಿಯಿಲ್ಲದಿರುವುದರಿಂದ ಇಲ್ಲಿನ ನಿವಾಸಿಗಳಿಗೆ ತೀವ್ರ ತೊಂದರೆ ಆಗುತ್ತಿದ್ದು, ಸರಿಪಡಿಸಲು ಅಥವಾ ಕಲ್ಪಿಸಲು ಸರ್ಕಾರದ ಕ್ರಮವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ವಾರ್ಡ್ ವ್ಯಾಪ್ತಿಯಲ್ಲಿ ಖಾಲಿ ನಿವೇಶನ, ಮೀಸಲಿಟ್ಟ ಉದ್ಯಾನ ಸೇರಿದಂತೆ ವಾರ್ಡ್ ಪೂರ್ತಿ ಜಂಗಲ್ (ಗಿಡ–ಗಂಟಿ) ವ್ಯಾಪಿಸಿ ಅಪರಾಧ ಕೃತ್ಯಗಳಿಗೆ ಕಾರಣವಾಗುತ್ತಿದ್ದು, ಖಾಲಿ ನಿವೇಶನಗಳಲ್ಲಿನ ಜಂಗಲ್ ತೆರವುಗೊಳಿಸುವಿಕೆ ಹಾಗೂ ಉದ್ಯಾನ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ?

## ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರವು ರಚಿಸಿರುವ ವಸತಿ ಬಡಾವಣೆಗಳು ನಗರಸಭೆಗೆ ಹಸ್ತಾಂತರ ಆಗದ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೧ (೨೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯ ಒಟ್ಟು ವಿಸ್ತೀರ್ಣ ಎಷ್ಟು; ಈ ವ್ಯಾಪ್ತಿಗೆ ಒಳಪಡುವ ಪ್ರದೇಶಗಳು (ಗ್ರಾಮಗಳು ಒಳಗೊಂಡಂತೆ) ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರವು ಈವರೆವಿಗೂ ಅಭಿವೃದ್ಧಿ ಪಡಿಸಿರುವ ವಸತಿ ಯೋಜನೆಗಳು ಯಾವುವು; (ವಸತಿ ಯೋಜನೆ ಆರಂಭಿಸಿದ ವರ್ಷ, ಕೈಗೊಂಡ ಅಭಿವೃದ್ಧಿ ಕೆಲಸಗಳು,ವ್ಯಯಿಸಿದ ಮೊತ್ತ ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು )

(ಇ) ಈ ವಸತಿ ಯೋಜನೆಗಳನ್ನು ನಗರಸಭೆಗೆ ಹಸ್ತಾಂತರ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; (ವಸತಿ ಯೋಜನೆವಾರು ಮಾಹಿತಿ ನೀಡುವುದು)

(ಈ) ಪ್ರಾಧಿಕಾರದ ವತಿಯಿಂದ ಹೊಸ ವಸತಿ ಯೋಜನೆಯನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆಯೇ ; (ವಿವರ ನೀಡುವುದು)

(ಉ) ಪ್ರಾಧಿಕಾರದ ಮುಖ್ಯ ಉದ್ದೇಶ ಮತ್ತು ಕಾರ್ಯಚಟುವಟಿಕೆಗಳೇನು ?

## ಅಕ್ರಮ ಗಣಿ/ಕಲ್ಲುಗಣಿ/ಮರಳು ಗಣಿಗಾರಿಕೆ ತಡೆಗಟ್ಟುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೨ (೨೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ 'ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್' ಅಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಸಂಗ್ರಹಿಸಲಾದ ರಾಜಧನ ಮೊತ್ತವೆಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಮೇಲ್ಕಾಣಿಸಿದ ಜಿಲ್ಲೆಗಳಲ್ಲಿ ಸಂಗ್ರಹಿಸಲಾದ ರಾಜಧನ ಮೊತ್ತವನ್ನು ಕಳೆದ ೩ ವರ್ಷಗಳಲ್ಲಿ ಯಾವ ಉದ್ದೇಶಗಳಿಗೆ ಶೇಕಡವಾರು ಪ್ರಮಾಣದಲ್ಲಿ ವ್ಯಯಿಸಲಾಗಿದೆ ; ಇದರ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಗಣಿ/ಕಲ್ಲುಗಣಿ ಮತ್ತು ಮರಳು ಗುತ್ತಿಗೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಕಳೆದ ೩ ವರ್ಷಗಳಲ್ಲಿ ಜಿಲ್ಲಾ ಮರಳು ಸಮಿತಿಯ ವಿವಿಧ ಇಲಾಖೆಗಳಿಂದ ಅನಧಿಕೃತ ಮರಳು ಗಣಿಗಾರಿಕೆ/ಸಾಗಾಣಿಕೆ ತಡೆಗಟ್ಟಿ ದಂಡ ವಿಧಿಸಿರುವ ಮತ್ತು ಮೊಕದ್ದಮೆ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಮೇಲ್ಕಂಡ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಅನಧಿಕೃತ ಕಲ್ಲು ಗಣಿಗಾರಿಕೆ/ಸಾಗಾಣಿಕೆ/ದಾಸ್ತಾನು ಸಂಬಂಧ ಪತ್ತೆ ಹಚ್ಚಿದ ಪ್ರಕರಣಗಳು, ದಾಖಲಿಸಿದ ಮೊಕದ್ದಮೆ ಹಾಗೂ ಸಂಗ್ರಹಿಸಿದ ದಂಡದ ಮೊತ್ತವೆಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಊ) ಅಕ್ರಮ/ಅನಧಿಕೃತ ಗಣಿ/ಕಲ್ಲುಗಣಿ/ಮರಳು ಗಣಿಗಾರಿಕೆ/ಸಾಗಾಣಿಕೆ ತಡೆಗಟ್ಟಲು ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದ ಎ.ಪಿ.ಎಂ.ಸಿ. ಗಳ ಬಗ್ಗೆ

**ಶ್ರೀ ಸಿ. ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩ (೨೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಪಿ.ಎಂ.ಸಿ ಕಾಯ್ದೆಗೆ ತಿದ್ದುಪಡಿ ತಂದ ನಂತರ ಮಾರುಕಟ್ಟೆ ಪ್ರಾಂಗಣಗಳ ಆದಾಯದಲ್ಲಿ ಎಷ್ಟು ಕುಸಿತವಾಗಿದೆ ; ಇದನ್ನು ಸರಿಪಡಿಸಲು ಸರ್ಕಾರದ ಯೋಜನೆಯೇನು ;

(ಆ) ರಾಜ್ಯದ ಎಷ್ಟು ಎ.ಪಿ.ಎಂ.ಸಿ. ಗಳಲ್ಲಿ ವೈಜ್ಞಾನಿಕ ಶೈತ್ಯಾಗಾರ (Cold storage) ವ್ಯವಸ್ಥೆ ಇದೆ ; ಈ ವರ್ಷ ಹೊಸದಾಗಿ ಎಷ್ಟು ಶೈತ್ಯಾಗಾರಗಳನ್ನು ನಿರ್ಮಿಸಲು ಅನುದಾನ ಮೀಸಲಿಡಲಾಗಿದೆ ;

(ಇ) ಕೃಷಿ ಮಾರುಕಟ್ಟೆಯಲ್ಲಿ ಬೆಲೆ ಕುಸಿತವಾದಾಗ ರೈತರಿಗೆ ನೆರವಾಗಲು ಸ್ಥಾಪಿಸಲಾದ ಬೆಲೆ ಸ್ಥಿರೀಕರಣ ನಿಧಿಯಲ್ಲಿ (Price Stabilization Fund) ಪ್ರಸ್ತುತ ಲಭ್ಯವಿರುವ ಮೊತ್ತ ಎಷ್ಟು ?

## ಸ್ವಚ್ಛ ಭಾರತ್ ಮಿಷನ್ ೨.೦ ಯೋಜನೆ ಕುರಿತು

**ಶ್ರೀ ಸಿ. ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪ (೩೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ULBs) ಪ್ರತಿದಿನ ಉತ್ಪತ್ತಿಯಾಗುತ್ತಿರುವ ಕಸದಲ್ಲಿ ಎಷ್ಟು ಪ್ರಮಾಣವನ್ನು ವೈಜ್ಞಾನಿಕವಾಗಿ ಸಂಸ್ಕರಿಸಲಾಗುತ್ತಿದೆ ;

(ಆ) ಅನೇಕ ನಗರಗಳಲ್ಲಿ ಕಸದ ಗುಡ್ಡೆಗಳು (Legacy Waste) ಹೆಚ್ಚುತ್ತಿರುವುದನ್ನು ತಡೆಯಲು ಸರ್ಕಾರ ಸ್ವಚ್ಛ ಭಾರತ್ ಮಿಷನ್ ೨.೦ ಅಡಿಯಲ್ಲಿ ಕೈಗೊಂಡಿರುವ ಕ್ರಮಗಳೇನು ?

## ನಗರಸಭೆ, ಪುರಸಭೆ ವ್ಯಾಪ್ತಿಯಲ್ಲಿ UGD ವ್ಯವಸ್ಥೆ

**ಶ್ರೀ ಸಿ. ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫ (೩೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ನಗರಸಭೆ ಮತ್ತು ಪುರಸಭೆಗಳಲ್ಲಿ ೧೦೦% ಒಳಚರಂಡಿ (UGD) ವ್ಯವಸ್ಥೆ ಅಳವಡಿಸಲಾಗಿದೆ ;

(ಆ) ಅಮೃತ್ ೨.೦ (AMRUT 2.0) ಯೋಜನೆಯಡಿ ಎಷ್ಟು ನಗರಗಳಿಗೆ ೨೪X೭ ಕುಡಿಯುವ ನೀರು ಪೂರೈಸುವ ಗುರಿ ಹೊಂದಲಾಗಿದೆ ಮತ್ತು ಇದಕ್ಕಾಗಿ ವ್ಯಯಿಸಲಾದ ಮೊತ್ತವೆಷ್ಟು ?

## ಆಸ್ತಿ ತೆರಿಗೆ ಮತ್ತು ಇ–ಆಸ್ತಿ

**ಶ್ರೀ ಸಿ. ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬ (೩೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ‘ಇ–ಆಸ್ತಿ’ ತಂತ್ರಾಂಶ ಅನುಷ್ಠಾನದ ನಂತರ ಸಾರ್ವಜನಿಕರಿಗೆ ಆಸ್ತಿ ನೋಂದಣಿ ಮತ್ತು ಖಾತೆ ಬದಲಾವಣೆಯಲ್ಲಿ ಆಗುತ್ತಿರುವ ವಿಳಂಬ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತೆರಿಗೆ ಸೋರಿಕೆಯನ್ನು ತಡೆಗಟ್ಟಲು ಸರ್ಕಾರ ತರಲು ಉದ್ದೇಶಿಸಿರುವ ಹೊಸ ಡಿಜಿಟಲ್ ಸುಧಾರಣೆಗಳೇನು ?

## ರಾಜ್ಯದ ಅಕ್ರಮ ಗಣಿಗಾರಿಕೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭ (೩೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಪತ್ತೆಯಾದ ಅಕ್ರಮ ಗಣಿಗಾರಿಕೆ ಪ್ರಕರಣಗಳೆಷ್ಟು; ಈ ಸಂಬಂಧ ಎಷ್ಟು ಮೊತ್ತದ ದಂಡ ವಸೂಲಿ ಮಾಡಲಾಗಿದೆ ಮತ್ತು ಎಷ್ಟು ವಾಹನಗಳನ್ನು ಜಪ್ತಿ ಮಾಡಲಾಗಿದೆ ;

(ಆ) ಗಣಿ ಬಾಧಿತ ಜಿಲ್ಲೆಗಳಲ್ಲಿ ಸಂಗ್ರವಾಗಿರುವ ಜಿಲ್ಲಾ ಖನಿಜ ಪ್ರತಿಷ್ಠಾನ (DMF) ನಿಧಿಯ ಮೊತ್ತ ಎಷ್ಟು; ಈ ನಿಧಿಯನ್ನು ಆಯಾ ಭಾಗದ ರಸ್ತೆ, ಕುಡಿಯುವ ನೀರು ಮತ್ತು ಪರಿಸರ ಸುಧಾರಣೆಗೆ ಎಷ್ಟು ಬಳಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಎಂ–ಸ್ಯಾಂಡ್ (M-Sand) ಗುಣಮಟ್ಟ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ಅವಧಿ ಮುಗಿದಿರುವ ಎಷ್ಟು ಗಣಿ ಗುತ್ತಿಗೆಗಳನ್ನು ಹರಾಜು ಹಾಕಲು ಬಾಕಿ ಇದೆ ಹಾಗೂ ಇದರಿಂದ ಸರ್ಕಾರಕ್ಕೆ ಆಗುತ್ತಿರುವ ಆದಾಯ–ನಷ್ಟವೆಷ್ಟು ?

## ರಾಜ್ಯದಲ್ಲಿ ನೇಕಾರರ ಸಮ್ಮಾನ್ ಯೋಜನೆ

**ಶ್ರೀ ತಿಪ್ಪಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮ (೩೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೇಕಾರರ ಸಮ್ಮಾನ್ ಯೋಜನೆಯಡಿ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ (DBT) ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲಬುರಗಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಘೋಷಿಸಲಾದ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ಗಳ ಪ್ರಗತಿ ಯಾವ ಹಂತದಲ್ಲಿದೆ ; ಇವುಗಳಿಂದ ಎಷ್ಟು ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆಯಿದೆ ;

(ಇ) ನೂತನ ಜವಳಿ ನೀತಿಯಡಿ ಸಣ್ಣ ಪ್ರಮಾಣದ ಜವಳಿ ಘಟಕಗಳಿಗೆ ನೀಡಬೇಕಾದ ಬಂಡವಾಳ ಸಬ್ಸಿಡಿ ಬಾಕಿ ಎಷ್ಟಿದೆ ; ಇದನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಣ್ಣ ಕೈಗಾರಿಕೆಗಳಿಗೆ ಬಂಡವಾಳ / ಸಹಾಯಧನದ ಬಗ್ಗೆ

**ಶ್ರೀ ತಿಪ್ಪಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯ (೩೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ಯಮಿಗಳಿಗೆ ನೀಡಲಾಗುವ ಬಂಡವಾಳ / ಸಹಾಯಧನ ಬಾಕಿ ಎಷ್ಟಿದೆ ; ಕಳೆದ ಎರಡು ವರ್ಷಗಳಿಂದ ಎಷ್ಟು ಉದ್ಯಮಿಗಳಿಗೆ ಸಬ್ಸಿಡಿ ಬಿಡುಗಡೆ ಮಾಡಲಾಗಿದೆ ;

(ಆ) ತಾಂತ್ರಿಕ ಉನ್ನತೀಕರಣಕ್ಕಾಗಿ ನೀಡಲಾಗುವ ಕ್ರೆಡಿಟ್ ಲಿಂಕ್ಡ್ ಕ್ಯಾಪಿಟಲ್ ಸಬ್ಸಿಡಿ ಯೋಜನೆಯಡಿ ರಾಜ್ಯದ ಎಷ್ಟು ಸಣ್ಣ ಘಟಕಗಳು ಪ್ರಯೋಜನೆ ಪಡೆದಿವೆ ?

## ಕೊಡಗು ಜಿಲ್ಲೆಯಲ್ಲಿರುವ ಕ್ರಷರ್‌ಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦ (೩೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ರಷರ್‌ಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜನವಸತಿ ಪ್ರದೇಶಗಳಿಂದ ಎಷ್ಟು ಮೀಟರ್‌ಗಳ ಅಂತರದಲ್ಲಿ ಕ್ರಷರ್‌ಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲಾಗಿದೆ ;

(ಇ) ಕರ್ನಾಟಕ ಕಲ್ಲು ಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ ೨೦೧೧ರ ಕಾಯ್ದೆ ಜಾರಿಯಾಗುವ ಮೊದಲು ಜನವಸತಿ ಪ್ರದೇಶಗಳಿಂದ ಎಷ್ಟು ಮೀಟರ್ ಅಂತರದಲ್ಲಿ ಕ್ರಷರ್‌ಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲಾಗಿತ್ತು ;

(ಈ) ಪ್ರಸ್ತುತ ತಂತ್ರಜ್ಞಾನಗಳನ್ನು ಬಳಸಿ ಕ್ರಷರ್‌ಗಳು ಕಾರ್ಯನಿರ್ವಹಿಸುತ್ತಿರುವುದರಿಂದ ಶಬ್ದ ಮತ್ತು ವಾಯು ಮಾಲಿನ್ಯವನ್ನು ತಡೆಗಟ್ಟಬಹುದಾಗಿದ್ದು, ಜನವಸತಿ ಪ್ರದೇಶಗಳಿಂದ ಅಂತರವನ್ನು ೫೦೦ ಮೀಟರ್ ನಿಂದ ೨೫೦ ಮೀಟರ್‌ಗೆ ಇಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)

## ಪೌರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೀರು, ಕಸ ನಿರ್ವಹಣೆ ಮತ್ತು ಒಳಚರಂಡಿ ಯೋಜನೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧ (೩೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು, ಕಸ ನಿರ್ವಹಣೆ ಮತ್ತು ಒಳಚರಂಡಿ ಯೋಜನೆಗಳನ್ನು ಹೇಗೆ ನಿರ್ವಹಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಕೊಡಗು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಮನೆಗಳಿಗೆ ದಿನ ಪೂರ್ತಿ ಕುಡಿಯುವ ನೀರಿನ ಸಂಪರ್ಕ ಒದಗಿಸಲಾಗಿದೆ ; ಎಷ್ಟು ಮನೆಗಳಿಗೆ ಸಂಪರ್ಕ ಕಲ್ಪಿಸಲು ಬಾಕಿ ಇದೆ ;

(ಇ) ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಬಾಕಿ ಇದೆ ;

(ಈ) ಮಡಿಕೇರಿ ನಗರದ ಕಸ ನಿರ್ವಹಣೆಯನ್ನು ಯಾವ ರೀತಿಯಲ್ಲಿ ಮಾಡಲಾಗುತ್ತಿದೆ ; ನಿರ್ವಹಣೆಯುನ್ನು ಹೊರಗುತ್ತಿಗೆ ನೀಡಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಜೇನು ಸಾಕಾಣಿಕೆಗೆ ಅನುದಾನ ನಿಗದಿ ಮಾಡಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೩೨ (೪೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟದ ರಾಜ್ಯ ಜೇನು ಸಾಕಾಣಿಕೆಗೆ ಎಷ್ಟು ಅನುದಾನ ನಿಗದಿ ಪಡಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ವಾರ್ಷಿಕವಾಗಿ ಎಷ್ಟು ಟನ್ ಜೇನು ಉತ್ಪತ್ತಿಯಾಗುತ್ತಿದೆ ; ಅದನ್ನು ರಫ್ತು ಮಾಡುತ್ತಿದ್ದಲ್ಲಿ, ಯಾವ ಯಾವ ದೇಶಗಳಿಗೆ ರಫ್ತು ಮಾಡಲಾಗಿದೆ ;

(ಇ) ಇತ್ತೀಚೆಗೆ ಜೇನಿಗೆ ಬಂದಿರುವಂತಹ ಪೀಡಿತ ರೋಗ ಯಾವುದು ; ಅದರ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಜೇನಿಗೆ ಬಿದ್ದಂತಹ ಕೀಟಾಣುಗಳಿಂದ ಉತ್ಪತ್ತಿಯಾಗುವ ಹನಿ ವಿಷಕಾರಿಯೇ ಇಲ್ಲವೇ ;

(ಉ) ಸಂಶೋಧನೆಯಿಂದ ಕೀಟಾಣುಗಳ ನಾಶಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಚಿತ್ರದುರ್ಗ ಜಿಲ್ಲೆಯ ಕೈಗಾರಿಕಾ ಪಾರ್ಕ್‌ಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೩೩ (೪೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ ಹಿರಿಯೂರಿನಲ್ಲಿ ಹೊಸದಾಗಿ ಪ್ರಾರಂಭಿಸಿರುವ ಕೈಗಾರಿಕಾ ಪಾರ್ಕ್ ಎಷ್ಟು ;

(ಆ) ಪರಿಹಾರ ನೀಡಲಾಗಿರುವ ರೈತರ ಸಂಖ್ಯೆ ಎಷ್ಟು ; ಇನ್ನು ಉಳಿಕೆ ರೈತರ ಪರಿಹಾರ ಯಾವಾಗ ನೀಡಲಾಗುತ್ತದೆ ; ನ್ಯಾಯಾಲಯದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಪಾರ್ಕ್‌ಗೆ ನೀಡುವ ಮೂಲಸೌಕರ್ಯಗಳಾವುವು ; ಎಷ್ಟು ದಿನದಲ್ಲಿ ನೀಡಲಾಗುತ್ತದೆ ;

(ಈ) ಪಾರ್ಕ್‌ಗೆ Allot ಆಗಿರುವ ನೀರಿನ ವಿದ್ಯುತ್ ಪ್ರಮಾಣವೆಷ್ಟು ; ಎಲ್ಲಿಂದ ನೀಡಲಾಗುತ್ತಿದೆ ;

(ಉ) ಈ ಹಿಂದೆ ಹಿರಿಯೂರು, ಸೀಗೆಹಟ್ಟಿ, ಯಲ್ಲದಕೆರೆ, ೨೨೮,೨೨೯,೨೩೦,೨೩೧,೨೩೨,೨೩೬ರವರೆಗೆ ಸರ್ಕಾರಿ ಜಮೀನು ನೀಡಿದ್ದು ಇದುವರೆವಿಗೂ ೪೪೦ ಎಕರೆ ಯಾವುದೇ ಪ್ರಗತಿ ಇಲ್ಲದಿರುವುದು, ವಾಪಸ್ಸು ಪಡೆಯದೇ ಇರಲು ಕಾರಣವೇನು ?

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೩೪ (೪೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಕ್ಕರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಖಾಯಂ ನೌಕರರೇ ಅಥವಾ ತಾತ್ಕಾಲಿಕ

ನೌಕರರೇ, ಈ ನೌಕರರಿಗೆ ಕಾರ್ಮಿಕ ಇಲಾಖೆಯು ನಿಯಮಾನುಸಾರ ವೇತನ ಪಾವತಿಸಲಾಗುತ್ತಿದೆಯೇ ;

(ಇ) ಸಕ್ಕರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಣೆ ಮಾಡುತ್ತಿರುವ ನೌಕರರಿಗೆ ಯಾವ ಯಾವ ಸೌಲಭ್ಯಗಳು ಸಿಗುತ್ತಿವೆ ;

(ಈ) ಸಕ್ಕರೆ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಸಮರ್ಪಕವಾಗಿ ಪಾವತಿ ಮಾಡದೇ ಇರುವ ಸಕ್ಕರೆ ಕಾರ್ಖಾನೆಗಳ ಮೇಲೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ?

## ಪರವಾನಗಿ ಪಡೆದು ಗಣಿಗಾರಿಕೆ ನಡೆಸುತ್ತಿರುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೩೫ (೪೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪರವಾನಗಿ ಪಡೆದು ನಡೆಸುತ್ತಿರುವ ಗಣಿಕಾರಿಕೆಗಳ ಸಂಖ್ಯೆ ಎಷ್ಟು ;

(ಆ) ಗಣಿಗಾರಿಕೆಗೆ ಪರವಾನಗಿ ಪಡೆಯುಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು ; ಈ ಮಾನದಂಡಗಳಿಗೆ ಅನುಸಾರವಾಗಿ ಎಲ್ಲಾ ಗಣಿಗಾರಿಕೆಗಳಿಗೆ ಪರವಾನಗಿ ನೀಡಲಾಗಿದೆಯೇ ;

(ಇ) ತುಮಕೂರು, ಚಿತ್ರದುರ್ಗ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಲ್ಲಿ ಗಣಿ ಕೈಗಾರಿಕೆ ಕೈಗೊಂಡಿರುವ ಸಂಖ್ಯೆ ಎಷ್ಟು ; ಇವುಗಳಲ್ಲಿ ಅನಧಿಕೃತ ಗಣಿಗಾರಿಕೆಗಳ ಸಂಖ್ಯೆ ಎಷ್ಟು ;

(ಈ) ಗಣಿಗಾರಿಕೆಗೆ ಪರವಾನಗಿ ನೀಡುವ ಸಂದರ್ಭದಲ್ಲಿ ಅತೀ ಹಿಂದುಳಿದ ಪ್ರವರ್ಗ –Iರ ಜಾತಿಗಳ ಎಷ್ಟು ಜನ ಗುತ್ತಿಗೆದಾರರಿಗೆ ಗುತ್ತಿಗೆ ನೀಡಲಾಗಿದೆ ; ನೀಡದೇ ಇದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ?

## ಪೌರಾಡಳಿತ ಇಲಾಖೆ ವ್ಯಾಪ್ತಿಯಲ್ಲಿರುವ ಸ್ಥಳೀಯ ಸಂಸ್ಥೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೩೬ (೪೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಪ್ರತಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ಆಸ್ತಿಗಳ ಸಂಖ್ಯೆ ಎಷ್ಟು ;

(ಇ) ಅನಧಿಕೃತ ಆಸ್ತಿಗಳನ್ನು ಸರ್ಕಾರದ ಇ–ಖಾತೆ ಮಾಡಿಕೊಡಲು ತೆಗೆದುಕೊಂಡಿರುವ ಕ್ರಮಗಳೇನು ; (ಜಿಲ್ಲಾವಾರು, ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

(ಈ) ಇದುವರೆಗೂ ಇ–ಖಾತಾ ಕೋರಿ ಮನವಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

(ಉ) ಚಿತ್ರದುರ್ಗ, ತುಮಕೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಾವುವು ; (ವಿವರ ನೀಡುವುದು) ಈ ಸ್ಥಳೀಯ ಸಂಸ್ಥೆಗಳಲ್ಲಿ ಅನಧಿಕೃತ ಆಸ್ತಿಗಳ ಇ–ಖಾತೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ?

## ಕೆಐಎಡಿಬಿ ಭೂಸ್ವಾಧೀನ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೩೭ (೪೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಐಎಡಿಬಿ ವತಿಯಿಂದ ಬೆಂಗಳೂರು ದಕ್ಷಿಣ ಜಿಲ್ಲೆ (ರಾಮನಗರ ಜಿಲ್ಲೆ) ವ್ಯಾಪ್ತಿಗೆ ಸಂಬಂಧಪಟ್ಟಂತೆ ಮತ್ತು ಬೆಂಗಳೂರು ದಕ್ಷಿಣ ತಾಲ್ಲೂಕಿಗೆ ಸಂಬಂಧಪಟ್ಟಂತೆ ಭೂಸ್ವಾಧೀನ ಪ್ರಕ್ರಿಯೆಗಳು ನಡೆದಿದೆಯೇ ; ನಡೆದಿದ್ದಲ್ಲಿ, ಯಾವ ಯಾವ ಉದ್ದೇಶಗಳಿಗೆ ಭೂಸ್ವಾಧೀನ ಮತ್ತು ಎಷ್ಟು ವಿಸ್ತೀರ್ಣ ಮಾಡಲಾಗುತ್ತಿದೆ ; (ಪೂರ್ಣ ವಿವರಗಳನ್ನು ನೀಡುವುದು)

(ಆ) ಕೆಐಎಡಿಬಿ ಯಲ್ಲಿ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಎಷ್ಟು ಭೂಸ್ವಾಧೀನ ಪ್ರಕ್ರಿಯೆಗಳು ಪ್ರಾಥಮಿಕ ಹಂತದಲ್ಲಿವೆ ಮತ್ತು ಎಷ್ಟು ಪ್ರಕ್ರಿಯೆಗಳು ಅಂತಿಮ ಅಧಿಸೂಚನೆಗೆ ಒಳಪಟ್ಟಿವೆ ; (ವಿವರಗಳನ್ನು ಒದಗಿಸುವುದು)

(ಇ) ಕೆಐಎಡಿಬಿ ನಾಗರೀಕ ನಿವೇಶನಗಳಿಗೆ ಸಂಬಂಧಪಟ್ಟಂತೆ ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿರುತ್ತದೆ ; ಖಾಲಿ ಇರುವ ನಿವೇಶನಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಒದಗಿಸುವುದು)

(ಈ) ಕೆಐಎಡಿಬಿ ಯಲ್ಲಿ ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟಂತೆ ಎಷ್ಟು ಜನ ನೌಕರರು ಕಂದಾಯ ಇಲಾಖೆ ಮತ್ತು ಇತರ ಇಲಾಖೆಯಿಂದ ನಿಯೋಜನೆಗೊಂಡು ಕೆಲಸ ಮಾಡುತ್ತಿದ್ದಾರೆ ಮತ್ತು ಎಷ್ಟು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ ; ಹೊರಗುತ್ತಿಗೆಯ ಆಧಾರದ ಮೇಲೆ ಎಷ್ಟು ಜನ ಕೆಲಸ ಮಾಡುತ್ತಿದ್ದಾರೆ ? (ಪದನಾಮಗಳ ಸಹಿತ ಸಂಪೂರ್ಣ ವಿವರಗಳನ್ನು ಒದಗಿಸುವುದು)

# ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಮಾಹಿತಿ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೩೮ (೪೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಯೋಜನೆಯ ಅಡಿಯಲ್ಲಿ (ಪಿಎಂಇಜಿಪಿ) ಕಳೆದ ೧೦ ವರ್ಷಗಳಲ್ಲಿ ಕರ್ನಾಟಕ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳಿಗೆ ನೀಡಿರುವ ಅನುದಾನ ಮತ್ತು ಸಹಾಯಧನ ಎಷ್ಟು ; (ವರ್ಷವಾರು, ಮತ್ತು ಫಲಾನುಭವಿಗಳ ಪೂರ್ಣ ವಿವರಗಳನ್ನು ನೀಡುವುದು)

(ಆ) ರಾಜ್ಯದ ಸಣ್ಣ ಕೈಗಾರಿಕೆ, ಗುಡಿ ಕೈಗಾರಿಕೆ ಖಾದಿ ಹಾಗೂ ಇತರ ದೇಶಿಯ ಉತ್ಪನ್ನಗಳ ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಕೈಗಾರಿಕೆ ಕೇಂದ್ರ ಸರ್ಕಾರ ಯಾವ ಯಾವ ಯೋಜನೆಗಳಲ್ಲಿ ಅನುದಾನ/ಸಹಾಯಧನವನ್ನು ನೀಡುತ್ತಿದೆ ; ಇದಕ್ಕೆ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ; (ವಿವರಗಳನ್ನು ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಖಾದಿ ವಸ್ತು ಪ್ರದರ್ಶನಗಳನ್ನು ನಡೆಸಲಾಗಿರುತ್ತದೆ ; ರಾಜ್ಯ ಸರ್ಕಾರ ಎಷ್ಟು ಅನುದಾನಗಳನ್ನು ವಿನಿಯೋಗಿಸಿರುತ್ತದೆ ; (ಫಲಾನುಭವಿಗಳ ಸಹಿತವಾಗಿ ಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಕಳೆದ ೩ ವರ್ಷಗಳಲ್ಲಿ ಎಷ್ಟು ಕೆ.ವಿ.ಐ.ಬಿ ತರಬೇತಿ

ಕಾರ್ಯಕ್ರಮಗಳನ್ನು ನಡೆಸಿರುತ್ತದೆ ; ಈ ತರಬೇತಿ ಕಾರ್ಯಕ್ರಮಗಳಿಗೆ ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣವೆಷ್ಟು ; ಬಿಡುಗಡೆಯಾದ ಅನುದಾನ ಮತ್ತು ಬಾಕಿ ಇರುವ ಅನುದಾನ ಎಷ್ಟು ; (ಫಲಾನುಭವಿಗಳ ಸಹಿತವಾಗಿ ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಲ್ಲಿ ಮಂಜೂರಾಗಿರುವ ಸಿಬ್ಬಂದಿ ಸಂಖ್ಯೆ ಎಷ್ಟು, ಇದರಲ್ಲಿ ಖಾಯಂ ಸಿಬ್ಬಂದಿ ಎಷ್ಟು ; ನಿಯೋಜನೆಯ ಸಿಬ್ಬಂದಿ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

## ಕೃಷಿ ಮಾರುಕಟ್ಟೆಗೆ ಸಂಬಂಧಪಟ್ಟಂತೆ ಕೇಂದ್ರ ಯೋಜನೆಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :-**

೩೯ (೫೦) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ಕೇಂದ್ರ ಸರ್ಕಾರದ ಯಾವ ಯಾವ ಯೋಜನೆಗಳು ಜಾರಿಯಲ್ಲಿರುತ್ತವೆ ; ಇದ್ದಲ್ಲಿ, ಕಳೆದ ೧೦ ವರ್ಷಗಳಲ್ಲಿ ಕೇಂದ್ರ ಸರ್ಕಾರ ಸದರಿ ಯೋಜನೆಗಳ ಅನುಷ್ಠಾನಕ್ಕೆ ಬಿಡುಗಡೆ ಮಾಡಿರುವ ಅನುದಾನ/ಸಹಾಯಧನ ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಕರ್ನಾಟಕದ ಎಷ್ಟು ರೈತರಿಗೆ ನೈಸರ್ಗಿಕ ವಿಕೋಪದ ಅಡಿಯಲ್ಲಿ ಬೆಳೆ

ವಿಮೆಯನ್ನು ನೀಡಿರುತ್ತದೆ ; ರೈತರಿಗೆ ಬಾಕಿ ಇರುವ ಹಣವೆಷ್ಟು ; (ವರ್ಷವಾರು ವಿವರಗಳನ್ನು ಒದಗಿಸುವುದು)

(ಇ) ಕರ್ನಾಟಕದ ರೈತರಿಗೆ ಅನುಕೂಲವಾಗುವ ಯಾವ ಯಾವ ಬೆಳೆಗಳಿಗೆ ಮತ್ತು ಉತ್ಪನ್ನಗಳಿಗೆ ಕೇಂದ್ರ ಸರ್ಕಾರ ಬೆಂಬಲ ಬೆಲೆಯನ್ನು ನೀಡುತ್ತಿದೆ ; ಕಳೆದ ೧೦ ವರ್ಷಗಳಲ್ಲಿ ಕನಿಷ್ಠ ಬೆಂಬಲ ಬೆಲೆಯ ಅಡಿಯಲ್ಲಿ ಕರ್ನಾಟಕದ ರೈತರಿಗೆ ಬಿಡುಗಡೆ ಮಾಡಿರುವ ಅನುದಾನ/ಸಹಾಯಧನ ಎಷ್ಟು ; (ವಿವರಗಳನ್ನು ಒದಗಿಸುವುದು)

(ಈ) ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಆನ್‌ಲೈನ್ ಮಾರುಕಟ್ಟೆ (ಇ–ನಾಮ್) ಅಡಿಯಲ್ಲಿ ಇಲ್ಲಿಯವರಿಗೆ ಕರ್ನಾಟಕದಲ್ಲಿ ಎಷ್ಟು ಮೌಲ್ಯದ ಆನ್‌ಲೈನ್ ವ್ಯವಹಾರ ನಡೆದಿರುತ್ತದೆ ; ಇದರಿಂದ ಕರ್ನಾಟಕದ ಕೃಷಿ ಮಾರುಕಟ್ಟೆ ಇಲಾಖೆಗೆ ಬಂದಿರುವ ಆದಾಯವೆಷ್ಟು ? (ವಿವರಗಳನ್ನು ಒದಗಿಸುವುದು)

## ತೋಟಗಾರಿಕೆ ಇಲಾಖೆಯ ತೆಂಗು ಬೆಳೆ ಮಾಹಿತಿ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೪೦ (೫೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಹುತೇಕ ರೈತರು ತೆಂಗು ಬೆಳೆಯ ಅವಲಂಬಿತರಾಗಿದ್ದು, ಕೇಂದ್ರ ವಲಯದ ತೆಂಗು ಅಭಿವೃದ್ಧಿ ಮಂಡಳಿಯನ್ನು ಕೇರಳದಿಂದ ಕರ್ನಾಟಕಕ್ಕೆ ಸ್ಥಳಾಂತರಿಸಲು ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿದೆಯೇ ; ಇಲ್ಲದೇ ಇದ್ದಲ್ಲಿ, ಯಾವಾಗ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಇಂತಹ ಪ್ರಸ್ತಾವನೆ ಸಲ್ಲಿಸುವುದು ;

(ಆ) ಕೇಂದ್ರ ವಲಯದ ತೆಂಗು ಅಭಿವೃದ್ಧಿ ಮಂಡಳಿ ಸಮಗ್ರ ಬೇಸಾಯದ ಅಡಿಯಲ್ಲಿ ನೀಡುತ್ತಿರುವ ಅನುದಾನ/ಸಹಾಯಧನ ಎಷ್ಟು ; ಕಳೆದ ಹತ್ತು ವರ್ಷಗಳಲ್ಲಿ ರಾಜ್ಯದ ತೆಂಗು ಬೆಳೆ ಗಾರರಿಗೆ ಬಿಡುಗಡೆ ಮಾಡಿರುವ ಸಹಾಯಧನವೆಷ್ಟು ; (ವರ್ಷವಾರು ವಿವರಗಳನ್ನು ಒದಗಿಸುವುದು)

(ಇ) ತೆಂಗು ಬೆಳೆಯ ಅಭಿವೃದ್ಧಿ ಯೋಜನೆಯಲ್ಲಿ ರಾಜ್ಯ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು; ಕಳೆದ ೩ ವರ್ಷಗಳಲ್ಲಿ ನೀಡಿರುವ ಅನುದಾನಗಳ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು ;

(ಈ) ರಾಜ್ಯದಲ್ಲಿ ತೆಂಗು ಬೆಳೆಯ ವಿಸ್ತೀರ್ಣ ಎಷ್ಟು ಮತ್ತು ಇದನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ರೈತರಿಗೆ ಯಾವ ಯಾವ ಯೋಜನೆಗಳಲ್ಲಿ ತೆಂಗು ಬೆಳೆಗೆ ಅನುದಾನ ನೀಡಲಾಗುತ್ತಿದೆ ;

(ಉ) ತೆಂಗು ಬೆಳೆ ಮತ್ತು ತೆಂಗಿನ ಮರದ ಮೂಲಕ ದೊರೆಯುವ ಉತ್ಪನ್ನಗಳ ಮಾರುಕಟ್ಟೆಗೆ ರಾಜ್ಯ ಸರ್ಕಾರ ಯಾವ ಯಾವ ಯೋಜನೆಗಳನ್ನು ಕೈಗೊಂಡಿರುತ್ತದೆ ; ತೆಂಗು ಅಭಿವೃದ್ಧಿ ಮಂಡಳಿಗೆ ಕಳೆದ ೧೦ ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು ? (ವರ್ಷವಾರು ವಿವರಗಳನ್ನು ಒದಗಿಸುವುದು)

## ಪುರಸಭೆ ಮತ್ತು ಪಟ್ಟಣ ಪಂಚಾಯಿತಿಯಲ್ಲಿನ ಜೂನಿಯರ್ ಪ್ರೋಗ್ರಾಮರ್‌ಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೪೧ (೫೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಜಿಲ್ಲಾಧಿಕಾರಿಗಳಿಂದ ನೇಮಕಗೊಂಡು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಜೂನಿಯರ್ ಪ್ರೋಗ್ರಾಮರ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನವೆಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸುಮಾರು ೧೦ ರಿಂದ ೧೫ ವರ್ಷದವರೆಗೆ ಕಾರ್ಯನಿರ್ವಹಿಸುತ್ತಾ ಬಂದಿರುವ ಜೂನಿಯರ್ ಪ್ರೋಗ್ರಾಮರ್ ಸಿಬ್ಬಂದಿಗಳಿಗೆ ಸೇವಾ ಭದ್ರತೆ ಇಲ್ಲದೆ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಸಿಬ್ಬಂದಿಗಳಿಗೆ ಯಾವ ಕಾಲಮಿತಿಯಲ್ಲಿ ಸೇವಾ ಭದ್ರತೆ ನೀಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸುಮಾರು ವರ್ಷದಿಂದ ಕಾರ್ಯನಿರ್ವಹಿಸುತ್ತಾ ಬಂದಿರುವ ಜೂನಿಯರ್ ಪ್ರೋಗ್ರಾಮರ್ ಸಿಬ್ಬಂದಿಗಳಲ್ಲಿ ಅಕಾಲಿಕ ಮರಣ ಹೊಂದಿ ಎಷ್ಟು ಕುಟುಂಬಗಳು ಬೀದಿ ಪಾಲಾಗಿದೆ ; ಬೀದಿ ಪಾಲಾಗಿರುವ ಕುಟುಂಬಕ್ಕೆ ನ್ಯಾಯ ದೊರುಕುವುದು ಯಾವಾಗ ಮತ್ತು ಇದ್ದಕ್ಕೆ ಯಾರು ಹೊಣೆ ;

(ಈ) ದಿನಾಂಕ:೨೪.೦೩.೨೦೨೩ ರಂದು ನಡೆದ ಸಚಿವ ಸಂಪುಟದಲ್ಲಿ ನಿರ್ಣಯಿಸಿದಂತೆ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಜಿಲ್ಲಾಧಿಕಾರಿಗಳಿಂದ ನೇಮಕಗೊಂಡು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಜೂನಿಯರ್ ಪ್ರೋಗ್ರಾಮರ್ ಸಿಬ್ಬಂದಿಗಳಿಗೆ ಶೇ೫% ರಷ್ಟು ವೇತನವನ್ನು ಹೆಚ್ಚಿಸಿದ್ದಾದರು ಸಹಿತ ಕನಿಷ್ಠ/ಸಮಾನ ವೇತನಕ್ಕೆ ಸರಿ ಸಮಾನ ಇಲ್ಲದಿರುವ ಬಗ್ಗೆ

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಸಿಬ್ಬಂದಿಗಳಿಗೆ ಯಾವಾಗ ಕನಿಷ್ಠ/ಸಮಾನ ವೇತನ ನೀಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸುಮಾರು ೧೦ ರಿಂದ ೧೫ ವರ್ಷದವರೆಗೆ ಕಾರ್ಯನಿರ್ವಹಿಸುತ್ತಾ ಬಂದಿರುವ ಜೂನಿಯರ್ ಪ್ರೋಗ್ರಾಮರ್ ಸಿಬ್ಬಂದಿಗಳು ಹಾಗೂ ಅವರ ಅವಲಂಬಿತ ಕುಟುಂಬದವರಿಗೆ ಯಾವುದೇ ಅಹಿತಕರ ಘಟನೆಯಾಗಿದ್ದಲ್ಲಿ, ಸರ್ಕಾರವು ಇವರಿಗೆ ನೀಡಿರುವ ಪರಿಹಾರ ಏನು ; ಇವರನ್ನು ಗುತ್ತಿಗೆ ಪದ್ಧತಿಯಲ್ಲಿ ದುಡಿಸುತ್ತಿರುವುದು ಸರ್ಕಾರದ ನಿರ್ಲಕ್ಷ್ಯತನ ಎಂದು ಕಾಣಿಸುತ್ತಿಲ್ಲವೇ ?

## ಸಿಂಧನೂರು ನಗರದಲ್ಲಿ ಸುಸಜ್ಜಿತವಾದ ಪಾರ್ಕ್ ನಿರ್ಮಾಣ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೪೨ (೫೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ನಗರಕ್ಕೆ ಹೊಂದಿಕೊಂಡಂತೆ ಇರುವ ತೋಟಗಾರಿಕೆ ಇಲಾಖೆಯ ಸುಮಾರು ೨೨ ಎಕರೆ ೧೧ ಗುಂಟೆ ಜಾಗವು ಸರಿಯಾದ ರೀತಿಯಲ್ಲಿ ಸದ್ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಿಂಧನೂರು ನಗರದ ನಿವಾಸಿಗಳು ಬೆಳಿಗ್ಗೆ ಹಾಗು ಸಂಜೆಯ ಸಮಯದಲ್ಲಿ ವಾಯುವಿಹಾರಕ್ಕೆ ಹೋಗಲು ಅನುಕೂಲವಾಗಿರುವ ಸುಸಜ್ಜಿತವಾದ ಪಾರ್ಕ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ಪ್ರಸ್ತಾಪಿತ ತೋಟಗಾರಿಕೆ ಇಲಾಖೆಯ ಜಾಗದಲ್ಲಿ ಸಿಂಧನೂರು ನಗರದ ನಿವಾಸಿಗಳಿಗೆ ವಾಯು ವಿಹಾರಕ್ಕೆ ಅನುಕೂಲವಾದ ಮಾದರಿಯಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಒಳಗೊಂಡ ಒಂದು ಸುಸಜ್ಜಿತವಾದ ಪಾರ್ಕ್ ಅನ್ನು ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ನಿಲುವೇನು ?

## ಸಿಂಧನೂರು ತಾಲ್ಲೂಕಿನಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩ (೫೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಯಾವುದೇ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಸ್ಥಾಪನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಲ್ಲಾ ರಂಗಗಳಲ್ಲಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿನಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರಸ್ತುತ ಸಿಂಧನೂರು ತಾಲ್ಲೂಕಿನಲ್ಲಿ ಯಾವುದಾದರೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ಥಾಪಿಸಲಾಗುವುದು ?

# ಸಿ.ಎಸ್.ಆರ್. ಯೋಜನೆಯಡಿ ಸಂಗ್ರಹವಾಗಿರುವ ದೇಣಿಗೆಯ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪ (೫೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಕಾರ್ಪೊರೇಟ್ ಕಂಪನಿಗಳ ಸಂಖ್ಯೆ ಎಷ್ಟು; ಅವು ಯಾವವು; (ಸಂಪೂರ್ಣ ವಿವರ ನೀಡುವುದು)

(ಆ) ಈ ಕಂಪನಿಗಳು ಕಳೆದ ೨ ವರ್ಷಗಳಲ್ಲಿ ಸಿ.ಎಸ್.ಆರ್ (ಕಾರ್ಪೊರೇಟ್ ಸೋಶಿಯಲ್ ರೇಸ್ಪಾನ್ಸಿಬಲಿಟಿ) ಯೋಜನೆಯಡಿ ಸರ್ಕಾರಕ್ಕೆ ನೀಡಿರುವ ದೇಣಿಗೆ ಎಷ್ಟು; (ವರ್ಷವಾರು ಮತ್ತು ಕಂಪನಿವಾರು ಮಾಹಿತಿ ನೀಡುವುದು)

(ಇ) ಈ ದೇಣಿಗೆಯಿಂದ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಯಾವ ಯಾವ ಸಾರ್ವಜನಿಕ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಕಾರ್ಪೊರೇಟ್ ಕಂಪನಿಗಳು ಸಿ.ಎಸ್.ಆರ್ (ಕಾರ್ಪೊರೇಟ್ ಸೋಶಿಯಲ್ ರೇಸ್ಪಾನ್ಸಿಬಲಿಟಿ) ಯೋಜನೆಯಡಿ ಸಾರ್ವಜನಿಕ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಸರ್ಕಾರವು ಯಾವ ರೀತಿ ನಿಗಾವಹಿಸುತ್ತಿದೆ? (ವಿವರ ನೀಡುವುದು)

## ಹೆಬ್ಬುಗೋಡಿಯ ನಗರಸಭೆಯ ತಿರುಪಾಳ್ಯ ಪ್ರದೇಶದಲ್ಲಿ ಅನಧಿಕೃತ ಕಟ್ಟಡ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫ (೫೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಬ್ಬುಗೋಡಿ ಕಾರ್ಪೊರೇಷನ್ ತಿರುಪಾಳ್ಯ ಪ್ರದೇಶದಲ್ಲಿ ಯಾವೆಲ್ಲ ಅಕ್ರಮ ಕಟ್ಟಡ ನಿರ್ಮಾಣಗಳ ಪತ್ತೆಯಾಗಿವೆ ; (ವಿವರ ನೀಡುವುದು)

(ಆ) ಈ ಅಕ್ರಮ ಕಟ್ಟಡಗಳ ವಿರುದ್ಧ ಸರ್ಕಾರವು ಯಾವ ಯಾವ ಕ್ರಮಗಳನ್ನು ಜರುಗಿಸಿದೆ ;

(ಇ) ಈ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ನ್ಯಾಯಾಲಯದ ಪ್ರಕರಣಗಳು ಅಥವಾ ಸ್ಥಗಿತ ಆದೇಶಗಳು (Stay Order) ಇರುತ್ತವೆಯೇ ;

(ಈ) ಈ ಅಕ್ರಮ ಕಟ್ಟಡ ನಿರ್ಮಾಣಗಳಿಂದ ಸಾರ್ವಜನಿಕ ರಸ್ತೆಗಳು ರಾಜಕಾಲುವೆ ಅಥವಾ ಸರ್ಕಾರಿ ಭೂಮಿಗೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಅಕ್ರಮ ಕಟ್ಟಡಗಳ ವಿರುದ್ಧ ಕಾರಣ ತೋರಿಸಿ ಕೆಲಸ ನಿಲ್ಲಿಸುವ ನೋಟೀಸ್ ನೀಡಲಾಗಿದೆಯೇ ?

## ಬೆಂಗಳೂರು ನಗರ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ನೀಡಿರುವ ಅನುದಾನ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬ (೫೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು: (ವಿವರ ನೀಡುವುದು)

(ಆ) ಈ ಸಂಸ್ಥೆಗಳಿಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಯಾವ ಯಾವ ಯೋಜನೆಗಳಡಿಯಲ್ಲಿ ಅನುದಾನವನ್ನು ಒದಗಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಈ ಸಂಸ್ಥೆಗಳಿಂದ ಯಾವ ಯಾವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ;

(ಈ) ನಗರಸಭೆ ಮತ್ತು ಪುರಸಭೆಗಳಲ್ಲಿ ಕಳೆದ ೨ ವರ್ಷಗಳಿಂದ ಎಷ್ಟು ಹೊಸ ಕಾಮಗಾರಿಗಳನ್ನು ಕೈಗೊಂಡಿದ್ದು ಮತ್ತು ಎಷ್ಟು ಅನುದಾನವನ್ನು ಖರ್ಚು ಮಾಡಲಾಗಿದೆ ? (ವಿವರ ನೀಡುವುದು)

## ಕೃಷಿ ಉತ್ಪನ್ನ ಮಾರುಕಟ್ಟೆಗಳಿಗೆ ಸರ್ಕಾರ ಹೂಡಿದ ಬಂಡವಾಳದ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭ (೬೦) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಾಣಿಜ್ಯ ಸಂಕೀರ್ಣ ಸಹಿತ ಒಟ್ಟು ಕೃಷಿ ಮಾರುಕಟ್ಟೆ (ಎಪಿಎಂಸಿ) ಕಟ್ಟಡಗಳನ್ನು ಯಾವಾಗ ನಿರ್ಮಿಸಲಾಗಿತ್ತು ; ಅವುಗಳಿಗಾಗಿ ಸರ್ಕಾರ ವ್ಯಯಿಸಿದ ಒಟ್ಟು ಮೊತ್ತವೆಷ್ಟು ;

(ಆ) ರಾಜ್ಯದಲ್ಲಿ ವಾಣಿಜ್ಯ ಸಂಕೀರ್ಣ ಸಹಿತ ಒಟ್ಟು ಕೃಷಿ ಮಾರುಕಟ್ಟೆ (ಎಪಿಎಂಸಿ) ೧೬.೬೪೪ ಕಟ್ಟಡಗಳ ಪೈಕಿ ಲೀಸ್/ಬಾಡಿಗೆಗೆ ನೀಡಿರುವ ಕಟ್ಟಡಗಳೆಷ್ಟು ; ಅವುಗಳಲ್ಲಿರುವ ಒಟ್ಟು ಅಂಗಡಿ ಕೋಣೆಗಳೆಷ್ಟು ; ಅವುಗಳಲ್ಲಿ ಲೀಸ್/ಬಾಡಿಗೆಗೆ ನೀಡಿರುವ ಅಂಗಡಿ ಕೋಣೆಗಳೆಷ್ಟು ;

(ಇ) ವಾಣಿಜ್ಯ ಸಂಕೀರ್ಣ ಸಹಿತ ಒಟ್ಟು ಕೃಷಿ ಮಾರುಕಟ್ಟೆ (ಎಪಿಎಂಸಿ) ಒಟ್ಟು ಕಟ್ಟಡಗಳ ಹಾಗೂ ಅಂಗಡಿಕೋಣೆಗಳ ಪೈಕಿ ಖಾಲಿಯಿರುವ ಕಟ್ಟಡ ಮತ್ತು ಅಂಗಡಿಕೋಣೆಗಳ ಸಂಖ್ಯೆಯೆಷ್ಟು; ಅವುಗಳ ವಾರ್ಷಿಕ ನಿರ್ವಹಣಾ ವೆಚ್ಚವೆಷ್ಟು; ಮತ್ತು ಅದನ್ನು ಯಾವ ನಿಧಿಯಿಂದ ಭರಿಸಲಾಗುತ್ತಿದೆ ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಎಪಿಎಂಸಿ ವಾಣಿಜ್ಯ ಸಂಕೀರ್ಣ ಕಟ್ಟಡಗಳಲ್ಲಿನ ಖಾಲಿಯಿರುವ ಅಂಗಡಿಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡುವ ನಿಟ್ಟಿನಲ್ಲಿ ಇಲಾಖೆ ಕೈಗೊಂಡಿರುವ ಕ್ರಮಗಳೇನು ; ಈ ಕುರಿತು ಅಧ್ಯಯಾನಕ್ಕಾಗಿ ಯಾವಾಗ ಸಮಿತಿ ರಚಿಸಲಾಗಿತ್ತು ; ವರದಿಯ ಮುಖ್ಯಾಂಶಗಳೇನು ; ಸದರಿ ಸಮಿತಿಯ ವರದಿಯನ್ನು ಯಾವಾಗ ಅನುಷ್ಠಾನಿಸಲಾಗುವುದು ?

## ಕರ್ನಾಟಕ ರಾಜ್ಯದಲ್ಲಿ ಗುಡಿ ಕೈಗಾರಿಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮ (೬೧) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ರೀತಿಯ ಕೈಗಾರಿಕೆಗಳನ್ನು ಸಣ್ಣ ಮತ್ತು ಗುಡಿ ಕೈಗಾರಿಕೆಗಳೆಂದು ಗುರುತಿಸಲಾಗಿದೆ ; ಅವುಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಒಟ್ಟು ಕೈಗಾರಿಕಾ ವಲಯದಲ್ಲಿ ಸಾಮಾಗ್ರಿ ಮತ್ತು ಸೇವೆಗಳ ಉತ್ಪಾದನೆ ಮತ್ತು ಉದ್ಯೋಗ ನೀಡುವಲ್ಲಿ ಸಣ್ಣ ಮತ್ತು ಅತೀ ಸಣ್ಣ ಹಾಗೂ ಗುಡಿ ಕೈಗಾರಿಕೆಗಳ ಶೇಕಡಾವಾರು ಪಾಲು ಎಷ್ಟು ;

(ಇ) ರಾಜ್ಯದಲ್ಲಿ ಸಣ್ಣ ಮತ್ತು ಗುಡಿ ಕೈಗಾರಿಕೆಗಳನ್ನು ಸ್ಥಾಪಿಸಲು ಮತ್ತು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವ ಯಾವ ಸಂಸ್ಥೆಗಳಿಂದ ಸಾಲ ಸೌಲಭ್ಯ, ತಾಂತ್ರಿಕ ಸಹಾಯ ಮಾರುಕಟ್ಟೆ ವಿಸ್ತರಣೆ ಸಹಾಯವನ್ನು ನೀಡಲಾಗುತ್ತಿದೆ ;

(ಈ) ಸಣ್ಣ ಮತ್ತು ಗುಡಿ ಕೈಗಾರಿಕೆಗಳಿಗೆ ಸರ್ಕಾರದಿಂದ ತೆರಿಗೆ ವಿನಾಯಿತಿ ಮತ್ತು ಇತರ ರಿಯಾಯಿತಿಗಳನ್ನು ನೀಡಲಾಗುತ್ತಿದೆಯೇ ; ನೀಡುತ್ತಿದ್ದರೆ, ಎಷ್ಟು ನೀಡಲಾಗುತ್ತದೆ ;

(ಉ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಸಣ್ಣ ಮತ್ತು ಗುಡಿ ಕೈಗಾರಿಕೆಗಳಿವೆ ; ಅವುಗಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು ?

## ಏಕ/ಬಹು ಬಡಾವಣೆ ವಿನ್ಯಾಸ ಅನುಮೋದನೆ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯ (೬೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ (ಕ.ಪ.ಗ್ರಾ.ಯೋ) ಇಲಾಖೆ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯಿದೆ, ೨೦೨೫ರ ಮೂಲಕ ೪ ಕೆ ಸೇರ್ಪಡೆ ಮಾಡಲು ಕಾರಣವೇನು ; ಹೆಚ್ಚುವರಿ ಕೆಲಸದ ಒತ್ತಡ ನಿರ್ವಹಿಸಲು ಅಗತ್ಯ ಸಿಬ್ಬಂದಿಯನ್ನು ಯಾವಾಗ ಒದಗಿಸಲಾಗುವುದು ;

(ಆ) ಗ್ರಾಮಾಂತರ ಪ್ರದೇಶದಲ್ಲಿ ವಸತಿ ಯೋಜನೆ/ಹಕ್ಕುಪತ್ರ ೯೪ಸಿ/ಸಿಸಿ ಮನೆ/ನಿವೇಶನ, ಕಂದಾಯ/ಸರ್ಕಾರ/ಅರಣ್ಯ ಭೂಮಿಯಲ್ಲಿರುವ, ಭೂನ್ಯಾಯ ಮಂಡಳಿಯಿಂದ ಮಂಜೂರಾದ ಭೂಮಿ, ಡಿಸಿ ವನ್ನಾ ಇತ್ಯಾದಿ ಭೂಮಿಯಲ್ಲಿರುವ ಮನೆ/ಕಟ್ಟಡ, ಕರ್ನಾಟಕ ಭೂ ಸುಧಾರಣಾ ಕಾಯ್ದೆ, ೧೯೬೧ರ ೩೮ಎ ರಡಿ ಇರುವ ವಾಸ್ತವ್ಯ ಮನೆ, ಇತ್ಯಾದಿಗಳೇ ಹೆಚ್ಚು ಇದ್ದು ಕೆಲವೇ ಭೂಪರಿವರ್ತಿತ ಬಡಾವಣೆಗಳಿಗೆ ಮಾತ್ರ ೪ ಕೆ ನಿಯಮಾವಳಿಗಳು ಅನ್ವಯವಾಗುತ್ತಿದ್ದು ಉಳಿದ ಮನೆ ಕಟ್ಟಡಗಳು ಯೋಜನಾ ರಹಿತವಾಗಿ ಬೆಳೆಯುವುದನ್ನು ಅಥವಾ ಮುಂದುವರಿಯುವುದನ್ನು ತಡೆಯಲು ಸರ್ಕಾರದ ಕ್ರಮಗಳೇನು ;

(ಇ) ನಗರ ಮತ್ತು ಗ್ರಾಮಾಂತರ ಯೋಜನಾ (ಕ.ಪ.ಗ್ರಾ.ಯೋ) ಇಲಾಖೆ ೪ ಕೆ ಸೇರ್ಪಡೆ ಮಾಡುವಾಗ ಸ್ಥಳೀಯ ಯೋಜನಾ ಪ್ರದೇಶದ ಹೊರತುಪಡಿಸಿದ ಪ್ರದೇಶಗಳಲ್ಲಿ ಮಹಾ ಯೋಜನೆ ರೂಪಿಸದೆ ಅಡ್ ಹಾಕ್ ಮಾದರಿಯ ಕ್ರಮದಿಂದಾಗಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ವಿನ್ಯಾಸ ಬಡಾವಣೆ ಅನುಮೋದನೆ ಯೋಜನಾ ರಹಿತವಾಗಿ ಮುಂದುವರಿಯುತ್ತಿರುವ ಬಗ್ಗೆ ಸರ್ಕಾರದ ಕ್ರಮಗಳೇನು ;

(ಈ) ಉಭಯ ಜಿಲ್ಲೆಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಜಾಗಗಳಲ್ಲಿ ರಸ್ತೆ ಹಾದುಹೋಗುತ್ತಿದ್ದು, ಹೆಚ್ಚಿನ ಪ್ರಕರಣಗಳಲ್ಲಿ ಈ ಕಾರಣದಿಂದ ನಿವೇಶನ ಅನುಮೋದನೆ ತಿರಸ್ಕೃತಗೊಳ್ಳುವ ಬಗ್ಗೆ ಸರ್ಕಾರದ ಗಮನಕ್ಕೆ ತಂದ ಬಳಿಕ ಅಗತ್ಯ ಕ್ರಮ ವಹಿಸಿದೆಯೇ ; ಯಾವಾಗ ಈ ಕುರಿತು ಕ್ರಮವಹಿಸಲಾಗುತ್ತದೆ ?

# ಕರ್ನಾಟಕ ರಾಜ್ಯದ ಪೌರಾಡಳಿತ ಸಂಸ್ಥೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೦ (೬೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಸ್ಥಳೀಯ ಸಂಸ್ಥೆಗಳ ಅಧೀನದಲ್ಲಿ ಇರುವ ಸ್ಥಿರ ಮತ್ತು ಚರ ಆಸ್ತಿಗಳು ಮತ್ತು ಆದಾಯ ತರುವ ಆಸ್ತಿ ಸಂಪನ್ಮೂಲಗಳು (Assets) ಯಾವುವು ;

(ಆ) ರಾಜ್ಯದ ಯಾವ್ಯಾವ ಪೌರಾಡಳಿತ ಸ್ಥಳೀಯ ಸಂಸ್ಥೆಗಳ ಬಳಿ ಸ್ವಂತ ಕಟ್ಟಡ, ವಾಣಿಜ್ಯ ಸಂಕೀರ್ಣಗಳು, ಸಭಾ ಭವನ, ಉದ್ಯಾನವನ, ಆಟದ ಮೈದಾನ, ಇತರ ಇಲಾಖೆಯ ಕಚೇರಿ ಕಟ್ಟಡಗಳು ಇವೆ ;

(ಇ) ಯಾವ ಸ್ಥಳೀಯ ಸಂಸ್ಥೆಗಳು ಬಾಡಿಗೆ ಕಟ್ಟಡಗಳಲ್ಲಿ ಕಚೇರಿ ಮತ್ತು ವಿವಿಧ ಇಲಾಖಾ ಕಚೇರಿಗಳು ಕಾರ್ಯನಿರ್ವಹಿಸುತ್ತಿವೆ ; ಸದರಿ ಕಚೇರಿಗಳಿಗೆ ಮತ್ತು ಇತರ ನಾಗರೀಕ ಸೌಕರ್ಯಗಳಿಗೆ ಸ್ವಂತ ಜಾಗಗಳನ್ನು ಹೊಂದಲು ಯಾವಾಗ ಕ್ರಮ ವಹಿಸಲಾಗುತ್ತಿದೆ ;

(ಈ) ಯಾವ ಸ್ಥಳೀಯ ಸಂಸ್ಥೆಗಳು ಸ್ವಂತ ಮತ್ತು ಬಾಡಿಗೆ ವಾಹನಗಳನ್ನು ಹೊಂದಿವೆ ; ಅವುಗಳನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತದೆ ;

(ಉ) ದಕ್ಷಿಣ ಕನ್ನಡ ಉಡುಪಿ ಜಿಲ್ಲೆಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳಲ್ಲಿ ಇರುವ ವಾಹನಗಳೆಷ್ಟು; ಅವುಗಳನ್ನು ಯಾರು ನಿರ್ವಹಿಸುತ್ತಿದ್ದಾರೆ ; ಸದರಿ ಸಾರಿಗೆ ವಾಹನ ಮತ್ತು ತಾಂತ್ರಿಕ ವಾಹನಗಳಾದ ಕಸ ಸಂಗ್ರಹಣಾ, ಹಿಟಾಚಿ, ಜೆ.ಸಿ.ಬಿ ಇತ್ಯಾದಿಗಳು ಸಿಬ್ಬಂದಿಗಳಿಲ್ಲದೆ ನಿರುಪಯುಕ್ತವಾಗಿರುವ ಪ್ರಕರಣಗಳೆಷ್ಟು ; ಅಗತ್ಯ ಸಿಬ್ಬಂದಿಗಳನ್ನು ನೇಮಿಸಲು ಕೈಗೊಂಡ ಕ್ರಮಗಳೇನು ?

# ಮೈಸೂರು ಮಹಾನಗರ ಪಾಲಿಕೆಯನ್ನು ಗ್ರೇಟರ್ ಮೈಸೂರನ್ನಾಗಿಸಿರುವ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೫೧ (೬೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮಹಾನಗರ ಪಾಲಿಕೆಯನ್ನು ಗ್ರೇಟರ್ ಮೈಸೂರನ್ನಾಗಿ ಸರ್ಕಾರ ರೂಪಿಸಿದ್ದು, ಇದು ಎಷ್ಟು ಕಿ.ಮಿ ವ್ಯಾಪ್ತಿಗೆ ವಿಸ್ತರಣೆಗೊಳ್ಳಲಿದೆ ;

(ಆ) ಗ್ರೇಟರ್ ಮೈಸೂರಿಗೆ ಎಷ್ಟು ಬಡಾವಣೆಗಳು ಹಾಗೂ ಗ್ರಾಮಗಳು ಸೇರ್ಪಡೆಗೊಳ್ಳಿಲಿದೆ ;

(ಇ) ಗ್ರೇಟರ್ ಮೈಸೂರು ನಿರ್ಮಾಣದಿಂದ ಸರ್ಕಾರದ ಅನುದಾನ ಹಾಗೂ ತೆರಿಗೆ ಸಂಗ್ರಹವು ಎಷ್ಟು ಹೆಚ್ಚಾಗಲಿದೆ : ಎಂದು ಅಂದಾಜಿಸಲಾಗಿದೆ ?

# ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ಸ್ವಾಮ್ಯದ ಕೈಗಾರಿಕೆಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೫೨ (೬೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಮತ್ತು ಕೇಂದ್ರ ಸರ್ಕಾರದ ಸ್ವಾಮ್ಯದ ಕೈಗಾರಿಕೆಗಳ ಸಂಖ್ಯೆ ಎಷ್ಟು; (ವಿವರ, ಹೆಸರು ವಿಳಾಸ ಮಹಿಳಾ ಮತ್ತು ಪುರುಷ ಕಾರ್ಮಿಕರು, ಸಿಬ್ಬಂದಿ ಸಂಖ್ಯೆ ತಿಳಿಸುವುದು)

(ಆ) ಹೆಬ್ಬಾಳು ವಿಶೇಷ ಹೂಡಿಕೆ ವಲಯದ ಕೆ.ಐ.ಎ.ಡಿ.ಬಿ.ಗೆ ತೆರಿಗೆ ಪಾವತಿಸಿದರೂ ಇ–ಖಾತೆ ನೀಡುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇ–ಖಾತಾ ಇಲ್ಲದೆ ಸಾಲ ಪಡೆಯಲು, ರೆನಿವಲ್ ಮಾಡಲು ಆಗದೆ ಕೈಗಾರಿಕೆಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರೋಗಗ್ರಸ್ಥ ಕೈಗಾರಿಕೆಗಳ ಪುನಃಶ್ಚೇತನಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಮೈಸೂರು ಜಿಲ್ಲೆಯಲ್ಲಿನ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೫೩ (೬೭) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿರುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ರೋಗಗ್ರಸ್ಥ ಮತ್ತು ಮುಚ್ಚಿ ಹೋಗಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ರೋಗಗ್ರಸ್ಥ ಕೈಗಾರಿಕೆಗಳ ಪುನಃಶ್ಚೇತನ ಯೋಜನೆ ನೀತಿ ಇದೆಯೇ ; ಇದ್ದರೆ ಪ್ರತಿ ನೀಡುವುದು ;

(ಇ) ರೋಗಗ್ರಸ್ಥ ಕೈಗಾರಿಕಾ ಪುನಃಶ್ಚೇತನ ಯೋಜನಾ ಸಮಿತಿ ರಚನೆಯಾಗಿದೆಯೇ ;

(ಈ) ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬನ್ನಿಮಂಟಪ ಕೈಗಾರಿಕಾ ಪ್ರದೇಶ ಎ ಮತ್ತು ಬಿ ಬಡಾವಣೆ, ಯಾದಗಿರಿ

ಕೈಗಾರಿಕಾ ಪ್ರದೇಶದ ಹಾಗೂ ಇಂಡಸ್ಟ್ರಿಯಲ್ ಸಬರ್ಬ್, ವಿಶ್ವೇಶ್ವರ ನಗರ ಕೈಗಾರಿಕಾ ಪ್ರದೇಶಗಳು ಎಷ್ಟೆಷ್ಟು ಎಕರೆ ಪ್ರದೇಶದಲ್ಲಿದೆ ; ಎಷ್ಟು ಕೈಗಾರಿಕೆಗಳು ಇಲ್ಲಿ ಕಾರ್ಯ ನಿರ್ವಹಿಸುತ್ತಿವೆ ; ಪುರುಷ ಮತ್ತು ಮಹಿಳಾ ಕಾರ್ಮಿಕರ ಸಂಖ್ಯೆ ತಿಳಿಸಿ ;

(ಉ) ಈ ಪ್ರದೇಶಗಳ ಮೂಲ ಸೌಲಭ್ಯ ರಸ್ತೆ, ಹೊರ ಚರಂಡಿ ಉನ್ನತೀಕರಣಗೊಳಿಸಲು ಕೈಗಾರಿಕಾ ಇಲಾಖೆಯಿಂದ ನಗರ ಪಾಲಿಕೆಗೆ ಆರ್ಥಿಕ ನೆರವು ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## ಕಬ್ಬು ಸಾಗಾಣಿಕೆ, ನಿರ್ವಹಣೆ ಮಾನದಂಡಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೫೪ (೬೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ನಿಗದಿ ಮಾಡಿದ FRP ೧೦.೨೫% ಇಳುವರಿ ಬದಲು. ೯.೫% ಆಧಾರದ ಮೇಲೆ ದರ ನಿಗಧಿ ಮಾಡಲಾಗುತ್ತಿದೆಯೇ ;

(ಆ) ೨೦೨೫–೨೬ ನೆ ಸಾಲಿನ ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಕಾಯ್ದಿಟ್ಟ ೩೦ ಕೋಟಿಗಳು ಆಯಾ ಸಕ್ಕರೆ ಕಾರ್ಖಾನೆಗಳಲ್ಲಿ ಮಾತ್ರ ಕಬ್ಬು ಲಾರಿಗಳ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸುವುದು, ಅದರ ಕೀಯನ್ನು APMC ಗಳು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುತ್ತಿವೆಯೇ ;

(ಇ) ಕಬ್ಬು ಸಾಗಾಣಿಕೆಯನ್ನು ಪ್ರತಿ ಕಿಲೋ ಮೀಟರ್‌ದಂತೆ ಸಾಗಾಣಿಕೆ ಮತ್ತು ಕಬ್ಬು ನಿರ್ವಹಣೆ (H&T) ಸರ್ಕಾರದ ಆದೇಶದ ಮಾನದಂಡನೆಗಳನ್ನು ಕಡ್ಡಾಯ ಪಾಲನೆ ಮಾಡಲಾಗುತ್ತಿದೆಯೇ ;

(ಎಕ್ಸ್ಲೋಫೀಲ್ಡ್)

(ಈ) ಆರ್ಥಿಕ ತಜ್ಞ ಸಿ. ರಂಗರಾಜನ್ ವರದಿಯಂತೆ, ಸಕ್ಕರೆ ನಂತರ, ಉತ್ಪಾದನೆ ಹಾಗೂ ಉಪ ಉತ್ಪನ್ನಗಳಾದ ಮೋಲಾಸಿಸ್, ಕೋಜನ್, ಬಯೋಗ್ಯಾಸ್, ಸಿಪ್ಪೆ, ವಿದ್ಯುತ್, ಇಥೆನಾಲ್ ದಂತಹ ಬಂದ ಆದಾಯದಲ್ಲಿ %೭೦-೩೦ ಅನುಪಾತದಲ್ಲಿ ಆದಾಯ ಹಂಚಿಕೆ ಸೂತ್ರ ಅಳವಡಿಸಲು ಸಾಧ್ಯವಾಗಬಹುದೇ ? (Revenue Sharing Formula)

## ಮೈಸೂರು ಮತ್ತು ಬೆಳಗಾವಿ ಜಿಲ್ಲೆಗಳ ಕೈಗಾರಿಕಾ ಪ್ರದೇಶಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೫ (೬೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮೈಸೂರು ಮತ್ತು ಬೆಳಗಾವಿನಂತಹ ಪ್ರಮುಖ ಕೈಗಾರಿಕಾ ಪ್ರದೇಶಗಳಲ್ಲಿ ಕಳಪೆ ರಸ್ತೆಗಳು, ವಿದ್ಯುತ್ ಅಡಚಣೆಗಳು ಮತ್ತು ಇತರೇ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕೊರತೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ಇಲ್ಲಿವರೆಗೂ ಸಹ ನುರಿತ ಕೆಲಸಗಾರರ ಕೊರತೆ ಇದ್ದು, ಈ ಸಮಸ್ಯೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ತರಬೇತಿ ಮತ್ತು ಇತ್ಯಾದಿ)

(ಈ) ಕೈಗಾರಿಕೆಗಳು, ವಿಶೇಷವಾಗಿ, MSME ಗಳು, ಸಕಾಲಿಕ ಮತ್ತು ಸಾಕಷ್ಟು ಔಪಚಾರಿಕ (accessing timely and adequate) ಸಾಲವನ್ನು ಪಡೆಯುವಲ್ಲಿ ತೊಂದರೆಗಳನ್ನು ಎದುರಿಸಿತ್ತಿರುವುದು ನಿಜವೇ ; ಇದಕ್ಕೆ ಕಾರಣಗಳೇನು ಮತ್ತು ಈ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ನಿಭಾಯಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ಶೋಷಿತ ವರ್ಗಗಳಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಜನರಿಗೆ ನಿವೇಶನಗಳನ್ನು/ಶೆಡ್‌ಗಳನ್ನು ಹಂಚಿಕೆ ಮಾಡಲು ಜಾರಿಯಲ್ಲಿರುವ ಮಾರ್ಗಸೂಚಿಗಳೇನು ಮತ್ತು ಶೇಕಡವಾರು ಎಷ್ಟು ನಿವೇಶನಗಳನ್ನು ಹಂಚಲು ಅವಕಾಶವಿದೆ ಮತ್ತು ಹಿಂದುಳಿದ ಜನರಿಗೆ ನಿವೇಶಗಳನ್ನು/ಶೆಡ್‌ಗಳನ್ನು ಎಷ್ಟು ದರದಲ್ಲಿ ಹಾಗೂ ಎಷ್ಟು ಶೇಕಡವಾರು ನಿವೇಶನಗಳನ್ನು ಕಳೆದ ೩ ವರ್ಷಗಳಲ್ಲಿ ಹಂಚಿಕೆ ಮಾಡಲಾಗಿದೆ ?

## ಸಣ್ಣ ಕೈಗಾರಿಕೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಎಂ .ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬ (೭೧) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ಕೈಗಾರಿಕಾ ಇಲಾಖೆ ವ್ಯಾಪ್ತಿಯಡಿಯಲ್ಲಿ ಬರುವ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ (ಕೆ.ಎಸ್.ಎಸ್.ಐ.ಡಿ.ಸಿ.) ವತಿಯಿಂದ ರಾಜ್ಯದಲ್ಲಿ ಕಳೆದ ಮೂರು

ವರ್ಷಗಳಲ್ಲಿ ಕೈಗಾರಿಕಾ ವಸಾಹತುಗಳಲ್ಲಿ ಎಷ್ಟು ನಿವೇಶನಗಳನ್ನು/ ಶೆಡ್‌ಗಳನ್ನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಉತ್ತೇಜಿಸಲು ಹಾಗೂ ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲು ಕಳೆದ ಮೂರು ವರ್ಷಗಳಲ್ಲಿ ಯಾವ ಜಿಲ್ಲೆಗಳಲ್ಲಿ ಎಷ್ಟು ಎಕರೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ;

(ಇ) ಪ್ರತ್ಯೇಕವಾಗಿ ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ನಿವೇಶನಗಳನ್ನು/ ಶೆಡ್‌ಗಳನ್ನು ಎಷ್ಟು ಉದ್ಯಮಿದಾರರಿಗೆ ನೀಡಲಾಗಿದೆ ಸೈಟ್‌ಗಳ/ಶೆಡ್‌ಗಳ ಹಂಚಿಕೆ ಮಾಡಲು ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ವಸಾಹತುಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಮದ ಉದ್ಯಮಿದಾರರಿಗೆ ನೆರವು ನೀಡಲಾಗುತ್ತಿದೆಯೇ ;

(ಉ) ಈ ನಿವೇಶನಗಳನ್ನು/ಶೆಡ್‌ಗಳನ್ನು ಹಂಚಿಕೆ ವಾಡುವ ಸಂದರ್ಭದಲ್ಲಿ ಮೀಸಲಾತಿಯನ್ನು ಪರಿಗಣಿಸಿ ಹಂಚಿಕೆ ಮಾಡಲಾಗುತ್ತಿದೆಯೇ ; ರಾಜ್ಯ ಮತ್ತು ದೇಶದ ಪ್ರಗತಿ/ಆರ್ಥಿಕ ಬೆಳವಣಿಗೆಯಲ್ಲಿ ಸಣ್ಣ ಕೈಗಾರಿಕೆಗಳ ಕೊಡುಗೆ ಎಷ್ಟು ?

## ರಾಜ್ಯದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಸಮಸ್ಯೆಗಳ ಕುರಿತು

**ಶ್ರೀ ಎಂ .ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭ (೭೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಪಶ್ಚಿಮ ಘಟ್ಟಗಳಲ್ಲಿ ಸರ್ವೋಚ್ಚ ನ್ಯಾಯಾಲಯವು ೨೦೧೨ರಿಂದ ಗಣಿಗಾರಿಕೆ ಮೇಲೆ ಸಂಪೂರ್ಣವಾಗಿ ನಿಷೇಧ ಹೇರಿದ್ದರೂ ಸಹ ಅನಿಯಂತ್ರಿತ ಗಣಿಗಾರಿಕೆ ಮುಂದುವರೆದಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ನಿಷೇಧ ಆದೇಶದ ವಿರುದ್ಧ ಅಕ್ರಮ ಗಣಿಗಾರಿಕೆ ಮಾಡುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ;

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪರಿಸರ ಸೂಕ್ಷ್ಮ ವಲಯಗಳಲ್ಲಿ (SEZ) ಎಷ್ಟು ಅಕ್ರಮ ಗಣಿಗಾರಿಕೆ ಪ್ರಕರಣಗಳು ನೋಂದಾಯಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳಲ್ಲಿ ಗಣಿಗಾರಿಕೆ ಕಂಪನಿಗಳ ವಿರುದ್ಧ ಕ್ರಮ ವಹಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಗಣಿಗಾರಿಕೆ ಹೆಸರಲ್ಲಿ ಮರಗಳನ್ನು ಕಡಿಯಲಾಗಿದೆ ; ಈ ಮರಗಳನ್ನು ನಿಯಮಾನುಸಾರ ಹರಾಜು ಮಾಡಲಾಗಿದೆಯೇ ? (ಜಿಲ್ಲಾವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಗರ ಯೋಜನೆ ಮತ್ತು ಭೂ ನಿರ್ವಹಣೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮ (೭೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ಭೂಮಿ ಮತ್ತು ಜಲಮೂಲಗಳ (public land and water bodies) ಮೇಲಿನ ಅಕ್ರಮ

ನಿರ್ಮಾಣಗಳು ಹಾಗೂ ಅತಿಕ್ರಮಣ ಸೇರಿದಂತೆ ಯೋಜಿತವಲ್ಲದ ಮತ್ತು ಅನಿಯಂತ್ರಿತ ನಗರ ಬೆಳವಣಿಗೆಯ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ೨೦೨೬ರ ಅಂತ್ಯಕ್ಕೆ ನಗರ ಬಳಕೆಗೆ ಅಂದಾಜು ಭೂಮಿಯ ಅವಶ್ಯಕತೆಗಳಿಗೆ ಅನುಗುಣವಾಗಿ ಮಾಸ್ಟರ್ ಪ್ಲಾನ್‌ಗಳು ಮತ್ತು ಭೂ–ಬಳಕೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗಿದೆ ಎಂದು ಸರ್ಕಾರ ಹೇಗೆ ಖಚಿತಪಡಿಸುತ್ತದೆ ;

(ಇ) ರಾಜ್ಯದಲ್ಲಿ ರಿಯಲ್ ಎಸ್ಟೇಟ್ ಅಭಿವೃದ್ಧಿಯ ಒತ್ತಡದ ನಡುವೆಯೂ ಪರಿಸರ ಸುಸ್ಥಿರತೆಗೆ ಅತ್ಯಗತ್ಯವಾದ ಉದ್ಯಾನವನಗಳು ಮತ್ತು ನೈಸರ್ಗಿಕ ಭೂದೃಶ್ಯಗಳನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೊಪ್ಪಳ ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ಸ್ಪಾಂಜ್ ಐರನ್ ಉತ್ಪಾದನಾ ಘಟಕಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯ (೭೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ಸ್ಪಾಂಜ್ ಐರನ್ ಉತ್ಪಾದನಾ ಘಟಕಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಸದರಿ ಸ್ಪಾಂಜ್ ಐರನ್ ಘಟಕಗಳಿಂದ ಹೊರಸೂಸುವ ಅಪಾಯಕಾರಿ ವಿಷಾನಿಲಗಳಿಂದ ಸುತ್ತ ಮುತ್ತಲಿನ ಗ್ರಾಮಸ್ಥರ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಕೈಗಾರಿಕೋದ್ಯಮಗಳು ಅನುಸರಿಸುತ್ತಿರುವ ಮಾಲಿನ್ಯ ನಿಯಂತ್ರಣ ಕ್ರಮಗಳ ಕುರಿತು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯ ವಿಶೇಷ ತಂಡದ ವತಿಯಿಂದ ಪರಿಶೀಲನೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಅದರ ವರದಿಯನ್ನು ಒದಗಿಸುವುದು ;

(ಈ) ಮಾಡದಿದ್ದಲ್ಲಿ, ವಿಶೇಷ ತಂಡದ ವತಿಯಿಂದ ಪರಿಶೀಲನೆ ಮಾಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಉ) ಈ ವರದಿಯಲ್ಲಿ ಉಲ್ಲೇಖಿಸಿದಂತೆ ಪರಿಸರ ಮಾಲಿನ್ಯ ನಿಯಂತ್ರಣ ಕ್ರಮಗಳನ್ನು ಅನುಸರಿಸದೇ ಇರುವ ಕಂಪನಿಗಳ ವಿರುದ್ಧ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

## ಕೊಪ್ಪಳ ಜಿಲ್ಲೆಯಲ್ಲಿ ೨೦೨೪-೨೦೨೫ನೇ ಸಾಲಿನಿಂದ ಇಲ್ಲಿಯವರೆಗೆ ಅಕ್ರಮ ಮರಳು ಸಾಗಾಣಿಕೆ ಪ್ರಕರಣಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೦ (೭೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿನಿಂದ ಇಲ್ಲಿಯವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಎಷ್ಟು ಅಕ್ರಮ, ಮರಳು ಸಾಗಾಣಿಕೆ ಪ್ರಕರಣಗಳು, ಅನಧಿಕೃತ ಗಣಿಗಾರಿಕೆ ಮತ್ತು ಖನಿಜ ಸಾಗಣೆ ಕುರಿತು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ಹಾಗೂ ಎಷ್ಟು ದಂಡ ಸಂಗ್ರಹಿಸಲಾಗಿದೆ ;

(ಆ) ಅಕ್ರಮ ಮರಳು ಸಾಗಾಣಿಕೆ ಹಾಗೂ ಅಕ್ರಮ ಗಣಿಗಾರಿಕೆಯಲ್ಲಿ ಪಾಲ್ಗೊಂಡವರ ವಿರುದ್ಧ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಇಂತಹ ಅಕ್ರಮಗಳಲ್ಲಿ ಪೊಲೀಸ್ ಇಲಾಖೆ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಶಾಮೀಲಾಗಿ ವರದಿಯಾಗಿರುವ ಪ್ರಕರಣಗಳು ಎಷ್ಟು ; ಹಾಗೂ ಅವರ ವಿರುದ್ಧ ಯಾವ ರೀತಿಯ ಶಿಸ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಬಿ–ಖಾತ ನೀಡುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೬೧ (೭೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಂದಾಯ ಬಡಾವಣೆಗಳಲ್ಲಿ ನಿರ್ಮಿಸಿದ ಮನೆಗಳಿಗೆ ಮತ್ತು ರಚಿಸಿರುವ ನಿವೇಶನಗಳಿಗೆ ಬಿ–ಖಾತ ನೀಡಲಾಗುತ್ತಿದೆಯೇ ;

(ಆ) ನೀಡಿದ್ದಲ್ಲಿ, ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಯಾವ ರೀತಿ ಅನುಕೂಲವಾಗಲಿದೆ ;

(ಇ) ಈ ರೀತಿ ನಗರ ಪಾಲಿಕೆ ಪುರಸಭೆ ಪಟ್ಟಣ ಪಂಚಾಯಿತಿಗಳಿಂದ ನೀಡಿದ ಭೂ ಖಾತಾ ನಿವೇಶನಗಳಿಗೆ ಮತ್ತು ಕಟ್ಟಡಗಳಿಗೆ ನಕ್ಷೆ ಅನುಮೋದನೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಪ್ರಕರಣಗಳು ದಾಖಲಾಗಿದೆ ; ಈ ರೀತಿ ಪ್ರಕರಣಗಳಲ್ಲಿ ನಕ್ಷೆ ಮಂಜೂರಾತಿ ನೀಡುವ ಬಗ್ಗೆ ಹಾಗೂ ಕ್ರಮವಹಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ನಗರಗಳ ಘನ ತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨ (೭೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಘನ ತ್ಯಾಜ್ಯ ನಿರ್ವಹಣೆಗೆ ಕಳೆದ ೩ವರ್ಷಗಳಲ್ಲಿ ಒಟ್ಟು ಎಷ್ಟು ಅನುದಾನವನ್ನು ಮಂಜೂರು ಮಾಡಿದೆ ; (ನಗರಸಭೆವಾರು ವಿವರ ನೀಡುವುದು)

(ಆ) ನೀಡಿರುವ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ (ಸಂಗ್ರಹ, ವಿಂಗಡಣೆ, ಸಾಗಣೆ, ಸಂಸ್ಕರಣೆ, ವಿಲೇವಾರಿ) ಬಳಸಲಾಗಿದೆ ; (ವಿವರ ನೀಡುವುದು)

(ಇ) ಅನುದಾನ ಬಳಕೆಯಲ್ಲಿ ಎಷ್ಟು ಹಣವನ್ನು ಮೂಲಸೌಕರ್ಯ ನಿರ್ಮಾಣಕ್ಕೆ (ಶೆಡ್, ವಾಹನ, ಯಂತ್ರೋಪಕರಣ) ವೆಚ್ಚ ಮಾಡಲಾಗಿದೆ ;

(ಈ) ಘನ ತ್ಯಾಜ್ಯ ಸಂಸ್ಕರಣೆಯಿಂದ (ಕಂಪೋಸ್ಟ್, ಮರುಬಳಕೆ ವಸ್ತುಗಳು, ಇತರ ಸರ್ಕಾರಕ್ಕೆ/ಸ್ಥಳೀಯ ಸಂಸ್ಥೆಗಳಿಗೆ ಎಷ್ಟು ಆದಾಯ ಬಂದಿದೆ ; (ವರ್ಷವಾರು ವಿವರ ನೀಡುವುದು)

(ಉ) ತ್ಯಾಜ್ಯದಿಂದ ಉತ್ಪಾದಿಸಿದ ಮರುಬಳಕೆ ವಸ್ತುಗಳು ಯಾವುವು ಅವುಗಳ ಮಾರಾಟ/ಬಳಕೆಯ ವಿವರ ನೀಡುವುದು ;

(ಊ) ನವೀಕರಣ (ಪುನರುತ್ಪಾದಕ/ಮರುಬಳಕೆ) ವಸ್ತುಗಳ ಸಂಸ್ಕರಣೆಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಋ) ಘನ ತ್ಯಾಜ್ಯ ನಿರ್ವಹಣಾ ಯೋಜನೆಗಳಲ್ಲಿ ಖಾಸಗಿ ಸಂಸ್ಥೆಗಳ ಪಾಲ್ಗೊಳ್ಳುವಿಕೆ ಇದ್ದರೆ, ಅವರ ಆಯ್ಕೆ ಪ್ರಕ್ರಿಯೆ ಮತ್ತು ಒಪ್ಪಂದದ ವಿವರವೇನು ;

(ಎ) ಅನುದಾನ ದುರ್ಬಳಕೆ ಅಥವಾ ಅಪೂರ್ಣ ಕಾಮಗಾರಿಗಳ ಬಗ್ಗೆ ಯಾವುದೇ ದೂರುಗಳು ಬಂದಿವೆಯೇ ; ಇದ್ದರೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಐ) ಮುಂದಿನ ವರ್ಷಗಳಲ್ಲಿ ಘನ ತ್ಯಾಜ್ಯ ನಿರ್ವಹಣೆಯನ್ನು ಸುಧಾರಿಸಲು ಸರ್ಕಾರದ ಕಾರ್ಯಯೋಜನೆ ಏನು ?

# ರಾಜ್ಯದಲ್ಲಿ ಅಕ್ರಮ ಫ್ಲೆಕ್ಸ್ ಮತ್ತು ಬ್ಯಾನರ್‌ಗಳ ಹವಾಳಿ ಕುರಿತು

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩ (೭೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ರಾಜ್ಯದ ಮಹಾನಗರ ಪಾಲಿಕೆ ನಗರಸಭೆ ಹಾಗೂ ಪುರಸಭಾ ವ್ಯಾಪ್ತಿಗಳಲ್ಲಿ ಅಕ್ರಮವಾಗಿ ಫ್ಲೆಕ್ಸ್ ಮತ್ತು ಬ್ಯಾನರ್‌ಗಳನ್ನು ಅಳವಡಿಸುವ ಪ್ರಮಾಣ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂತಹ ಅನಧಿಕೃತ ಫ್ಲೆಕ್ಸ್ ಮತ್ತು ಬ್ಯಾನರ್‌ಗಳಿಂದ ಸಾರ್ವಜನಿಕ ಸುರಕ್ಷತೆ, ಸಂಚಾರ ವ್ಯವಸ್ಥೆ, ನಗರ ಸೌಂದರ್ಯ ಮತ್ತು ಪರಿಸರಕ್ಕೆ ತೀವ್ರ ಹಾನಿಯಾಗುತ್ತಿರುವುದನ್ನು ಸರ್ಕಾರ ಒಪ್ಪುತ್ತದೆಯೇ ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು ;

(ಇ) ಅಕ್ರಮ ಫ್ಲೆಕ್ಸ್ ತೆರವುಗೊಳಿಸುವ ಕಾರ್ಯಾಚರಣೆಯಲ್ಲಿ ತೊಡಗುವ ಅಧಿಕಾರಿಗಳಿಗೆ ಸಮರ್ಪಕ ಕಾನೂನು ರಕ್ಷಣೆ ಮತ್ತು ಆಡಳಿತಾತ್ಮಕ ಬೆಂಬಲದ ಕೊರತೆಯಿಂದಾಗಿ ಅವರ ಮೇಲೆ ದೌರ್ಜನ್ಯಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಧಿಕಾರಿಗಳ ಸುರಕ್ಷತೆಗಾಗಿ ಸರ್ಕಾರ ರೂಪಿಸಿರುವ ಕಾರ್ಯತಂತ್ರಗಳೇನು ;

(ಈ) ಪ್ರಸ್ತುತ ಇರುವ ನಿಯಮಗಳು ಪರಿಣಾಮಕಾರಿಯಾಗಿ ಜಾರಿಯಾಗದಿರುವುದನ್ನು ಗಮನಿಸಿ, ಅಕ್ರಮ ಫ್ಲೆಕ್ಸ್ ಹಾವಳಿ ತಡೆಗಟ್ಟಲು ಸರ್ಕಾರವು ಹೊಸ ಮಾರ್ಗ ಸೂಚಿ ಅಥವಾ ಕಾನೂನು ತಿದ್ದುಪಡಿ ತರಲು ಉದ್ದೇಶಿಸಿದೆಯೇ ? (ಪ್ರಸ್ತಾವನೆಯ ಸಂಪೂರ್ಣ ವಿವರಗಳನ್ನು ನೀಡುವುದು)

## ರಾಜ್ಯಕ್ಕೆ ಹರಿದು ಬಂದ ಬಂಡವಾಳದ ಹೂಡಿಕೆ ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೪ (೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರವು ಅಸ್ತಿತ್ವಕ್ಕೆ ಬಂದ ನಂತರ ರಾಜ್ಯಕ್ಕೆ ಹರಿದುಬಂದ ಬಂಡವಾಳ ಹೂಡಿಕೆ ಪ್ರಮಾಣವೆಷ್ಟು ;

(ಆ) ರಾಜ್ಯ ಸರ್ಕಾರದೊಂದಿಗೆ ಆಗಿರುವ ಒಪ್ಪಂದಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಒಪ್ಪಂದಗಳು ಚಾಲನೆಗೊಂಡಿವೆ ; ಎಷ್ಟು ಒಪ್ಪಂದಗಳು ನೆನೆಗುದಿಗೆ ಬಿದ್ದಿವೆ ; ಚಾಲನೆಗೊಳ್ಳದೆ ನೆನೆಗುದಿಗೆ ಬೀಳಲು ಕಾರಣಗಳೇನು ;

(ಇ) ಈ ಒಪ್ಪಂದಗಳ ಮೂಲಕ ನಿರೀಕ್ಷಿಸಲಾದ ಉದ್ಯೋಗ ಸೃಷ್ಟಿ ಪ್ರಮಾಣವೆಷ್ಟು ; ನಿರೀಕ್ಷೆಯಂತೆ ಉದ್ಯೋಗ ಸೃಷ್ಟಿ ಆಗಿದೆಯೇ ; ಆಗದಿದ್ದಲ್ಲಿ ಕಾರಣಗಳೇನು ?

## ರಾಜ್ಯದ ಖಾಸಗಿ ಮತ್ತು ಸಹಕಾರಿ ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬರಬೇಕಾದ ಕಬ್ಬಿನ ಬಾಕಿ ಹಣ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫ (೮೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಖಾಸಗಿ ಮತ್ತು ಸಹಕಾರಿ ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬರಬೇಕಾದ ಕಬ್ಬಿನ ಬಾಕಿ ಹಣ (Arrears) ಎಷ್ಟು ; ಬಾಕಿ ಉಳಿಸಿಕೊಂಡಿರುವ ಕಾರ್ಖಾನೆಗಳ ಮೇಲೆ ಸರ್ಕಾರ ಜಪ್ತಿ ಪ್ರಕ್ರಿಯೆ ಆರಂಭಿಸಿದೆಯೇ ;

(ಆ) ಕೇಂದ್ರ ಸರ್ಕಾರದ ಎಥೆನಾಲ್ ಮಿಶ್ರಣ ಯೋಜನೆಯ ಲಾಭ ಪಡೆಯಲು ಎಷ್ಟು ಸಕ್ಕರೆ ಕಾರ್ಖಾನೆಗಳಿಗೆ ಎಥೆನಾಲ್ ಘಟಕ ಸ್ಥಾಪಿಸಲು ಅನುಮತಿ ನೀಡಲಾಗಿದೆಯೇ ;

(ಇ) ನಷ್ಟದಲ್ಲಿರುವ ರಾಜ್ಯದ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಪುನಃಶ್ಚೇತನಗೊಳಿಸಲು ಅಥವಾ ಖಾಸಗಿ ಸಹಭಾಗಿತ್ವದಲ್ಲಿ (Lease base) ನಡೆಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳೇನು ?

## ಪೌರ ಕಾರ್ಮಿಕರ ಸೇವೆ ಖಾಯಂ ಮತ್ತು ಸೌಲಭ್ಯ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬ (೮೨) ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಜನ ಪೌರ ಕಾರ್ಮಿಕರು ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದಾರೆ ;

(ಆ) ಇವರಲ್ಲಿ ಎಷ್ಟು ಜನರನ್ನು ಹಂತ ಹಂತವಾಗಿ ಖಾಯಂಗೊಳಿಸಲು ಸರ್ಕಾರ ನಿರ್ಧರಿಸಿದೆ ;

(ಇ) ಅವರಿಗೆ ವಿಮೆ ಮತ್ತು ಆರೋಗ್ಯ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ?

## ಸಣ್ಣ ಕೈಗಾರಿಕೆಗಳಿಗೆ ಮೂಲಸೌಕರ್ಯ ಒದಗಿಸುವ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭ (೮೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊಸ ಕೈಗಾರಿಕಾ ವಸಾಹತುಗಳನ್ನು (Industrial Estates) ಸ್ಥಾಪಿಸಲಾಗಿದೆ ;

ಈ ವಸಾಹತುಗಳಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಮತ್ತು ವಿದ್ಯುತ್ ಕಲ್ಪಿಸಲು ವ್ಯಯಿಸಲಾದ ಮೊತ್ತವೆಷ್ಟು;

(ಆ) ಕೆ.ಎಸ್.ಎಸ್.ಐ.ಡಿ.ಸಿ ವತಿಯಿಂದ ಹಂಚಿಕೆಯಾದ ಕೈಗಾರಿಕಾ ಶೆಡ್ ಗಳು ಮತ್ತು ನಿವೇಶನಗಳ ನೋಂದಣಿ ಪ್ರಕ್ರಿಯೆ (Lease-cum-Sale) ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಳಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಸಾರ್ವಜನಿಕ ವಲಯದ ಉದ್ಯಮಗಳ (PSUS) ಸ್ಥಿತಿಗತಿ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮ (೮೪) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸಾರ್ವಜನಿಕ ವಲಯದ ಉದ್ಯಮಗಳು (PSUS) ಸತತವಾಗಿ ನಷ್ಟದಲ್ಲಿವೆ ; ಇವುಗಳನ್ನು ಪುನಃಶ್ಚೇತನಗೊಳಿಸಲು ಅಥವಾ ಖಾಸಗಿ ಸಹಭಾಗಿತ್ವಕ್ಕೆ (PPP) ಒಪ್ಪಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳೇನು ;

(ಆ) ಸಾರ್ವಜನಿಕ ವಲಯದ ಉದ್ಯಮಗಳಲ್ಲಿ ಖಾಲಿ ಇರುವ ತಾಂತ್ರಿಕ ಮತ್ತು ಆಡಳಿತಾತ್ಮಕ ಹುದ್ದೆಗಳ ಸಂಖ್ಯೆ ಎಷ್ಟು; ಇವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ನಗರಗಳ ಮಹಾಯೋಜನೆ (Master Plan) ಜಾರಿ ಮತ್ತು ಕಾಲಮಿತಿ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯ (೮೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದ ಎಷ್ಟು ನಗರಗಳಲ್ಲಿ ಯೋಜನೆಗಳನ್ನು (Master Plan) ಕಾಲಮಿತಿಯಲ್ಲಿ ಪರಿಷ್ಕರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಅನೇಕ ನಗರಗಳಲ್ಲಿ ಕೃಷಿ ಭೂಮಿಯನ್ನು ವಸತಿ ಭೂಮಿಯಾಗಿ ಪರಿವರ್ತಿಸುವಲ್ಲಿ ಆಗುತ್ತಿರುವ ವಿಳಂಬ ಮತ್ತು ಅದರಲ್ಲಿನ ತಾಂತ್ರಿಕ ತೊಂದರೆಗಳನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ನಗರ ಯೋಜನೆ ಪ್ರಾಧಿಕಾರಿಗಳ ವ್ಯಾಪ್ತಿಯಲ್ಲಿ ರಾಜಕಾಲುವೆ ಮತ್ತು ಬಫರ್ ಜೋನ್ ಒತ್ತುವರಿ ತೆರವುಗೊಳಿಸಲು ಸರ್ಕಾರ ಹಾಕಿಕೊಂಡಿರುವ ಗುರಿ ಏನು ?

## ಸ್ಮಾರ್ಟ್ ಸಿಟಿ ಯೋಜನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦ (೮೭) ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಪ್ರಾರಂಭವಾಗಿದ್ದು, ಯಾವಾಗ ; ಕೇಂದ್ರ ಸರ್ಕಾರದಿಂದ ಬಂದಂತಹ ಅನುದಾನ ಎಷ್ಟು ;

(ಆ) ಶಿವಮೊಗ್ಗ ಜಿಲ್ಲೆಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಈ ಪೈಕಿ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಹಾಗೂ ಬಾಕಿ ಇರುವ ಕಾಮಗಾರಿಗಳು ಎಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಈ) ಶಿವಮೊಗ್ಗ ತಾಲ್ಲೂಕಿನ ನಗರ ಪ್ರದೇಶದಲ್ಲಿ ಬಳಕೆ ಮಾಡಿರುವ ಅನುದಾನ ಎಷ್ಟು ? (ವಾರ್ಡ್‌ವಾರು ಮಾಹಿತಿ ನೀಡುವುದು)

## ಅಡಿಕೆ ಬೆಳೆಗಳಲ್ಲಿ ಕಂಡು ಬರುವ ರೋಗ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧ (೮೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಬೆಳೆಗಳಲ್ಲಿ ಲೀಫ್ ಸ್ಪಾಟ್ (Leaf Spot) ರೋಗದಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಲೀಫ್ ಸ್ಪಾಟ್ ರೋಗದಿಂದ ನಷ್ಟ ಅನುಭವಿಸುತ್ತಿದ್ದು, ರೋಗ ನಿಯಂತ್ರಿಸಲು ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ರೋಗ ನಿಯಂತ್ರಣ ಕ್ರಮಗಳನ್ನು ಅನುಸರಿಸಲು ರೈತರಿಗೆ ಮಾಹಿತಿ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಅಡಿಕೆ ಬೆಳೆಗಳಲ್ಲಿ ಉಂಟಾಗುವ ರೋಗಗಳ ನಿಯಂತ್ರಣ ಹಾಗೂ ರೋಗ ನಿರೋಧಕ ಸಂಶೋಧನೆಗಾಗಿ ಸರ್ಕಾರದ ಕ್ರಮವೇನು ; ಇದಕ್ಕಾಗಿ ಸರ್ಕಾರ ಅನುದಾನ ಮೀಸಲಿಟ್ಟಿದೆಯೇ?

## ಕುಡಿಯುವ ನೀರಿನ ಪ್ರಯೋಗಾಲಯ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨ (೮೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಮಹಾನಗರ ಪಾಲಿಕೆಗಳಲ್ಲಿ ಕುಡಿಯುವ ನೀರನ್ನು ಪರೀಕ್ಷಿಸಲು ಸರ್ಕಾರಿ ಪ್ರಯೋಗಾಲಯಗಳಿವೆ, ನೀರಿನ ಗುಣಮಟ್ಟ ಪರೀಕ್ಷಿಸಲಾಗುತ್ತಿದೆಯೇ ಎಷ್ಟು ದಿನಗಳಿಗೊಮ್ಮೆ ಪರೀಕ್ಷಿಸಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ನೀರಿನ ಗುಣಮಟ್ಟ ಪರೀಕ್ಷಿಸಲು ಪ್ರಯೋಗಾಲಯಗಳಿಲ್ಲದ ಮಹಾನಗರ ಪಾಲಿಕೆಗಳಾವುವು ; (ವಿವರ ನೀಡುವುದು)

(ಇ) ಪ್ರತಿಯೊಂದು ಮಹಾನಗರ ಪಾಲಿಕೆಗಳಲ್ಲಿ ನೀರಿನ ಗುಣಮಟ್ಟ ಪರೀಕ್ಷಿಸುವ ಪ್ರಯೋಗಾಲಯಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಪ್ರಯೋಗಾಲಯಗಳಲ್ಲಿ ಎಷ್ಟು ಜನ ಸಿಬ್ಬಂದಿಗಳನ್ನು ನೇಮಿಸಲಾಗಿದೆ ; ಖಾಲಿ ಇರುವ ಹುದ್ದೆಗಳೆಷ್ಟು ? (ವಿವರ ನೀಡುವುದು)

## ಖಾತೆ ಬದಲಾವಣೆ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩ (೯೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾನಗರ ಪಾಲಿಕೆಯಲ್ಲಿ ಖಾತೆ ಬದಲಾವಣೆ ಮಾಡಿಕೊಡಲು ಸರ್ಕಾರ ಯಾವ ಮಾನದಂಡಗಳ ಮೇಲೆ ಶುಲ್ಕ ನಿಗದಿ ಮಾಡಿದೆ ;

(ಆ) ೨೦೨೪–೨೫ನೇ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಖಾತೆ ಬದಲಾವಣೆಗೆ ಸ್ವೀಕರಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ವಸೂಲಾತಿ ಆಗಿರುವ ಶುಲ್ಕ ಎಷ್ಟು ;

(ಇ) ೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಅರ್ಜಿಗಳನ್ನು ಮುಕ್ತಾಯಗೊಳಿಸಲಾಗಿದೆ ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಈ) ನಿಗಧಿತ ಅವಧಿಯೊಳಗೆ ಅರ್ಜಿಗಳನ್ನು ಮುಕ್ತಾಯಗೊಳಿಸದಿರಲು ಕಾರಣವೇನು ; ಈ ಸಂಬಂಧ ಅಧಿಕಾರಿ/ನೌಕರರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ ?

## ಅಡಿಕೆಯಲ್ಲಿನ ಔಷಧಿಯ ಅಂಶಗಳ ಕುರಿತು ಸಂಶೋಧನೆಗೆ ಕ್ರಮ ವಹಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪ (೯೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಅಪವಾದ ಕೇಳಿ ಬರುತ್ತಿದ್ದು ಅದನ್ನು ತೊಡೆದು ಹಾಕಲು ಪ್ರತಿಷ್ಠಿತ ಸಂಸ್ಥೆಗಳಿಂದ ವೈಜ್ಞಾನಿಕ ಸಂಶೋಧನೆ ನಡೆಸಬೇಕಾದ ತುರ್ತು ಅನಿವಾರ್ಯತೆ ಇದ್ದು ಈ ಸಂಬಂಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಅಂತರರಾಷ್ಟ್ರೀಯ ಮಟ್ಟದಲ್ಲಿ ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಋಣಾತ್ಮಕ ಭಾವನೆ ವ್ಯಕ್ತವಾಗುತ್ತಿರುವ ಹಿನ್ನಲೆಯಲ್ಲಿ ಅಡಕೆ ಉತ್ಪನ್ನಗಳ ಬಗ್ಗೆ ವ್ಯಾಪಕ ವೈಜ್ಞಾನಿಕ ಸಂಶೋಧನೆ ತಕ್ಷಣ ನಡೆಯಬೇಕಾದ ಅನಿವಾರ್ಯತೆ ಇದ್ದು, ಇದಕ್ಕೆ ಪೂರಕವಾಗಿ ನಡೆಯುತ್ತಿರುವ ಸದರಿ ವೈಜ್ಞಾನಿಕ ಸಂಶೋಧನೆಗಳ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಈ ಕುರಿತು ಸಂಶೋಧನೆ ಕೈಗೊಂಡಿರುವ ಸಂಸ್ಥೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ನೂರಾರು ವರ್ಷಗಳಿಂದ ಜನರು ಅಡಿಕೆಯುನ್ನು ಬಳಕೆ ಮಾಡುತ್ತಿದ್ದು ಅಡಿಕೆ ಹಾನಿಕಾರಕವಲ್ಲ ಮತ್ತು ಕ್ಯಾನ್ಸರ್‌ಕಾರಕವಲ್ಲ ಎಂಬ ಸಂಗತಿಯುನ್ನು ಸಾಬೀತುಪಡಿಸುವುದರ ಜೊತೆಗೆ ಸಂಶೋಧನಾ ಸಂಸ್ಥೆಗಳ ನೆರವಿನಿಂದ ಅಡಿಕೆಯ ಔಷಧೀಯ ಮತ್ತು ಉತ್ತಮ ಗುಣಗಳ ಕುರಿತು ದಾಖಲೆಯ ಆಧಾರದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಚಾರ ಪಡಿಸಬೇಕಾದ ವ್ಯಾಪಕ ಅನಿವಾರ್ಯತೆ ಇದ್ದು, ಈ ಕುರಿತು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಅಂತರರಾಷ್ಟ್ರೀಯ ಮಟ್ಟದಲ್ಲಿ ಅಡಿಕೆ ಬಗ್ಗೆ ಋಣಾತ್ಮಕ ಭಾವನೆ ವ್ಯಕ್ತವಾಗುತ್ತಿರುವ ಹಿನ್ನಲೆಯಲ್ಲಿ ಅಡಿಕೆಯ ಔಷಧೀಯ ಮತ್ತು ಉತ್ತಮ ಗುಣಗಳನ್ನು ದಾಖಲೆಯ ಆಧಾರದಲ್ಲಿ ತಿಳಿಸಲು ಅಡಿಕೆ ಉತ್ಪನ್ನಗಳ ಬಗ್ಗೆ ವ್ಯಾಪಕ ಸಂಶೋಧನೆಗೆ ಸರ್ಕಾರ ಈಗಲಾದರೂ ವ್ಯವಸ್ಥಿತ ಕ್ರಮ ವಹಿಸುವುದೇ ?

## ದಕ್ಷಿಣ ಕನ್ನಡ ಜಿಲೆಯಲ್ಲಿನ ಬೆಳೆ ವಿಮೆ ಸಮೀಕ್ಷೆಯನ್ನು ಪೂರ್ಣ ಪ್ರಮಾಣದಲ್ಲಿ ಕೈಗೊಳ್ಳುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫ (೯೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಳ ಹವಾಮಾನ ಆಧಾರಿತ ಬೆಳೆ ವಿಮೆ ಸಮೀಕ್ಷೆಯನ್ನು ಈಗಾಗಲೇ ಪೂರ್ಣ ಪ್ರಮಾಣದಲ್ಲಿ ಕೈಗೊಳ್ಳಲಾಗಿದೆಯೇ ;

(ಆ) ಜಿಲ್ಲೆಯ ಹಲವಾರು ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಯುವ ಬೆಳೆಗಾರರು ಇನ್ನೂ ಸಮೀಕ್ಷೆಯಿಂದ ಹೊರಗುಳಿದಿದ್ದಾರೆ ಎಂಬ ಅಭಿಪ್ರಾಯ ಬೆಳೆಗಾರರಿಂದಲೇ ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೆಳೆ ವಿಮೆ ಸಮೀಕ್ಷೆಯ ಕಾಲಾವಧಿಯನ್ನು ಮತ್ತಷ್ಟು ಕಾಲ ವಿಸ್ತರಿಸಿ ಆ ಮೂಲಕ ಜಿಲ್ಲೆಯಲ್ಲಿನ ಯಾವುದೇ ಅರ್ಹ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಾರರು ಹವಾಮಾನ ಆಧಾರಿತ ಬೆಳೆ ವಿಮೆ ಸಮೀಕ್ಷೆಯಿಂದ ಯಾವುದೇ ಕಾರಣಕ್ಕೂ ಹೊರಗುಳಿಯದಂತೆ ಸರ್ಕಾರ ಕೂಡಲೇ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ ?

## ದಕ್ಷಿಣ ಕನ್ನಡ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಹೊರಗುತ್ತಿಗೆ ನೌಕರರಿಗೆ ಬಾಕಿ ವೇತನ ಪಾವತಿ ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬ (೯೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ನಗರ ಸ್ಥಳೀಯ ಸಂಸ್ಥೆ(ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ)ಗಳು ಎಷ್ಟು ಮತ್ತು ಯಾವುವು ;

(ಆ) ಇವುಗಳಲ್ಲಿ ಪ್ರಸ್ತುತ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ಮತ್ತು ಅವರಿಗೆ ಪಾವತಿಸುತ್ತಿರುವ ವೇತನದ ವಿವರಗಳೇನು ; (ಪ್ರತಿಯೊಂದು ನಗರ ಸ್ಥಳೀಯ ಸಂಸ್ಥೆಯ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆ(ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ)ಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಸಕಾಲದಲ್ಲಿ ವೇತನ ಪಾವತಿಸಲಾಗಿದೆಯೇ, ಪಾವತಿಸಲಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ಸದರಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ವೇತನ ಪಾವತಿಸಲು ಇನ್ನೂ ಬಾಕಿ ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಬಾಕಿ ಇರುವ ವೇತನವನ್ನು ಪಾವತಿ ಮಾಡಲಾಗುವುದು ?

## ಗೌರವ ಧನವನ್ನು ಗಣನೀಯವಾಗಿ ಹೆಚ್ಚು ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭ (೯೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ) ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆ (ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ) ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಪ್ರಸ್ತುತ ನೀಡುತ್ತಿರುವ ಗೌರವಧನ ಎಷ್ಟು ; (ವಿವರ ನೀಡುವುದು)

(ಇ) ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ನಿರಂತರವಾಗಿ ವ್ಯವಹರಿಸುವ ಮತ್ತು ಸ್ಪಂದಿಸುವ ನಗರ ಸ್ಥಳೀಯ ಸಂಸ್ಥೆ

(ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆ) ಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ವಹಿಸಲಾಗುವುದು ?

## ಪೌರಾಡಳಿತ ಇಲಾಖೆ ವ್ಯಾಪ್ತಿಯ ನಿವೇಶನ ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೭೮ (೯೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳಿಗೆ ಸೇರಿದ ಸಿ.ಎ ನಿವೇಶನಗಳನ್ನು ಯಾವ ಉದ್ದೇಶಗಳಿಗೆ ಮತ್ತು ಯಾರಿಗೆ ಮಂಜೂರು ಮಾಡಬಹುದು ಹಾಗೂ ಯಾರಿಗೆ ಮಂಜೂರು ಮಾಡಲು ಅವಕಾಶವಿರುವುದಿಲ್ಲ ;

(ಆ) ಮಂಜೂರು ಮಾಡಲು ಅನುಸರಿಸುವ ಕ್ರಮ/ವಿಧಾನ ಯಾವುದು ;

(ಇ) ಪೌರಾಡಳಿತ ಇಲಾಖೆ ವ್ಯಾಪ್ತಿಯಲ್ಲಿನ ಎಷ್ಟು ಸಿ.ಎ ನಿವೇಶನಗಳನ್ನು ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡುವಂತೆ ಕೇಳಲಾಗಿತ್ತು ; ಎಷ್ಟು ನಿವೇಶನಗಳನ್ನು ನೀಡಲಾಗಿದೆ ; (ವಿವರ ನೀಡುವುದು)

(ಈ) ಸಿ.ಎ. ನಿವೇಶನಗಳನ್ನು ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡುವ ಕುರಿತು ಕಾನೂನು ಇಲಾಖೆ ನೀಡಿದ ಅಭಿಪ್ರಾಯವೇನು: ಅಭಿಪ್ರಾಯದ ಪ್ರತಿಯನ್ನು ನೀಡುವುದು ;

(ಉ) ಕಾಂಗ್ರೆಸ್ ಭವನ ಟ್ರಸ್ಟ್‌ಗೆ ನೀಡಲಾದ ಸಿ.ಎ ನಿವೇಶನಗಳ ಮಾರುಕಟ್ಟೆ ಮೌಲ್ಯವೆಷ್ಟು ; ಎಷ್ಟು ಮೊತ್ತ ರಿಯಾಯಿತಿಯನ್ನು ನೀಡಲಾಗಿದೆ ; ಇದರಿಂದ ಸರ್ಕಾರಕ್ಕೆ / ಸ್ಥಳೀಯ ಸಂಸ್ಥೆಗಳಿಗೆ ಉಂಟಾದ ನಷ್ಟವೆಷ್ಟು ;

(ಊ) ನಗರಸಭೆಗಳ ಸಾಮಾನ್ಯ ಸಭೆಯಲ್ಲಿ ಸಿ.ಎ ನಿವೇಶನಗಳನ್ನು ಕಾಂಗ್ರೆಸ್ ಭವನಕ್ಕೆ ನೀಡುವ ಕುರಿತು ಮಾಡಲಾದ ನಿರ್ಣಯವೇನು ? (ಸದರಿ ನಿರ್ಣಯದ ಪ್ರತಿಯನ್ನು ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಿ.ಎ. ನಿವೇಶನಗಳ ಹಂಚಿಕೆ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯ (೯೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಾಗರಿಕ ಮೂಲಭೂತ ಸೌಕರ್ಯಗಳಿಗಾಗಿ ಮೀಸಲಿರಿಸಿದ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲೆ ನೀಡಲು ಅನುಸರಿಸುವ ಮಾರ್ಗಸೂಚಿಗಳೇನು ; (ಕರ್ನಾಟಕ ಪ್ಲಾನಿಂಗ್ ಅಥಾರಿಟಿ (Allotment of Civic Amenity Sites) Rules, 2016 ಹಾಗೂ ೨೦೧೮ರ ಸುತ್ತೋಲೆ ಮಾರ್ಗಸೂಚಿ ಪ್ರತಿ ನೀಡುವುದು)

(ಆ) ೨೦೨೩ ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಒಟ್ಟು ಎಷ್ಟು ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ) ವಿಶೇಷ ಪ್ರಕರಣದಡಿಯಲ್ಲಿ ನಾಗರಿಕ ಸೌಲಭ್ಯ ನಿವೇಶನಗಳನ್ನು ಎಷ್ಟು ಮೊತ್ತಕ್ಕೆ ಮತ್ತು ಎಷ್ಟು ವರ್ಷಗಳಿಗೆ

ಮಂಜೂರು ಮಾಡಲಾಗಿದೆ ; ವಿಶೇಷ ಪ್ರಕರಣಗಳಾವುವು ಮತ್ತು ಎಲ್ಲಿ ನೀಡಲಾಗಿದೆ ; (ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯಿತಿಗಳವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಹಲವು ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಾಗರಿಕ ಸೌಲಭ್ಯ ನಿವೇಶನಗಳನ್ನು ಹಲವು ಟ್ರಸ್ಟ್‌ಗಳಿಗೆ ಖಾಯಂ ನೀಡಲಾಗಿದ್ದು, ಇನ್ನುಳಿದ ಸಂಸ್ಥೆಗಳಿಗೆ ೩೦ ವರ್ಷಕ್ಕೆ ನೀಡಲಾಗಿರುವುದು ನಿಜವೇ; ಆ ಸಂಸ್ಥೆಗಳಿಗೆ ಖಾಯಂ ನೀಡಲು ಕಾರಣಗಳೇನು ? (ಸಂಪೂರ್ಣ ಮಾಹಿತಿಯನ್ನು ನೀಡುವುದು)

## ನಗರೋತ್ಥಾನ ಯೋಜನೆಯಡಿ ಅನುದಾನದ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦ (೯೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರೋತ್ಥಾನ ಯೋಜನೆ (ಹಂತ–೪) ರಡಿಯಲ್ಲಿ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಕೈಗೆತ್ತಿಕೊಂಡ ಕಾಮಗಾರಿಗಳಾವುವು ; (ಪ್ರಗತಿ ಪ್ರಾರಂಭಕ್ಕೆ ಬಾಕಿ ಇರುವ ಮತ್ತು ಮುಗಿದಿರುವ ಕಾಮಗಾರಿಗಳ ನಗರ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಬಹಳಷ್ಟು ಕಾಮಗಾರಿಗಳಿಗೆ ಬಿಲ್ಲು ಪಾವತಿಗೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಾಕಿಗೆ ಕಾರಣಗಳೇನು ; (ಕಾಮಗಾರಿವಾರು ಮತ್ತು ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ನಗರೋತ್ಥಾನ ಯೋಜನೆ (ಹಂತ–೪) ರಡಿಯಲ್ಲಿ ಶೌಚಾಲಯ ಮತ್ತು ಮನೆ ದುರಸ್ಥಿ ಮಾಡಿಕೊಂಡಿರುವ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಾಕಿಗೆ ಕಾರಣಗಳೇನು ಮತ್ತು ಯಾವ ಕಾಲಮಿತಿಯಲ್ಲಿ ಬಾಕಿ ಪಾವತಿಸಲಾಗುವುದು ? (ಸ್ಥಳೀಯ ಸಂಸ್ಥೆವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ ಬಗ್ಗೆ

**ಶ್ರೀ ಐವನ್ ಡಿ; ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧ (೧೦೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ (ಹಂತ –೨) ಯಡಿ ೨೦೨೪–೨೫ ಸಾಲಿನಿಂದ ೨೦೨೬–೨೭ ಸಾಲಿನವರೆಗೆ ಮಂಜೂರಾದ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು ; ಈ ಕಾಮಗಾರಿಗಳು ಪ್ರಾರಂಭಗೊಳ್ಳುವುದು ಹಾಗೂ ಅನುಷ್ಠಾನಗೊಳ್ಳುವುದು ಯಾವಾಗ ; (ವಿವರ ಒದಗಿಸುವುದು)

(ಆ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ (ಹಂತ –೨) ಯಡಿ ೨೦೨೪–೨೫ನೇ ಸಾಲಿನಲ್ಲಿ ಎಷ್ಟು ಕಾಮಗಾರಿಗಳು ಅನುಷ್ಠಾನಗೊಂಡಿವೆ ಮತ್ತು ಕಾಮಗಾರಿಗಳು ಯಾವುವು ; (ವಿವರ ಒದಗಿಸುವುದು)

(ಇ) ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ ಅನ್ವಯ ರಾಜ್ಯದಲ್ಲಿ ಒಟ್ಟು ಬಿಡುಗಡೆ ಮಾಡಿದ ಅನುದಾನ ಎಷ್ಟು ; ಯಾವ ಯಾವ ನಗರ ಪಾಲಿಕೆಗಳಿಗೆ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ ; (ವಿವರ ಒದಗಿಸುವುದು)

(ಈ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಮತ್ತಿತರ ಕಾಮಗಾರಿಗಳನ್ನು ಎಷ್ಟು ತಿಂಗಳುಗಳ ಕಾಲ ನಡೆಸಬಹುದು ? (ವಿವರ ಒದಗಿಸುವುದು)

## ಮಂಗಳೂರು ಮಹಾನಗರ ಪಾಲಿಕೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨ (೧೦೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಸರ್ಕಾರದಿಂದ ಮತ್ತು ನಗರ ಪಾಲಿಕೆಯಿಂದ ಖರ್ಚು ಮಾಡಿರುವ ಒಟ್ಟು ವರ್ಷವಾರು ಹಣವೆಷ್ಟು ; ಕೈಗೊಂಡ ಕಾಮಗಾರಿಗಳು ಎಷ್ಟು ; (ವಿವರ ಒದಗಿಸುವುದು)

(ಆ) ರಾಜ್ಯ ಸರ್ಕಾರದಿಂದ ಕಳೆದ ೩ ವರ್ಷಗಳಲ್ಲಿ ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಿದ ಅನುದಾನ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು ; (ವಿವರ ಒದಗಿಸುವುದು)

(ಇ) ಮಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ನಗರ ಪಾಲಿಕೆಯಿಂದ ಸಿವಿಲ್ ಕಾಮಗಾರಿಗಳಿಗೆ ಖರ್ಚು ಮಾಡಿದ ಒಟ್ಟು ಅನುದಾನವೆಷ್ಟು ; (ವಿವರ ಒದಗಿಸುವುದು) ; ಮಹಾನಗರ ಪಾಲಿಕೆಯಲ್ಲಿ ಸದರಿ ವರ್ಷಗಳಲ್ಲಿ ಒಟ್ಟು ಬಡವರಿಗೆ ನೀಡಿದ ಮನೆಗಳು ಹಾಗೂ ನಿವೇಶನಗಳು ಎಷ್ಟು ; (ವಿವರ ಒದಗಿಸುವುದು)

(ಈ) ಮಂಗಳೂರು ಮಹಾನಗರ ಪಾಲಿಕೆಗೆ ಸದರಿ ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ನೀಡಿದ ವಿಶೇಷ ಅನುದಾನವೆಷ್ಟು ? (ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಲ್ಲು ಮತ್ತು ಮರಳುಗಾರಿಕೆ ಮಾಡುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩ (೧೦೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಲ್ಲು ಮತ್ತು ಮರಳುಗಾರಿಕೆಗೆ ಸಂಬಂಧಿಸಿದಂತೆ ಕಾನೂನು ಸರಳೀಕರಣಗೊಳಿಸಿ ಎಷ್ಟು ಮಂದಿ ಗುತ್ತಿಗೆದಾರರಿಗೆ ಅನುಮತಿ ನೀಡಲಾಗಿದೆ ; (ವಿವರ ಒದಗಿಸುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮರಳುಗಾರಿಕೆಗೆ ಮತ್ತು ಕಲ್ಲು ಗಣಿಗಾರಿಕೆಗೆ ಸಂಬಂಧಿಸಿದಂತೆ ತಿಂಗಳಿಗೆ ಒಟ್ಟು ಎಷ್ಟು ಉತ್ಪಾದನೆ ಮಾಡಲಾಗುತ್ತಿದೆ ಮತ್ತು ಇರುವ ಬೇಡಿಕೆ ಎಷ್ಟು ; (ವಿವರ ಒದಗಿಸುವುದು)

(ಇ) ಮರಳುಗಾರಿಕೆ ಮತ್ತು ಕಲ್ಲು ಗಣಿಗಾರಿಕೆಗೆ ಅರ್ಜಿ ಸಲ್ಲಿಸಿದ ಎಷ್ಟು ಸಮಯದಲ್ಲಿ ಪರವಾನಿಗೆ ನೀಡಲಾಗುವುದು ಇದಕ್ಕಿರುವ ಷರತ್ತುಗಳಾವುವು ; (ವಿವರ ಒದಗಿಸುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮರಳುಗಾರಿಕೆ ಮತ್ತು ಕಲ್ಲು ಗಣಿಗಾರಿಕೆಗೆ ಪರವಾನಿಗೆ ನೀಡಿದರೂ ಜನರ ಮೇಲೆ ದರ ಹೊರೆಯಾಗುತ್ತಿದೆ ಎಂಬ ಬಗ್ಗೆ ದೂರುಗಳಿದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ;

(ಉ) ಅಕ್ರಮ ಗಣಿಗಾರಿಕೆ ತಡೆಯಲು ಇಲಾಖೆ ಕೈಗೊಂಡ ಕ್ರಮವೇನು ? (ವಿವರ ಒದಗಿಸುವುದು)

## ಒಳಚರಂಡಿ ವ್ಯವಸ್ಥೆಯು ತೀರಾ ಹದಗೆಟ್ಟಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪ (೧೦೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಒಳಚರಂಡಿ ವ್ಯವಸ್ಥೆಯು ತೀರಾ ಹದಗೆಟ್ಟಿದ್ದು, ಒಳಚರಂಡಿ ನೀರು ತೋಡಿನಲ್ಲಿ ಹರಿಯುವ ಮೂಲಕ ಮಹಾನಗರ ಪಾಲಿಕೆ ವ್ಯಾಪ್ತಿಯ ಪರಿಸರದ ಎಲ್ಲಾ ಬಾವಿಗಳ ನೀರು ಹಾಳಾಗಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಆರೋಗ್ಯದ ಮೇಲೆ ಉಂಟಾಗಿರುವ ಪರಿಣಾಮವನ್ನು ಮಹಾನಗರ ಪಾಲಿಕೆ ಯಾವ ಯಾವ ರೀತಿಯಲ್ಲಿ ನಿರ್ವಹಿಸುತ್ತಿದೆ ; (ವಿವರ ಒದಗಿಸುವುದು)

(ಆ) ಮಂಗಳೂರು ನಗರದ ಹೃದಯ ಭಾಗದಲ್ಲಿರುವ ಕೊಡಿಯಾಲ್ ಬೈಲ್ ವೆಟ್‌ವೆಲ್ (wetwell) ಕೊಳಚೆ ನೀರಿನ ಪೈಪ್‌ಗಳು

ಒಡೆದು ಹೋದ ಕಾರಣದಿಂದ ಮಳೆ ನೀರು ಹರಿಯುವ ನೀರಿನ ತೋಡಿಗೆ ಬಿಟ್ಟಿರುವುದಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಇ) ಕೊಡಿಯಾಲ್ ಬೈಲ್ ವೆಟ್‌ವೆಲ್‌ನ ಕೊಳಚೆ ನೀರು ತೋಡುಗಳಲ್ಲಿ ಹರಿಯುವುದರಿಂದ ಆರೋಗ್ಯ ಮತ್ತು ಪರಿಸರದ ಮೇಲೆ ಉಂಟಾಗಿರುವ ಪರಿಣಾಮವನ್ನು ನಿವಾರಿಸಲು ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಈ) ಪರಿಸರ ಮಾಲಿನ್ಯದಿಂದ ನಗರದ ಅನೇಕ ನಿವಾಸಿಗಳ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು)

(ಉ) ಕೊಳಚೆ ನೀರು ನಿರ್ವಹಣೆಗೆ ಸ್ಮಾರ್ಟ್ ಸಿಟಿಯಲ್ಲಿ ಇಟ್ಟಿರುವ ಅನುದಾನವೆಷ್ಟು ; ಕೊಳಚೆ ನೀರು ನಿರ್ವಹಣೆಗೆ ಸ್ಮಾರ್ಟ್ ಸಿಟಿ ಯೋಜನೆಯಡಿ ಇಟ್ಟಿರುವ ಅನುದಾನವೆಷ್ಟು ; ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಕೊಳಚೆ ನೀರು ನಿರ್ವಹಣೆಗಾಗಿ ಕೈಗೊಂಡ ಯೋಜನೆಗಳು ಯಾವುವು ; ವಿನಿಯೋಗಿಸಿದ ಹಣವೆಷ್ಟು ; ಹಾಗೂ ಕಾಮಗಾರಿಗಳು ಯಾವುವು ? (ವಿವರ ಒದಗಿಸುವುದು)

## ಮಂಗಳೂರು ವಿಮಾನ ನಿಲ್ದಾಣ ವಿಸ್ತರಣೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫ (೧೦೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಮಾನ ನಿಲ್ದಾಣ ವಿಸ್ತರಣೆ ಕಾಮಗಾರಿ ಇನ್ನು ನಡೆಯದೆ ವಿದೇಶಗಳ ದೊಡ್ಡ ವಿಮಾನಗಳು ಅಂತರಾಷ್ಟ್ರೀಯ ಮಟ್ಟದ ಮಾನ್ಯತೆ ಇದ್ದರು ಬೇರೆ ಬೇರೆ ರಾಷ್ಟ್ರಗಳಿಗೆ ವಿಮಾನಯಾನವನ್ನು ಕೈಗೊಳ್ಳಲು ವಿಫಲವಾಗಿರುವುದಕ್ಕೆ ಕಾರಣವೇನು ; (ವಿವರ ಒದಗಿಸುವುದು)

(ಆ) ಇತ್ತೀಚೆಗೆ ವಿಮಾನ ನಿಲ್ದಾಣ ವಿಸ್ತರಿಸದೆ ಮಂಗಳೂರು ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ ರನ್‌ವೇ ಮಾಡದೇ ದೊಡ್ಡ ವಿಮಾನಗಳು ಸಂಚರಿಸಲು ತೊಂದರೆ ಉಂಟಾಗಿದೆ ಎಂಬ ವಿಷಯ ಕೇಳಿ ಬರುತ್ತಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕೇಂದ್ರ ಸರ್ಕಾರ ವಿಮಾನ ನಿಲ್ದಾಣವನ್ನು ಖಾಸಗೀಕರಣಗೊಳಿಸಿರುವುದರಿಂದ ಖಾಸಗಿ ಸಂಸ್ಥೆಯವರು ವಿಮಾನ ನಿಲ್ದಾಣ ರನ್‌ವೇ ವಿಸ್ತರಿಸದೆ ಕರಾವಳಿ ಭಾಗದ ಜನರಿಗೆ ತೊಂದರೆಯನ್ನು ಉಂಟು ಮಾಡುತ್ತಿದ್ದಾರೆ ಎಂಬುದು ನಿಜವೇ ; (ವಿವರ ನೀಡುವುದು)

(ಈ) ರಾಜ್ಯ ಸರ್ಕಾರಕ್ಕೆ ಮಂಗಳೂರು ವಿಮಾನ ನಿಲ್ದಾಣದಿಂದ ಬರುವ ಆದಾಯವೆಷ್ಟು ? (ವಿವರ ನೀಡುವುದು)

## ಅವಳಿ ಜಿಲ್ಲೆಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೬ (೧೦೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣ ಮೇಲ್ದಂಡೆ ಯೋಜನೆಯಿಂದ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಬಹಳ ಭಾಗ ಮುಳುಗಡೆಯಾಗಿ ಲಕ್ಷಾಂತರ ಜನರು ಮನೆ ಜಮೀನುಗಳನ್ನು ಕಳೆದುಕೊಂಡು ತಾವು ಮಾಡುತ್ತಿದ್ದ ಉದ್ಯೋಗಗಳನ್ನು ಕೂಡ ಕಳೆದುಕೊಂಡು ನಿರಾಶ್ರಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಿರಾಶ್ರಿತರ ಬದುಕಿನ ನಿರ್ವಹಣೆಗಾಗಿ ಉದ್ಯೋಗ ನೀಡುವ ದಿಶೆಯಲ್ಲಿ ಸರ್ಕಾರ ಸಣ್ಣ, ದೊಡ್ಡ ಉದ್ಯಮಗಳನ್ನು, ಕಾರ್ಖಾನೆಗಳನ್ನು ಸ್ಥಾಪಿಸುವ ಕಾರ್ಯಕ್ರಮಗಳನ್ನು ರೂಪಿಸಿದೆಯೇ ; (ವಿವರ ನೀಡುವುದು)

(ಇ) ಅವಳಿ ಜಿಲ್ಲೆಯಲ್ಲಿ ಅಪಾರ ಪ್ರಮಾಣದ ಲೈಮ್ ಸ್ಟೋನ್, ಡೋಲೋಮೈಟ ಇತ್ಯಾದಿಗಳ ಖನಿಜ ನಿಕ್ಷೇಪ ತೋಟಗಾರಿಕೆ ಉತ್ಪನ್ನ ಬೆಳೆಯುವಂತಹ ವಿಫಲವಾದ ಪ್ರದೇಶ ಹಾಗೂ ನೇಕಾರಿಕೆ ಅವಲಂಬಿತ ದೊಡ್ಡ ಸಂಖ್ಯೆಯ ಕುಟುಂಬಗಳಿದ್ದು ಸರ್ಕಾರ ಹಮ್ಮಿಕೊಳ್ಳುವ ಹೂಡಿಕೆ ಆಕರ್ಷಿಸುವ ಜಾಗತಿಕ ಸಮಾವೇಶಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರವು ಕಾರ್ಯಕ್ರಮ ರೂಪಿಸಿದೆಯೇ ? (ಮಾಹಿತಿ ನೀಡುವುದು)

## ಬಾಗಲಕೋಟೆ–ವಿಜಯಪುರ ಜಿಲ್ಲೆಯಲ್ಲಿನ ನೂತನ ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆ ನಡೆಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೭ (೧೧೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಜನಸಂಖ್ಯೆಗೆ ಅನುಗುಣವಾಗಿ ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಿ ಸರ್ಕಾರ ಘೋಷಣೆ ಮಾಡಿ ನೂತನಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಬಾಗಲಕೋಟೆ ಜಿಲ್ಲೆಯ ಶಿರೂರು ಮತ್ತು ಲೋಕಾಪುರ ಅದರಂತೆ ವಿಜಯಪುರ ಜಿಲ್ಲೆಗಳಲ್ಲಿ ಬಬಲೇಶ್ವರ ಮತ್ತು ತಿಕೋಟ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳೆಂದು ಪರಿಗಣಿಸಿ ಘೋಷಣೆ ಮಾಡಿರುವುದು ನಿಜವೇ ;

(ಆ) ಕಳೆದ ೪ ವರ್ಷಗಳಿಂದ ನೂತನವಾಗಿ ಪಟ್ಟಣ ಪಂಚಾಯಿತಿಗಳನ್ನು ಘೋಷಣೆ ಮಾಡಿರುವ ಸಂಸ್ಥೆಗಳಿಗೆ ಚುನಾವಣೆ ನಡೆಸದೆ ಇರುವ ಕಾರಣಕ್ಕೆ ಸ್ಥಳೀಯವಾಗಿ ಸಮಸ್ಯೆಗಳನ್ನು ತಿಳಿದು ಪರಿಹಾರಕ್ಕಾಗಿ ತಿಳಿಸುವ ಜನಪ್ರತಿನಿಧಿಗಳು ಇಲ್ಲದ ಕಾರಣಕ್ಕಾಗಿ ಕೇವಲ ಅಧಿಕಾರಿಗಳ ಮುಖಾಂತರ ನಡೆಸುತ್ತಾ ಬಂದಿರುವುದರಿಂದ ಅಭಿವೃದ್ಧಿ ಚಟುವಟಿಕೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಸ್ಥೆಗಳಿಗೆ ಚುನಾವಣೆ ನಡೆಸುವುದು ಯಾವಾಗ ?

## ರಾಜ್ಯದ ನೇಕಾರರು ಉತ್ಪಾದಿಸುವ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೮ (೧೧೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ನಕಲಿ ಬ್ರಾಂಡ್ ಹೊಂದಿರುವ ಸೂರತ್‌ನ ಕಡಿಮೆ ದರದ ಸಿಂಥೆಟಿಕ್ ಸೀರೆಗಳ ಮಾರಾಟ ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕೈಮಗ್ಗ ಮತ್ತು ವಿದ್ಯುತ್ ಚಾಲಿತ ಮಗ್ಗಗಳಿಂದ ಉತ್ಪಾದಿಸಲಾಗುವ ಯಾವ ಯಾವ ಉತ್ಪನ್ನಗಳಿಗೆ ಯಾವ ಯಾವ ಪ್ರದೇಶಗಳಿಗೆ ಭೌಗೋಳಿಕ ಸೂಚನೆಗಳನ್ನು ಗುರುತಿಸಲಾಗಿದೆ ;

(ಇ) ರಾಜ್ಯದ ನೇಕಾರರು ಉತ್ಪಾದಿಸುವ ಉತ್ಪನ್ನಗಳಿಗೆ ಸೂಕ್ತವಾದ ಮಾರುಕಟ್ಟೆ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ ? ( ವಿವರ ನೀಡುವುದು)

## ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೯ (೧೧೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ತೋಟಗಾರಿಕಾ ಬೆಳೆಯ ಕೃಷಿಕರಿಗೆ ವಿಮಾ ಪರಿಹಾರ ನೀಡಲು ಅನುಸರಿಸುವ ಮಾನದಂಡಗಳಾವುವು ;

(ಆ) ಮಳೆ ಬಿದ್ದ ಪ್ರಮಾಣವನ್ನು ಮಾದಂಡವನ್ನಾಗಿ ಪರಿಗಣಿಸುವುದಾದರೆ ಸದರಿ ಮಾಪನ ಕೇಂದ್ರಗಳನ್ನು ಎಲ್ಲೆಲ್ಲಿ ಸ್ಥಾಪಿಸಲಾಗಿದೆ ; ಅವುಗಳನ್ನು ನಿರ್ವಹಿಸುತ್ತಿರುವವರು ಯಾರು ; ಕಳೆದ ಐದು ವರ್ಷಗಳಲ್ಲಿ ಅವುಗಳ ನಿರ್ವಹಣೆಗೆ ತಗುಲಿದ ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೨೦೨೪-೨೫ ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿಕರು ತೋಟಗಾರಿಕಾ ಬೆಳೆಗಳಿಗೆ ಹವಾಮಾನ ಆಧಾರಿತ ವಿಮಾ ಯೋಜನೆಗಳಿಗೆ ಪಾವತಿಸಿದ ಕಂತಿನ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೨೪-೨೫ ನೇ ಸಾಲಿನ ತೋಟಗಾರಿಕೆ ಬೆಳೆಗಳಿಗೆ ಸಂಬಂಧಿಸಿದಂತೆ ಪಾವತಿಯಾದ ವಿಮಾ ಪರಿಹಾರದ ಮೊತ್ತವೆಷ್ಟು ; ಪರಿಹಾರ ಪಡೆದ ಕೃಷಿಕರ ಸಂಖ್ಯೆ ಎಷ್ಟು ; ಪಾವತಿಸಲು ಬಾಕಿ ಇರುವ ಕೃಷಿಕರ ಸಂಖ್ಯೆ ಎಷ್ಟು ; ವಿಮಾ ಪರಿಹಾರ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸದರಿ ಹವಾಮಾನಾಧಾರಿತ ಬೆಳೆ ವಿಮೆ ಯೋಜನೆಯ ಬಗ್ಗೆ ಕೃಷಿಕರ ದೂರುಗಳು/ ಕುಂದು ಕೊರತೆಗಳು ಇದ್ದಲ್ಲಿ ಪರಿಹರಿಸುವ ಪ್ರಾಧಿಕಾರ ಯಾವುದು ; ಇತ್ತೀಚಿನ ೩ ವರ್ಷಗಳಲ್ಲಿ ಸದರಿ ಪ್ರಾಧಿಕಾರಕ್ಕೆ ಸಲ್ಲಿಕೆಯಾದ ದೂರುಗಳು ಎಷ್ಟು ; ಪರಿಹಾರ ಕಂಡುಕೊಳ್ಳಲಾದ ದೂರುಗಳು ಎಷ್ಟು ? ( ಜಿಲ್ಲಾವಾರು ಮಾಹಿತಿ ನೀಡುವುದು)

## ವಿನ್ಯಾಸ ನಕ್ಷೆ ಅನುಮೋದನೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦ (೧೧೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶದ ನಿವೇಶನಗಳಿಗೆ ವಿನ್ಯಾಸ ಅನುಮೋದನೆ ನೀಡುವ ಅಧಿಕಾರವನ್ನು ಸ್ಥಳೀಯ ನಗರ ಯೋಜನಾ ಪ್ರಾಧಿಕಾರಗಳಿಗೆ

ವಹಿಸಿದ ನಂತರ ವಿನ್ಯಾಸ ಅನುಮೋದನೆ ಕೋರಿ ಸಲ್ಲಿಕೆ ಆದ ಅರ್ಜಿಗಳು ಎಷ್ಟು ; ಎಷ್ಟು ಅರ್ಜಿಗಳಿಗೆ ಅನುಮೋದನೆ ನೀಡಲಾಗಿದೆ ; ಬಾಕಿ ಎಷ್ಟು ಇವೆ ; (ಪ್ರಾಧಿಕಾರವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಕಟ್ಟಡ ನಕ್ಷೆಗೆ ತಾಂತ್ರಿಕ ಅನುಮೋದನೆ ಮತ್ತು ಸ್ವಾಧೀನ ಪತ್ರದ ದೃಢೀಕರಣ ಪತ್ರ ಕೋರಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು ; ಅನುಮೋದನೆ ನೀಡಿದ ಮತ್ತು ಬಾಕಿ ಅರ್ಜಿಗಳು ಎಷ್ಟು ; (ನಗರ ಯೋಜನೆ ಪ್ರಾಧಿಕಾರವಾರು ಮಾಹಿತಿ ನೀಡುವುದು)

(ಇ) ಗ್ರಾಮೀಣ ಭಾಗದಿಂದ ನಗರ ಯೋಜನಾ ಪ್ರಾಧಿಕಾರಗಳಿಗೆ ವಿನ್ಯಾಸ ಅನುಮೋದನೆ ಕಟ್ಟಡ ನಕ್ಷೆಗೆ ತಾಂತ್ರಿಕ ಅನುಮೋದನೆ ಮತ್ತು ಸ್ವಾಧೀನ ಪತ್ರಿಕೆ ದೃಢೀಕರಣ ಕೋರಿ ಸಲ್ಲಿಕೆಯಾಗುವ ಅರ್ಜಿಗಳ ವಿಲೇವಾರಿಗೆ ಮೇಲುಸ್ತುವಾರಿ ವಹಿಸುವ ಪ್ರಾಧಿಕಾರ ಯಾವುದು ; ಸದರಿ ಅರ್ಜಿಗಳ ವಿಲೇವಾರಿಯನ್ನು ಸಕಾಲ ಕಾಯ್ದೆ ಅಡಿ ಅಳವಡಿಸಲು ಸರ್ಕಾರಕ್ಕೆ ಇರುವ ಅಡ್ಡಿ ಏನು ;

(ಈ) ಸದರಿ ಅರ್ಜಿಗಳು ವಿವಿಧ ಇಲಾಖೆಗಳಿಗೆ ಹೋಗಬೇಕಾದ ಕಾರಣ ವಿಲೇವಾರಿಗೆ ವಿವಿಧ ಇಲಾಖೆಗಳಿಗೆ ಕಾಲಮಿತಿ ನಿಗದಿಪಡಿಸಿ ಪ್ರಾಮಾಣಿಕ ಕಾರ್ಯ ನಿರ್ವಹಣೆ ವಿಧಾನ (SOP) ಹೊರಡಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಈ ಬಗ್ಗೆ ಕ್ರಮ ವಹಿಸದಿರಲು ಕಾರಣವೇನು ;

(ಉ) ಸದರಿ ಜಿಲ್ಲಾ ವ್ಯಾಪ್ತಿಯಲ್ಲಿರುವ ನಗರ ಯೋಜನಾ ಪ್ರಾಧಿಕಾರಗಳಿಗೆ ಮಂಜೂರಾದ ಒಟ್ಟು ಹುದ್ದೆ, ಭರ್ತಿಗೊಳಿಸಿದ ಮತ್ತು ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಊ) ಸದರಿ ಸ್ಥಳೀಯ ಯೋಜನಾ ಪ್ರಾಧಿಕಾರಗಳಲ್ಲಿ ಮಧ್ಯವರ್ತಿಗಳ ಹಾವಳಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಾರ್ವಜನಿಕರ ಅರ್ಜಿಗಳ ವಿಲೇವಾರಿಗೆ FIFO ವ್ಯವಸ್ಥೆ ಅಳವಡಿಸಲಾಗಿದೆಯೇ ; ಸದರಿ ಪ್ರಾಧಿಕಾರಗಳಲ್ಲಿ ಸಾರ್ವಜನಿಕರ ಕುಂದು ಕೊರತೆ ನಿರ್ವಹಣೆ ಪ್ರಾಧಿಕಾರ ಯಾವುದು ; ಕಳೆದ ಎರಡು ವರ್ಷಗಳಲ್ಲಿ ಸಾರ್ವಜನಿಕರ ಹಿತಕ್ಕಾಗಿ ಸದರಿ ಪ್ರಾಧಿಕಾರ ಕೈಗೊಂಡ ಕ್ರಮಗಳು ಯಾವುವು ?

## ನಗರೋತ್ಥಾನ ಯೋಜನೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೧ (೧೧೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೫-೨೬ ನೇ ಸಾಲಿನ ಬಜೆಟ್ ಘೋಷಣೆಯಂತೆ ನಗರೋತ್ಥಾನ ನಾಲ್ಕನೇ ಹಂತದ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ ಇವರಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಅನುಷ್ಠಾನಗೊಳಿಸದ ಕಾಮಗಾರಿಗಳು ಯಾವುವು ; (ನಗರ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ೨೦೨೫- ೨೬ ನೇ ಸಾಲಿನ ಬಜೆಟ್ ಘೋಷಣೆಯಂತೆ ಯಾವೆಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ-ಆಫೀಸ್ ವ್ಯವಸ್ಥೆ ಜಾರಿಗೊಳಿಸಲಾಗಿದೆ ; ಸದರಿ ವ್ಯವಸ್ಥೆಯ ಮೇಲುಸ್ತುವಾರಿ ಪ್ರಾಧಿಕಾರ ಯಾವುದು ;

(ಇ) ೨೦೨೫-೨೬ನೇ ಸಾಲಿನ ಬಜೆಟ್ ಘೋಷಣೆಯಂತೆ ಅಮೃತ್ ೨.೦ ಯೋಜನೆ ಅಡಿ ಪ್ರಸ್ತುತ ಸಾಲಿನಲ್ಲಿ ಅನುಷ್ಠಾನಗೊಳಿಸಿದ

ಕುಡಿಯುವ ನೀರಿನ ಯೋಜನೆಗಳು ಎಷ್ಟು ; ಬಿಡುಗಡೆಗೊಳಿಸಿದ ಅನುದಾನ ಎಷ್ಟು ; ಯಾವುವು ; (ವಿವರ ನೀಡುವುದು)

(ಈ) ೨೦೨೫-೨೬ನೇ ಸಾಲಿನ ಬಜೆಟ್ ಘೋಷಣೆಯಂತೆ ಎಂಟು ಪಟ್ಟಣದಲ್ಲಿ ಒಳಚರಂಡಿ ಯೋಜನೆ ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದ್ದು ಯಾವ ಪಟ್ಟಣಗಳಲ್ಲಿ ಸದರಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ ; ಅವುಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಉ) ೨೦೨೫-೨೬ನೇ ಸಾಲಿನ ಬಜೆಟ್ ಘೋಷಣೆಯಂತೆ ಮಹಾನಗರ ಪಾಲಿಕೆಗಳಲ್ಲಿ ಮೂಲಸೌಕರ್ಯಗಳ ಅಭಿವೃದ್ಧಿಗೆ UIDF ಮೂಲಕ ೬೦೦ ಕೋಟಿ ಅನುದಾನ ಎಂದು ತಿಳಿಸಿದ್ದು ಪ್ರಸ್ತುತ ಸಾಲಿನಲ್ಲಿ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; ಕೈಗೊಂಡ ಕಾಮಗಾರಿಗಳು ಯಾವುವು ? (ವಿವರ ನೀಡುವುದು)

## ಕೋಲಾರ ನಗರದಲ್ಲಿ ಒಳಚರಂಡಿ ಕಾಮಗಾರಿಯನ್ನು ಅವೈಜ್ಞಾನಿಕವಾಗಿ ಮಾಡುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨ (೧೧೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ನಗರದಲ್ಲಿ ಈಗಾಗಲೇ ಕೈಗೊಳ್ಳಲಾಗಿರುವ ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು ಇವುಗಳನ್ನು ಸರಿಪಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಆ) ಈ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಒಳ ಚರಂಡಿಗಳು ತುಂಬಿ ಕೊಳಚೆ ನೀರು ರಸ್ತೆ

ಮೇಲೆ ಹರಿಯುತ್ತಿದ್ದು ಇದರಿಂದ ಪಟ್ಟಣದ ರಸ್ತೆಗಳಲ್ಲಿ ಕೊಳಚೆ ನೀರು ಹರಿದು ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪ್ರಭಾವ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದ ನಗರಸಭೆ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ನಗರದಲ್ಲಿ ಒಳಚರಂಡಿಯಿಂದ ಕೊಳಚೆ ನೀರು ತುಂಬಿ ರಸ್ತೆ ಮೇಲೆ ಹರಿಯುತ್ತಿರುವ ಮಾರ್ಗಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗುತ್ತಿರುವ ಉಪಕರ (ಸೆಸ್) ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩ (೧೧೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೂ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗಿರುವ ಆರೋಗ್ಯ ಉಪಕರ, ಗ್ರಂಥಾಲಯ ಉಪಕರ ಮತ್ತು ಭೀಕ್ಷಾಟನಾ ಉಪಕರಗಳ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಸಂಗ್ರಹಿಸಲಾಗಿರುವ ಸೆಸ್ ಹಣವನ್ನು ಸಂಬಂಧಪಟ್ಟ ಇಲಾಖೆಗಳಿಗೆ ವರ್ಗಾಯಿಸಲಾಗಿದೆಯೇ ; (ಸಂಪೂರ್ಣ ವಿವರ ಒದಗಿಸುವುದು)

(ಇ) ಈ ರೀತಿ ಸಂಗ್ರಹಿಸಲಾದ ಉಪಕರವನ್ನು ಯಾವ ಯಾವ ಕಾರ್ಯಗಳಿಗೆ ಎಷ್ಟೆಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ೫ ವರ್ಷದಿಂದ ಸ್ಥಳೀಯ ಸಂಸ್ಥೆಗಳು ರೂ.೫೦೪.೦೦ ಕೋಟಿ ಆರೋಗ್ಯ ಸೆಸ್ ರೂ.೫೪.೦೦ ಕೋಟಿ ಗ್ರಂಥಾಲಯ ಉಪಕರ ಮತ್ತು ರೂ. ೩೦.೦೦ ಕೋಟಿ ಭಿಕ್ಷಾಟನಾ ಸೆಸ್ ಹಣವನ್ನು ಇದುವರೆಗೂ ಸಂಬಂಧಪಟ್ಟ ಇಲಾಖೆಗಳ ಖಾತೆಗೆ ವರ್ಗಾಯಿಸಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ಹಾಗೂ ಇದು ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗುವುದಿಲ್ಲವೇ ?

## ವಿಜಯಪುರ ಜಿಲ್ಲೆಯಲ್ಲಿ ಅತೀ ಹೆಚ್ಚು ಮಳೆಗೆ ತೋಟಗಾರಿಕೆ ಬೆಳೆ ಹಾನಿಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪ (೧೧೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಈ ವರ್ಷ ಅಕಾಲಿಕ ಮತ್ತು ವಾಡಿಕೆಗಿಂತ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಸಾಕಷ್ಟು ದ್ರಾಕ್ಷಿ ಗಿಡಗಳು ನಾಶವಾಗಿ ಇಳುವರಿ ಕುಂಠಿತದಿಂದ ದ್ರಾಕ್ಷಿ ಬೆಳೆಗಾರರು ಆರ್ಥಿಕವಾಗಿ ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅತ್ಯಧಿಕ ಮಳೆ ಸುರಿದ ಹಿನ್ನಲೆಯಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ದ್ರಾಕ್ಷಿ ಗಿಡಗಳು ಹಾನಿಗೊಳಗಾಗಿವೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ದ್ರಾಕ್ಷಿಗೆ ಕೊಳೆರೋಗ ಹಾಗೂ ಇತರೆ ರೋಗಗಳು ವ್ಯಾಪಕವಾಗಿ ಹರಡಿ ಶೇ.೭೦ ಕ್ಕಿಂತಲೂ ಅಧಿಕ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದ್ದು, ಈ ಸಂಬಂಧ ವೈಜ್ಞಾನಿಕವಾದ ಸರ್ವೆ ಮಾಡಿ ದ್ರಾಕ್ಷಿ ಬೆಳೆಗಾರರಿಗೆ ಸೂಕ್ತ ಹಾಗೂ ಅರ್ಹ ಮೊತ್ತದ ಪರಿಹಾರವನ್ನು ಈಗಾಗಲೇ ನೀಡಲಾಗಿದೆಯೇ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ನೀಡಿದ್ದಲ್ಲಿ, ಜಿಲ್ಲೆಯಲ್ಲಿ ಒಟ್ಟು ಎಷ್ಟು ಪ್ರಮಾಣದಲ್ಲಿ ಬೆಳೆ ಹಾನಿ ಸಂಭವಿಸಿದೆ ಹಾಗೂ ವಿತರಿಸಿರುವ ಪರಿಹಾರದ ಮೊತ್ತವೆಷ್ಟು ; ವಿತರಣೆ ಮಾಡುವುದು ಇನ್ನೂ ಬಾಕಿ ಇದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೂರ್ಣ ಪ್ರಮಾಣದಲ್ಲಿ ಪರಿಹಾರ ವಿತರಣೆ ಮಾಡಲಾಗುವುದು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಉ) ದ್ರಾಕ್ಷಿ ಗಿಡ ನಾಶವಾಗಿರುವ ರೈತರಿಗೆ ಮರು ನಾಟಿ ಮಾಡಲು ಸಹಾಯ ಧನ ನೀಡಬೇಕು ಎಂಬ ಬೇಡಿಕೆ ತೀವ್ರವಾಗಿದ್ದು, ಸರ್ಕಾರ ಈ ಕುರಿತು ಸೂಕ್ತ ಕ್ರಮ ವಹಿಸಿದೆಯೇ ; ಹಾಳಾಗಿರುವ ದ್ರಾಕ್ಷಿ ತೋಟಗಳ ಪುನಃಶ್ಚೇತನಕ್ಕೆ ಸರ್ಕಾರ ಪೂರಕ ಕ್ರಮಗಳನ್ನು ಕೈಗೊಂಡಿದೆಯೇ ; (ವಿವರ ನೀಡುವುದು)

(ಊ) ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಯನ್ನು ಬೆಳೆಯಲು ಸರ್ಕಾರ ನೀಡುತ್ತಿರುವ ಪ್ರೋತ್ಸಾಹದ ಯೋಜನೆಗಳು ಯಾವುವು ; ಯಾವ ಯಾವ ಬೆಳೆಗಳಿಗೆ ಎಷ್ಟು ಸಹಾಯಧನ ನೀಡಲಾಗುತ್ತಿದೆ ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ದೇವರ ಹಿಪ್ಪರಗಿ ತಾಲ್ಲೂಕಿನಲ್ಲಿ ಕೃಷಿ ಉತ್ಪನ್ನಗಳ ಮಾರುಕಟ್ಟೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫ (೧೧೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇವರ ಹಿಪ್ಪರಗಿ ತಾಲ್ಲೂಕು ಕೇಂದ್ರವಾಗಿದ್ದು, ಕೃಷಿ ಉತ್ಪನ್ನಗಳ ಮಾರುಕಟ್ಟೆಗಾಗಿ ಇನ್ನೂ ಸಿಂದಗಿ ಹಾಗೂ ವಿಜಯಪುರವನ್ನು ಅವಲಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದೇವರ ಹಿಪ್ಪರಗಿಯಲ್ಲಿ ಪ್ರತ್ಯೇಕ ಕೃಷಿ ಉತ್ಪನ್ನ ಮಾರುಕಟ್ಟೆ ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಪ್ರತ್ಯೇಕ ಕೃಷಿ ಉತ್ಪನ್ನ ಮಾರುಕಟ್ಟೆ ಸ್ಥಾಪಿಸಲಾಗುವುದು ; ದೇವರ ಹಿಪ್ಪರಗಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಯ ಸ್ಥಾಪನೆಗೆ ಜಾಗ ಇದೆಯೇ ಹಾಗೂ ಇದ್ದರೆ, ಎಷ್ಟು ಜಾಗವಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿಯನ್ನು ಮೇಲ್ದರ್ಜೆಗೆ ಏರಿಸುವ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬ (೧೨೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮಪಂಚಾಯಿತಿಯನ್ನು "ಪಟ್ಟಣ ಪಂಚಾಯತ್"ಯನ್ನಾಗಿ

ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಕಾಲಮಿತಿಯಲ್ಲಿ ಮಾಡಲಾಗುವುದು ;

(ಆ) ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಜಾಲವಾದ ಗ್ರಾಮದಲ್ಲಿ ಪ್ರಸ್ತುತವಿರುವ ಜನ ಸಂಖ್ಯೆ ಎಷ್ಟು? (ಗಂಡು-ಹೆಣ್ಣು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

## ವಿಜಯಪುರ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಸ್ಥಾಪಿಸುವ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೯೭ (೧೨೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯ ಯುವಕ-ಯುವತಿಯರು ನಿರುದ್ಯೋಗ ಸಮಸ್ಯೆಯಿಂದ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಗೋವಾ, ಮಹಾರಾಷ್ಟ್ರ ಮುಂತಾದ ಸ್ಥಳಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿಜಯಪುರ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಅನ್ನು ಸ್ಥಾಪಿಸಿದ್ದಲ್ಲಿ ಹಲವಾರು ಯುವಕ-ಯುವತಿಯರಿಗೆ ಉದ್ಯೋಗಾವಕಾಶ ದೊರಕುವುದು ಸರ್ಕಾರದ ಗಮನದಲ್ಲಿ ಇದೆಯೇ ;

(ಇ) ಇದ್ದಲ್ಲಿ, ವಿಜಯಪುರ ಜಿಲ್ಲೆಯಲ್ಲಿ ಪಾರ್ಕ್ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ವಿಜಯಪುರ ಜಿಲ್ಲೆಯಲ್ಲಿ ಸರ್ಕಾರದಿಂದ ಜವಳಿ ಪಾರ್ಕ್‌ಅನ್ನು ಸ್ಥಾಪಿಸಲಾಗುವುದು ?

## ಕಲಬುರಗಿ ನಗರದಲ್ಲಿನ ರಸ್ತೆ ಅಗಲೀಕರಣದ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮ (೦೨) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾಸ್ಟರ್ ಪ್ಲಾನ್‌ನಲ್ಲಿ ಕಲಬುರಗಿ ನಗರದ ಗೋವಾ ಹೋಟೆಲ್‌ದಿಂದ ಸುಭಾಷ ಚೌಕವರೆಗಿನ ರಸ್ತೆ ಅಗಲೀಕರಣದ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದರೆ, ಯಾವಾಗ ಪೂರ್ಣಗೊಳಿಸಲಾಗುವುದು ಮತ್ತು ಅದಕ್ಕೆ ತಗಲುವ ಮೊತ್ತವೆಷ್ಟು ;

(ಇ) ಇಲ್ಲದಿದ್ದರೆ, ಅಗಲೀಕರಣಗೊಳಿಸಲು ಸರ್ಕಾರ ಮುಂದಾಗುವುದೇ ?

## ರಾಜ್ಯದಲ್ಲಿ ಸಾಮೂಹಿಕ ಉದ್ಯೋಗ ಸೃಷ್ಠಿಸಲು ಕ್ರಿಯಾ ಯೋಜನೆ ರೂಪಿಸುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೯ (೩೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾಮೂಹಿಕ ಉದ್ಯೋಗ ಸೃಷ್ಠಿಸಲು ಮತ್ತು ಪ್ರಾದೇಶಿಕ ಅಸಮಾನತೆಯನ್ನು ಕಡಿಮೆ ಮಾಡಲು ಸರ್ಕಾರ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿದೆಯೇ ;

(ಆ) ರಫ್ತು ಸುಗಮಗೊಳಿಸುವಿಕೆಗಾಗಿ ಬೆಂಗಳೂರು ಮತ್ತು ಕರ್ನಾಟಕದ ಕರಾವಳಿ ಬಂದರುಗಳೊಂದಿಗೆ ಗ್ರಾಮೀಣ ಉತ್ಪಾದನಾ

ಕೇಂದ್ರಗಳನ್ನು ಸಂಪರ್ಕಿಸಲು ಹೊಸ ಕೈಗಾರಿಕಾ ಕಾರಿಡಾರ್‌ಗಳನ್ನು ಸ್ಥಾಪಿಸಲಾಗಿದೆಯೇ ;

(ಇ) ಎಲೆಕ್ಟ್ರಾನಿಕ್ಸ್, ಆಟೋ ಮತ್ತು ಚಿಪ್ ವಿನ್ಯಾಸ ಕೈಗಾರಿಕೆಗಳಂತಹ ಹೆಚ್ಚಿನ ಮೌಲ್ಯದ ಉತ್ಪಾದನಾ ವಲಯಗಳನ್ನು ಆಕರ್ಷಿಸಲು ಯಾವುದೇ ರೀತಿ ಪ್ರೋತ್ಸಾಹ ಅಥವಾ ಭೂ ಸಬ್ಸಿಡಿಗಳನ್ನು ನೀಡಲಾಗುತ್ತಿದೆಯೇ ;

(ಈ) ಇಲಾಖೆಯು ಪ್ರಮುಖ ಉತ್ಪಾದನಾ ಕ್ಲಸ್ಟರ್‌ಗಳಿಗೆ ನಿರ್ದಿಷ್ಟ ರಫ್ತು ಗುರಿಗಳನ್ನು ನಿಗದಿಪಡಿಸಿದೆಯೇ ಮತ್ತು ಜಾಗತಿಕ ಪೂರೈಕೆ ಸರಪಳಿಗಳೊಂದಿಗೆ ಸಂಯೋಜಿಸಲು ಕ್ರಮಗಳನ್ನು ತೆಗೆದುಕೊಂಡಿದೆಯೇ ;

(ಉ) ಕರ್ನಾಟಕದಾದ್ಯಂತ MSME ಗಳನ್ನು ಬಲಪಡಿಸಲು ಮತ್ತು ಸಣ್ಣ ಉತ್ಪಾದಕರಿಗೆ ಸುಲಭವಾದ ಸಾಲ ಪ್ರವೇಶ, ಮಾರುಕಟ್ಟೆ ಮತ್ತು ತಂತ್ರಜ್ಞಾನ ಅಳವಡಿಕೆಗೆ ಅನುಕೂಲವಾಗುವಂತೆ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ?

## ಸ್ಮಾರ್ಟ್ ಸಿಟಿ ಯೋಜನೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೧೦೦ (೪೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಮಟ್ಟದ ಸ್ಮಾರ್ಟ್ ಟೌನ್ಸ್ ಮಿಷನ್ ಅಡಿಯಲ್ಲಿ ಕರ್ನಾಟಕದಾದ್ಯಂತ ಸುಮಾರು ೨೦೦ ಪಟ್ಟಣಗಳನ್ನು ಯೋಜಿತ ನಗರಾಭಿವೃದ್ಧಿಗಾಗಿ ಸರ್ಕಾರ ಗುರುತಿಸಿದೆಯೇ ;

(ಆ) ಈ ಉದಯೋನ್ಮುಖ ನಗರ ಕೇಂದ್ರಗಳಲ್ಲಿ ಕಾರ್ಮಿಕ–ತೀವ್ರ ಕೈಗಾರಿಕೆಗಳು, ಸುಸ್ಥಿರ ಮೂಲಸೌಕರ್ಯ ಮತ್ತು ಸಾರ್ವಜನಿಕ ಸೇವೆಗಳನ್ನು ಸಂಯೋಜಿಸಲು ರಚನಾತ್ಮಕ ಯೋಜನೆ ಇದೆಯೇ ;

(ಇ) ಕರ್ನಾಟಕದಲ್ಲಿ ಸ್ಮಾರ್ಟ್ ಸಿಟಿ ಕಾರ್ಯಕ್ರಮವು ಘನತ್ಯಾಜ್ಯ ನಿರ್ವಹಣೆ, ಶುದ್ಧ ಇಂಧನ, ಇವಿ ಸಾರಿಗೆ ಮತ್ತು ಡಿಜಿಟಲ್ ಆಡಳಿತಕ್ಕಾಗಿ ಭವಿಷ್ಯದ ಯೋಜನೆಯನ್ನು ಒಳಗೊಂಡಿದೆಯೇ ;

(ಈ) ಬೆಂಗಳೂರಿನ ಹೊರಗಡೆ ಏಕರೂಪದ ನಗರಾಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಮತ್ತು ರಾಜಧಾನಿ ನಗರದ ಮೇಲೆ ವಲಸೆ ಒತ್ತಡವನ್ನು ಕಡಿಮೆ ಮಾಡಲು ಯಾವ ಪ್ರಯತ್ನಗಳನ್ನು ಮಾಡಲಾಗುತ್ತಿದೆ ;

(ಉ) ಜನಸಂಖ್ಯೆಯ ಒಳಹರಿವು ಮತ್ತು ಮೂಲಸೌಕರ್ಯ ಅಗತ್ಯಗಳನ್ನು ನಿರ್ವಹಿಸಲು ಎಲ್ಲಾ ಶ್ರೇಣಿ–೨ ಪಟ್ಟಣಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ?

## ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಿಂದ ಸರ್ಕಾರ ಸಂಗ್ರಹ ಮೊತ್ತದ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೦೧ (೪೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಿಂದ ಸರ್ಕಾರ ಸಂಗ್ರಹ ಮಾಡಿರುವ ಮೊತ್ತ ಎಷ್ಟು ; (ಜಿಲ್ಲಾವಾರು ಮೂರು ವರ್ಷಗಳ ಮಾಹಿತಿ ನೀಡುವುದು)

(ಆ) ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಿಂದ ಕ್ಷೇತ್ರವಾರು ಹಂಚಿಕೆ ಮಾಡಲಾಗಿದೆಯೇ ; ಮಾಡಿದಲ್ಲಿ, ಕ್ಷೇತ್ರವಾರು ಮಾಹಿತಿ ನೀಡುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗಣಿಗಾರಿಕೆಯಿಂದ ನೇರವಾಗಿ ಮತ್ತು ಪರೋಕ್ಷವಾಗಿ ಬಾಧಿತ ಪ್ರದೇಶಗಳಿಗೆ ಆರೋಗ್ಯ, ಶಿಕ್ಷಣ ಮತ್ತು ಇತರೆ ಮೂಲಭೂತ ಸೌಲಭ್ಯ ಕಲ್ಪಿಸಲು ಕಳೆದ ೩ ವರ್ಷಗಳಲ್ಲಿ ಎಷ್ಟು ಅನುದಾನ ಬಳಕೆ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿಯ ಕಪನೂರ ವ್ಯಾಪ್ತಿಯ ಸಿದ್ಧಾರೂಢ ಕಾಲೋನಿಯ ನಿವಾಸಿಗಳ ಸಮಸ್ಯೆಯ ಬಗ್ಗೆ

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨ (೧೦೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಕಪನೂರ ಗ್ರಾಮದ ವ್ಯಾಪ್ತಿಯ ಸಿದ್ಧಾರೂಢ ಕಾಲೋನಿಯ ಸರ್ವೆ ನಂ. ೧೭೪ ಮತ್ತು ೧೭೫ ರಲ್ಲಿ ಇರುವ ೩೫೦ಕ್ಕೂ ಹೆಚ್ಚು ಮನೆಗಳು ಹಾಗೂ ೨೦೦೦ಕ್ಕೂ ಹೆಚ್ಚಿನ ಜನಸಂಖ್ಯೆ ಹೊಂದಿ ಕಳೆದ ೩೦ ವರ್ಷಗಳಿಂದ ಅತ್ತ ಮಹಾನಗರ ಪಾಲಿಕೆ ವ್ಯಾಪ್ತಿಗೂ ಸೇರಿಸದೆ ಇತ್ತ ತಾಜಸುಲ್ತಾನಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಗೂ ಸೇರಿದೆ ಇಲ್ಲಿನ ನಿವಾಸಿಗಳನ್ನು ಅತಂತ್ರ ಸ್ಥಿತಿಯಲ್ಲಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಿದ್ಧಾರೂಢ ಕಾಲೋನಿಯ ನಿವಾಸಿಗಳು ಚುನಾವಣೆ ಸಮಯದಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಗೆ ಮತದಾನ ಮಾಡುತ್ತಾರೆಯೇ

ಅಥವಾ ಕಲಬುರಗಿ ಮಹಾನಗರ ಪಾಲಿಕೆಯ ಚುನಾವಣೆಗೆ ಮತದಾನ ಮಾಡುತ್ತಾರೆಯೇ ; (ವಿವರ ನೀಡುವುದು)

(ಇ) ಸದರಿ ಕಾಲೋನಿಯ ನಿವಾಸಿಗಳು ಮಹಾನಗರ ಪಾಲಿಕೆಯ ಚುನಾವಣೆಯಲ್ಲಿ ಮತದಾನ ಮಾಡಿದ್ದಲ್ಲಿ ಸದರಿ ಕಾಲೋನಿಯನ್ನು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸೇರಿಸಿಕೊಂಡು ಆಸ್ತಿಗಳಿಗೆ ಎ, ಬಿ ಖಾತಾ ನೀಡಿ ರಸ್ತೆ, ಕುಡಿಯುವ ನೀರು ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳನ್ನು ನೀಡಲು ಸರ್ಕಾರಕ್ಕೆ ಇರುವ ತಡೆಗಳೇನು ; ಸದರಿ ಕಾಲೋನಿಯ ನಿವಾಸಿಗಳ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೆ ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕದ ವಿಭಾಗೀಯ ಕೇಂದ್ರವಾದ ಕಲಬುರಗಿಯ ನೈರ್ಮಲ್ಯದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩ (೧೦೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ವಿಭಾಗೀಯ ಕೇಂದ್ರವಾದ ಕಲಬುರಗಿ ನಗರದಲ್ಲಿ ನೈರ್ಮಲ್ಯ ಕಾಪಾಡಲು ಜನನಿಬಿಡ ಸ್ಥಳಗಳಲ್ಲಿ ಎಷ್ಟು ಶೌಚಾಲಯ ಮತ್ತು ಮೂತ್ರಾಲಯಗಳನ್ನು ನಿರ್ಮಿಸಲಾಗಿದೆ ; ಇವುಗಳ ನಿರ್ವಹಣೆಯ ಜವಾಬ್ದಾರಿಯನ್ನು ಯಾವ ಏಜೆನ್ಸಿಗೆ ವಹಿಸಲಾಗಿದೆ ಹಾಗೂ ನಿರ್ವಹಣೆಗೆ ತಗಲುವ ವಾರ್ಷಿಕ ವೆಚ್ಚ ಎಷ್ಟು ;

(ಆ) ನಗರದ ಕೇಂದ್ರ ಬಸ್ ನಿಲ್ದಾಣದಿಂದ ಸೂಪರ್ ಮಾರ್ಕೆಟ್ ಮಾರ್ಗದ ರಾಷ್ಟ್ರಪತಿ ವೃತ್ತ, ಮೋಹನ್ ಲಾಡ್ಜ್, ಸರ್ದಾರ್ ವಲ್ಲಭಾಯಿ ಪಟೇಲ್ ವೃತ್ತ ಸೇರಿದಂತೆ ನೂರಾರು ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಬಸ್‌ಗಾಗಿ ಕಾಯುವ ಜಯದೇವ ಆಸ್ಪತ್ರೆಯ ಎದುರು ಶೌಚಾಲಯ ಮತ್ತು ಮೂತ್ರಾಲಾಯಗಳಿಲ್ಲದಿರುವುದು ಹಾಗೂ ಇದ್ದರೂ ಅನೈರ್ಮಲ್ಯ ಹೆಚ್ಚಾಗಿದ್ದು ಬೀಗ ಹಾಕಿರುವುದರಿಂದ ಸಾರ್ವಜನಿಕರು ನಿಸರ್ಗ ಕರೆಗಳಿಗೆ ಪರದಾಡುವಂತಾಗಿದ್ದು, ಅಗತ್ಯವಿರುವ ಸ್ಥಳಗಳಲ್ಲಿ ಶೌಚಾಲಯ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ ? (ವಿವರ ನೀಡುವುದು)

## ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರದಡಿ ಬರುವ ಬಡಾವಣೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪ (೧೦೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಕಳೆದ ೫ ವರ್ಷಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಬಡಾವಣೆ ನಿರ್ಮಾಣ ಮಾಡಲು ಎಷ್ಟು ಎಕರೆ ಜಾಗಗಳನ್ನು ಭೂ–ಸ್ವಾಧೀನ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಭೂ–ಸ್ವಾದೀನ ಮಾಡಿಕೊಂಡ ನಂತರ ಬಡಾವಣೆಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಿ ಅಭಿವೃದ್ಧಿ ಪಡಿಸಲಾಗಿದೆಯೇ ; ಅಭಿವೃದ್ಧಿಗೊಂಡ ಬಡಾವಣೆಗಳನ್ನು ಹಂಚಿಕೆ ಮಾಡಲು ಇರುವ ಮಾನದಂಡಗಳಾವುವು ;

(ಈ) ಕಳೆದ ೨ ವರ್ಷಗಳಲ್ಲಿ ಅಭಿವೃದ್ಧಿಗೊಂಡ ಬಡಾವಣೆಗಳ ನಿವೇಶನಗಳನ್ನು ಹಂಚಿಕೆ ಮಾಡಲು ಎಷ್ಟು ಅರ್ಜಿಗಳನ್ನು ಆಹ್ವಾನಿಸಲಾಗಿದೆ ; ಸ್ವೀಕೃತಗೊಂಡ ಅರ್ಜಿಗಳ ಪೈಕಿ ಎಷ್ಟು ಅರ್ಜಿಗಳಿಗೆ ನಿವೇಶನ ನೀಡಲಾಗಿದೆ ?

## ದಾವಣಗೆರೆ ಮಹಾನಗರ ಪಾಲಿಕೆ ಅಡಿಯಲ್ಲಿರುವ ಅಂಗಡಿ ಮಳಿಗೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೫ (೧೦೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಮಹಾನಗರ ಪಾಲಿಕೆ ವತಿಯಿಂದ ನಿರ್ಮಿಸಿರುವ ಅಂಗಡಿ ಮಳಿಗೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸದರಿ ಅಂಗಡಿ ಮಳಿಗೆಗಳನ್ನು ನಿಯಮಾನುಸಾರ ಹಂಚಿಕೆ ಮಾಡಲು ಇರುವ ಮಾನವ ಮಾನದಂಡಗಳಾವುವು ;

(ಇ) ಸದರಿ ಅಂಗಡಿ–ಮಳಿಗೆಗಳನ್ನು ನಿಯಮಾನುಸಾರ ಬಾಡಿಗೆದಾರರಿಗೆ ಹಂಚಿಕೆ ಮಾಡಲಾಗಿದೆಯೇ ; (ಪೂರ್ಣ ವಿವರ ಒದಗಿಸುವುದು)

(ಈ) ಅಂಗಡಿ ಮಳಿಗೆಗಳ ಹರಾಜು ಪ್ರಕ್ರಿಯೆ ಯಾವ ಸಾಲಿನಲ್ಲಿ ನಡೆದಿದೆ ; ಅಂಗಡಿ ಮಳಿಗೆಗಳಿಂದ ವಾರ್ಷಿಕವಾಗಿ ಸಂಗ್ರಹವಾಗುತ್ತಿರುವ ಆದಾಯ ಎಷ್ಟು ?

# ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆಯಿಂದ ಸರ್ಕಾರಿ ಜಮೀನನ್ನು ಹಂಚಿಕೆ ಮಾಡಿರುವ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬ (೧೨೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧–೨೨, ೨೦೨೨–೨೩, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಇಲಾಖೆಯಿಂದ ಸರ್ಕಾರಿ ಜಮೀನು/ಸಿಎ ಸೈಟ್/ ಜಾಗವನ್ನು ರಾಜಕೀಯ ಪಕ್ಷಗಳಿಗೆ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಸ್ಥಳದಲ್ಲಿ ಎಷ್ಟು ಜಮೀನನ್ನು ಯಾವ ರಾಜಕೀಯ ಪಕ್ಷಕ್ಕೆ ನೀಡಲಾಗಿದೆ ; ನೀಡಿರುವ ಜಮೀನಿನ ಮೌಲ್ಯವೆಷ್ಟು ;

(ಆ) ಸದರಿ ಜಮೀನುಗಳನ್ನು ನೀಡಲು ಸರ್ಕಾರ ಅನುಸರಿಸಿರುವ ಕ್ರಮಗಳೇನು ; ಯಾವ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆ ; ಯಾವ ಉದ್ದೇಶಕ್ಕಾಗಿ ಸರ್ಕಾರಿ ಜಮೀನನ್ನು ರಾಜಕೀಯ ಪಕ್ಷಗಳಿಗೆ/ಕಛೇರಿಗಳಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಒಂದು ವೇಳೆ ಸರ್ಕಾರಿ ಜಮೀನು/ಸಿಎ ಸೈಟ್/ಜಾಗವನ್ನು ರಾಜಕೀಯ ಪಕ್ಷಗಳಿಗೆ/ಕಛೇರಿಗಳಿಗೆ ನೀಡಿದ್ದರೆ ಯಾವ ನಿಯಮಯಡಿ ನೀಡಲಾಗಿರುತ್ತದೆ ; ಇದಕ್ಕೆ ಅನುಸರಿಸಿದ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಪುರಸಭೆಗಳು ಮತ್ತು ಸ್ಥಳೀಯ ಸಂಸ್ಥೆಗಳಿಂದ ರಾಜಕೀಯ ಪಕ್ಷಗಳಿಗೆ ಸರ್ಕಾರಿ ಜಮೀನನ್ನು ಹಂಚಿಕೆ ಮಾಡಿರುವ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭ (೧೨೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧–೨೨, ೨೦೨೨–೨೩, ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಇಲಾಖೆಯಿಂದ ಸರ್ಕಾರಿ ಜಮೀನು/ ಸಿಎ ಸೈಟ್/ಜಾಗವನ್ನು ರಾಜಕೀಯ ಪಕ್ಷಗಳಿಗೆ/ಕಛೇರಿಗಳಿಗೆ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಸ್ಥಳದಲ್ಲಿ, ಎಷ್ಟು ಜಮೀನನ್ನು ಯಾವ ರಾಜಕೀಯ ಪಕ್ಷಕ್ಕೆ ನೀಡಲಾಗಿದೆ ; ನೀಡಿರುವ ಜಮೀನಿನ ಮೌಲ್ಯವೆಷ್ಟು ;

(ಆ) ಸದರಿ ಜಮೀನುಗಳನ್ನು ನೀಡಲು ಸರ್ಕಾರ ಅನುಸರಿಸಿರುವ ಕ್ರಮಗಳೇನು ; ಯಾವ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆ ; ಯಾವ ಉದ್ದೇಶಕ್ಕಾಗಿ ಸರ್ಕಾರಿ ಜಮೀನನ್ನು ರಾಜಕೀಯ ಪಕ್ಷಗಳಿಗೆ/ ಕಛೇರಿಗಳಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಒಂದು ವೇಳೆ ರಾಜಕೀಯ ಪಕ್ಷಗಳಿಗೆ ಸರ್ಕಾರಿ ಜಮೀನು / ಸಿಎ ಸೈಟ್ / ಜಾಗವನ್ನು ರಾಜಕೀಯ ಪಕ್ಷಗಳಿಗೆ/ ಕಛೇರಿಗಳಿಗೆ ನೀಡಿದ್ದರೆ, ಯಾವ ನಿಯಮಗಳಡಿ ನೀಡಲಾಗಿರುತ್ತದೆ ?

# ರಾಜಕೀಯ ಪಕ್ಷಗಳಿಗೆ ಸರ್ಕಾರಿ ಜಮೀನನ್ನು ಹಂಚಿಕೆ ಮಾಡಿರುವ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮ (೧೨೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧–೨೨, ೨೦೨೨–೨೩, ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ಇಲಾಖೆಯಿಂದ ಸರ್ಕಾರಿ ಜಮೀನು/ ಸಿಎ ಸೈಟ್/ಜಾಗವನ್ನು ರಾಜಕೀಯ ಪಕ್ಷಗಳಿಗೆ/ಕಛೇರಿಗಳಿಗೆ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಸ್ಥಳದಲ್ಲಿ, ಎಷ್ಟು ಜಮೀನನ್ನು ಯಾವ ರಾಜಕೀಯ ಪಕ್ಷಕ್ಕೆ ನೀಡಲಾಗಿದೆ ; ನೀಡಿರುವ ಜಮೀನಿನ ಮೌಲ್ಯವೆಷ್ಟು ;

(ಆ) ಸದರಿ ಜಮೀನುಗಳನ್ನು ನೀಡಲು ಸರ್ಕಾರ ಅನುಸರಿಸಿರುವ ಕ್ರಮಗಳೇನು ; ಯಾವ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆ ; ಯಾವ ಉದ್ದೇಶಕ್ಕಾಗಿ ಸರ್ಕಾರಿ ಜಮೀನನ್ನು ರಾಜಕೀಯ ಪಕ್ಷಗಳಿಗೆ/ ಕಛೇರಿಗಳಿಗೆ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಒಂದು ವೇಳೆ ರಾಜಕೀಯ ಪಕ್ಷಗಳಿಗೆ ಸರ್ಕಾರಿ ಜಮೀನು / ಸಿಎ ಸೈಟ್ / ಜಾಗವನ್ನು ರಾಜಕೀಯ ಪಕ್ಷಗಳಿಗೆ/ ಕಛೇರಿಗಳಿಗೆ ನೀಡಿದ್ದರೆ, ಯಾವ ನಿಯಮಗಳಡಿ ನೀಡಲಾಗಿರುತ್ತದೆ ; ಅದಕ್ಕೆ ಅನುಸರಿಸಿದ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O150/500 ಪ್ರತಿಗಳು/21–01–2026